**ಸಂಪುಟ:** 05 **ಸಂಚಿಕೆ:** 252 **ಪುಟಗಳು:** 08 **ಬುಧವಾರ** 26 **ನವೆಂಬರ್** 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಸಮರ್ಪಣೆಯೇ ಆಧ್ಯಾತ್ಮಿಕತೆಯ ರಹಸ್ಯ. ನಿಮ್ಮನ್ನು ನೀವು ಆಧ್ಯಾತ್ಮಿಕ ಮಾರ್ಗದಲ್ಲಿ ಸಮರ್ಪಣೆ ಮಾಡಿಕೊಂಡಷ್ಟು ಅಭಿವೃದ್ಧಿಯು ನಿಮಗೆ ಸಾಥ್ ನೀಡುವುದು.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಆಣೆಕಟ್ಟೆಗೆ ಮುತ್ತಿಗೆ

• ಉದಯವಾಹಿನಿ, ಬೆಂಗಳೂರು

ರೈತರಿಗೆ ಬೇಕಿರೋದು ನಿಮ್ಮ ಗ್ಯಾರಂಟಿಗಳಲ್ಲ, ಅವರಿಗೆ ನೀರು ಕೊಡಿ ಅವರೇ ನಿಮ್ಮ ಗ್ಯಾರಂಟಿಗಳಿಗೆ ಹಣ ಕೊಡ್ತಾರೆ ಎಂದು ಸರ್ಕಾರದ ವಿರುದ್ಧ ನಿಖಿಲ್ ಕುಮಾರಸ್ವಾಮಿ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಸಿಂಧನೂರಿನ ಎಪಿಎಂಸಿ ಆವರಣದಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ 4 ಜಿಲ್ಲೆಯ ರೈತರ ಬದುಕು ಬೀದಿಗೆ ಬಂದಿದೆ. ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ ಜಿಲ್ಲೆಯ ರೈತರು ಸಂಕಷ್ಟದಲ್ಲಿದ್ದಾರೆ. ಈ ಸರ್ಕಾರಕ್ಕೆ ಮಾನ ಮರ್ಯಾದೆ ಇಲ್ಲ. ಇದು ದಪ್ಪ ಚರ್ಮದ ಸರ್ಕಾರ. ರೈತರಿಗೆ ಸೂಕ್ತ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರಕ್ಕೆ 8 ರಿಂದ 10 ದಿನಗಳ ಕಾಲ ಗಡುವು ನೀಡುತಿದ್ದೇವೆ. ಒಂದು ವೇಳೆ ನಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೇ ತುಂಗಭದ್ರಾ ಆಣೆಕಟ್ಟಿಗೆ ಮುತ್ತಿಗೆ ಹಾಕುತ್ತೇವೆ ಎಂದು ನಿಖಿಲ್ ಅವರು ಎಚ್ಚರಿಕೆ ನೀಡಿದರು. ತುಂಗಭದ್ರಾ ನದಿ ಈ ಭಾಗದ ಜೀವನಾಡಿ. ರೈತರು ಭೂಮಿ ತಾಯಿಯನ್ನ ಮಾತ್ರ ನಂಬಿ ಬದುಕುತ್ತಿದ್ದಾನೆ. ಈ ಸರ್ಕಾರ ರೈತನ ಬದುಕು ಕಸಿದುಕೊಳ್ಳಲು ಮುಂದಾಗಿದೆ. ಡ್ಯಾಂನಲ್ಲಿ 70 ಟಿಎಂಸಿ ನೀರಿದೆ. ಕುಮಾರಣ್ಣ ಸಿಎಂ ಆಗಿದ್ದ ವೇಳೆ 70 ಟಿಎಂಸಿಗೂ ಕಡಿಮೆ ನೀರು ಇತ್ತು. ಆಗ ರೈತರ ಎರಡು ಬೆಳೆಗೆ ನೀರು ಕೊಟ್ಟರು ಎಂದು ಹೇಳಿದರು.

## 2028ರವರೆಗೆ ಸಿದ್ದರಾಮಯ್ಯನೇ ಸಿಎಂ: ಜಮೀರ್ ಭರ್ಜರಿ ಬ್ಯಾಟಿಂಗ್

• ಉದಯವಾಹಿನಿ, ಬೆಂಗಳೂರು

2028 ರವರೆಗೆ ಸಿದ್ದರಾಮಯ್ಯನೇ ಸಿಎಂ ಆಗಿರುತ್ತಾರೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಭರ್ಜರಿ ಬ್ಯಾಟಿಂಗ್ ಮಾಡಿದ್ದಾರೆ. ಬೆಂಗಳೂರಿನಲ್ಲಿ ಮಂಗಳವಾರ ಮಾತನಾಡಿದ ಅವರು, ಸಂಪುಟ ಪುನಾರಚನೆಯ ಸಾಧ್ಯತೆ ಇರುವ ಕಾರಣಕ್ಕಾಗಿ ಶಾಸಕರು ದೆಹಲಿ ಪ್ರವಾಸ ಮಾಡುತ್ತಿದ್ದಾರೆ ಎಂದರು. ಸಂಪುಟ ಪುನಾರಚನೆ ಸಾಧ್ಯತೆ ಇದೆ. ಹಾಗಾಗಿ ಶಾಸಕರಿಗೆ ಮಂತ್ರಿಯಾಗಬೇಕೆಂಬ ಆಸೆಯಿದೆ. ಎಲ್ಲರಿಗೂ ಒಂದು ಅವಕಾಶ ಬೇಕು ಅಂತ ಇದೆ. ನಾನು ಮೊದಲ ಬಾರಿ ಎಂಎಲ್ ಎ ಆಗಿದೆ. ಆಗಲೇ ನಾನು ಸಚಿವನಾಗಿದ್ದೆ. ಮೊದಲ ಬಾರಿ ಶಾಸಕರಾದವರು ಸಚಿವ ಆಗಬಾರದು ಅಂತ ಏನಿಲ್ಲ ಎಂದು ಸಮರ್ಥಿಸಿಕೊಂಡರು. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ. ಮುಖ್ಯಮಂತ್ರಿ ಕುರ್ಚಿಯಲ್ಲಿ ಸಿದ್ದರಾಮಯ್ಯ ಅವರು ಇರ್ತಾರೆ. 2028 ರವರೆಗೆ ಸಿದ್ದರಾಮಯ್ಯ ಅವರೇ ಸಿಎಂ ಆಗಿ ಇರ್ತಾರೆ. ನಾವೆಲ್ಲರೂ ಹೈಕಮಾಂಡ್ ಮಾತು ಕೇಳೋರು. ಶೀಘ್ರದಲ್ಲೇ ಹೈಕಮಾಂಡ್ ಈ ಬಗ್ಗೆ ನಿರ್ಧಾರ ಕೈಗೊಳ್ಳಲಿದೆ ಎಂದರು.

## ಜಾಗತಿಕ ಸಾಮರ್ಥ್ಯ ಕೇಂದ್ರ ಸ್ಥಾಪನೆ ಸಚಿವ ಎಂ.ಬಿ.ಪಾಟೀಲ ಹೇಳಿಕೆ

• ಉದಯವಾಹಿನಿ, ಬೆಂಗಳೂರು


ಬ್ರಿಟನ್‌ನ ಎಸ್.ಸಿ.ಐ ಸೆಮಿಕಂಡಕ್ಟರ್ಸ್ ಕಂಪನಿ ಕರ್ನಾಟಕದಲ್ಲಿ 'ಜಾಗತಿಕ ಸಾಮರ್ಥ್ಯ ಕೇಂದ್ರ (ಜಿಸಿಸಿ)' ಸ್ಥಾಪಿಸುವ ಆಸಕ್ತಿ ತೋರಿದೆ. ಈ ಕುರಿತು ಮಾಹಿತಿ ನೀಡಿರುವ ಬ್ರಿಟನ್ ಪ್ರವಾಸದಲ್ಲಿರುವ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ, ರಾಜ್ಯದಲ್ಲಿ ಕಂಪನಿಯ ಬಂಡವಾಳ ಹೂಡಿಕೆ, ಭವಿಷ್ಯದ ಸಹಭಾಗಿತ್ವಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ರಾಜ್ಯ ಸರ್ಕಾರ ಭರವಸೆ ನೀಡಿದೆ. ಇದರಿಂದ ಕಂಪ್ಯೂಟರ್ ಸುರಕ್ಷತೆಗೆ ಅಗತ್ಯವಿರುವ ಅಂತರ್ಗತ ಸುರಕ್ಷೆಯ ಮೈಕ್ರೋ ಪ್ರೊಸೆಸರ್‌ಗಳ ತಯಾರಿಕೆ ಸ್ಥಳೀಯವಾಗಿ ಸಾಧ್ಯವಾಗಲಿದೆ ಎಂದಿದ್ದಾರೆ. ವಿಯರ್ ಗ್ರೂಪ್, ಲೇಟೋಸ್ ಡೇಟಾ ಸೆಂಟರ್, ಸ್ಯಾಮೋ ಹೋಲ್ಡಿಂಗ್ಸ್, ಎ.ಆರ್.ಎಂ. ಸೆಮಿಕಂಡಕ್ಟರ್ಸ್ ಕಂಪನಿಗಳ ಮುಖ್ಯಸ್ಥರೊಂದಿಗೆ ಬಂಡವಾಳ ಹೂಡಿಕೆ ವಿಸ್ತರಣೆ ಕುರಿತು ಪ್ರತ್ಯೇಕ ಸಭೆಗಳನ್ನು ನಡೆಸಿದ್ದು, ಎ.ಆರ್.ಎಂ. ಸೆಮಿಕಂಡಕ್ಟರ್ಸ್ ಕಂಪನಿಯ ಎರಡನೇ ಅತ್ಯಂತ ದೊಡ್ಡ ಕಚೇರಿ ಬೆಂಗಳೂರಿನಲ್ಲಿದೆ. ಅದು ಆಸ್ಟಿನ್-ಬೆಂಗಳೂರು-ಕ್ಯಾಲಿಫೋರ್ನಿಯಾ (ಎಬಿಸಿ) ವ್ಯಾಪ್ತಿಯನ್ನು ಹೊಂದಿದೆ.

## ಕಾರು ಅಪಘಾತ: ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ಸಾವು

• ಉದಯವಾಹಿನಿ, ಕಲಬುರಗಿ

ಜಿಲ್ಲೆಯ ಜೇವರ್ಗಿತ ತಾಲ್ಲೂಕಿನ ಗೌನಹಳ್ಳಿ ಬಳಿ ಮಂಗಳವಾರ ಸಂಜೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಹಿರಿಯ ಐಎಎಸ್ ಅಧಿಕಾರಿ. ಮಹಾಂತೇಶ ಬೀಳಗಿ ಸೇರಿದಂತೆ ಮೂವರು ಮೃತಪಟ್ಟಿದ್ದಾರೆ. ಬೀಳಗಿ ಅವರು ಬೆಳಗಾವಿ ಜಿಲ್ಲೆ ರಾಮದುರ್ಗದಿಂದ ಕಲಬುರಗಿಯಲ್ಲಿ ನಡೆಯಲಿರುವ ಮದುವೆ ಸಮಾರಂಭದಲ್ಲಿ ಪಾಲ್ಗೊಳ್ಳಲು ನಗರದತ್ತ ಹೊರಟಿದ್ದರು. ಸಂಜೆ 5.30ರ ಸುಮಾರಿಗೆ ಗೌನಹಳ್ಳಿ ಬಳಿ ಬೀಳಗಿ ಅವರ ಕುಟುಂಬವಿದ್ದ ಇನ್ನೋವಾ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಪಲ್ಟಿ ಹೊಡೆಯಿತು. ಇದರಿಂದಾಗಿ ಸ್ಥಳದಲ್ಲೇ ಅವರ ಸಹೋದರ ಸಂಬಂಧಿಗಳಾದ ಶಂಕರ ಬೀಳಗಿ, ಈರಣ್ಣ ಬೀಳಗಿ ಮೃತಪಟ್ಟರು. ಮಹಾಂತೇಶ ಬೀಳಗಿ ಅವರು ಕಲಬುರಗಿಯ ಖಾಸಗಿ ಆಸ್ಪತ್ರೆಯಲ್ಲಿ ಮೃತಪಟ್ಟರು. ರಾಮದುರ್ಗದವರಾದ ಬೀಳಗಿ ಅವರು ಧಾರವಾಡ ಎಸಿಯಾಗಿ, ದಾವಣಗೆರೆ ಜಿಲ್ಲಾಧಿಕಾರಿಯಾಗಿ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಹುದ್ದೆಗಳನ್ನು ನಿಭಾಯಿಸಿದ್ದರು. ಇದಕ್ಕೂ ಮುನ್ನ ಧಾರವಾಡದಲ್ಲಿ ಇಂಗ್ಲಿಷ್ ಟ್ಯೂಷನ್ ಹೇಳುತ್ತಿದ್ದರು.

**ರಾಮಜನ್ಮಭೂಮಿಯ ಅದ್ದೂರಿ ಸ್ವಾಗತ**



**ಸಂಪೂರ್ಣ ಭಾರತ, ವಿಶ್ವ ರಾಮಮಯ**

**ಅಯೋಧ್ಯೆಯಲ್ಲಿ ಪ್ರಧಾನಿ ಮೋದಿ ರೋಡ್ ಶೋ**

**ರಾಮನ ಗುಣ ಮೈಗೂಡಿಸಿಕೊಳ್ಳಬೇಕು**

# ಧರ್ಮ ಧ್ವಜಾರೋಹಣ

## ವಿಕಸಿತ ಭಾರತ ನಿರ್ಮಾಣ

• ಉದಯವಾಹಿನಿ, ನವದೆಹಲಿ

ಅಯೋಧ್ಯೆಯಲ್ಲಿನ ಭವ್ಯ ಶ್ರೀ ರಾಮ ಮಂದಿರದ 191 ಅಡಿ ಎತ್ತರದ ಶಿಖರದ ಮೇಲೆ ಪ್ರಧಾನಿ ನರೇಂದ್ರ ಮೋದಿ ಮತ್ತು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಮುಖ್ಯಸ್ಥ ಮೋಹನ್ ಭಾಗವತ್ ಅವರು ಇಂದು ಭಗವಾ ಧ್ವಜವನ್ನು ಹಾರಿಸಿದರು. ಇದು ಮಂದಿರ ನಿರ್ಮಾಣ ಸಂಪನ್ನಗೊಂಡ ಸಂಕೇತವಾಗಿದೆ. ಸಮಾರಂಭದಲ್ಲಿ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಉಪಸ್ಥಿತರಿದ್ದರು.

'ಧರ್ಮ ಧ್ವಜ'ವು ಮೂರು ಪವಿತ್ರ ಚಿಹ್ನೆಗಳನ್ನು ಹೊಂದಿದೆ. ಓಂ, ಸೂರ್ಯ ಮತ್ತು ಕೋವಿದರ ಮರವನ್ನು ಚಿತ್ರಿಸಲಾಗಿದೆ. ಕೇಸರಿ ಧ್ವಜವು 10 ಅಡಿ ಎತ್ತರ ಮತ್ತು 20 ಅಡಿ ಉದ್ದವಿದ್ದು, ತ್ರಿಕೋನಾಕಾರದಲ್ಲಿದೆ. ಕೋವಿದರ ಮರವು ಋಷಿ ಕಶ್ಯಪ್ ರಚಿಸಿದ ಮಂದರ್ ಮತ್ತು ಪಾರಿಜಾತ ಮರಗಳ ಮಿಶ್ರತಳಿಯಾಗಿದ್ದು, ಇದು ಪ್ರಾಚೀನ ಸಸ್ಯ ಮಿಶ್ರತಳಿಯನ್ನು ಪ್ರದರ್ಶಿಸುತ್ತದೆ. ಸೂರ್ಯನು ಭಗವಾನ್ ರಾಮನ ಸೂರ್ಯವಂಶವನ್ನು ಪ್ರತಿನಿಧಿಸುತ್ತದೆ. ಓಂ ಶಾಶ್ವತ ಆಧ್ಯಾತ್ಮಿಕ ಧ್ವನಿಯಾಗಿದೆ.

**ಸೀತಾ-ರಾಮನ ವಿವಾಹ ದಿನ:** ರಾಮ ಮತ್ತು ಸೀತೆಯ ವಿವಾಹವಾದ ದಿನವಾಗಿದೆ. ಈ ಶುಭ ಮುಹೂರ್ತದಲ್ಲೇ ಮಂದಿರದ ಮೇಲೆ ಧ್ವಜಾರೋಹಣ ನೆರವೇರಿಸಲಾಯಿತು. ಮುಂಜಾನೆ, ಪ್ರಧಾನಿ ಮೋದಿ ಅವರು ಮಂದಿರಕ್ಕೆ ಆಗಮಿಸಿ ರಾಮಲಲ್ಲಾನ ಗರ್ಭಗೃಹದಲ್ಲಿ ಪೂಜೆ ಸಲ್ಲಿಸಿದರು.

ಅವರೊಂದಿಗೆ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್, ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ರಾಜ್ಯಪಾಲೆ ಆನಂದಿಬೆನ್ ಪಟೇಲ್ ಇದ್ದರು. ಮಾತಾ ಅನ್ನಪೂರ್ಣ ಮತ್ತು ದೇವಾಲಯದ ಆವರಣದಲ್ಲಿರುವ ಸಪ್ತಮಂದಿರದಲ್ಲಿ ಪ್ರಾರ್ಥನೆ ಸಲ್ಲಿಸಿದರು. ಸಪ್ತಮಂದಿರವು ಮಹರ್ಷಿ ವಶಿಷ್ಠ, ಮಹರ್ಷಿ ವಿಶ್ವಾಮಿತ್ರ, ಮಹರ್ಷಿ ಅಗಸ್ತ್ಯ, ಮಹರ್ಷಿ ವಾಲ್ಮೀಕಿ, ದೇವಿ ಅಹಲ್ಯ, ನಿಶಾದರಾಜ್ ಗುಹಾ ಮತ್ತು ಮಾತಾ ಶಬರಿಗೆ ಸಂಬಂಧಿಸಿದ ದೇವಾಲಯಗಳು ಇವಾಗಿವೆ. ಇದಾದ ನಂತರ ಮಂದಿರದ ಆವರಣದಲ್ಲಿರುವ ಶೇಷಾವತಾರ ಮಂದಿರಕ್ಕೂ ಗಣ್ಯರು ಭೇಟಿ ನೀಡಿದರು.

**500 ವರ್ಷಗಳ ಭಾರ ಇಳಿಸಿದ ನಿರಾಳ ಭಾವ**

ಸ್ವಲ್ಪ ಯೋಚನೆ ಮಾಡಿ, 500 ವರ್ಷಗಳ ಹೋರಾಟ ಇದು. ಕೋಟ್ಯಂತರ ಹಿಂದೂಗಳ ಕನಸನ್ನ ಹೊತ್ತುಕೊಂಡು ಮೋದಿಯವರು ಅಲ್ಲಿಗೆ ಹೋಗಿದ್ರು. ನನ್ನ ಕೈಯಿಂದ ಈ ಕೆಲಸ ಆಗುತ್ತಾ ಅನ್ನೋ ಜವಾಬ್ದಾರಿ ಅವರ ಹೆಗಲ ಮೇಲಿತ್ತು. ಇವತ್ತು ಆ ಶಿಖರದ ಮೇಲೆ ಧ್ವಜ ಹಾರಾಡೋದನ್ನ ನೋಡಿದಾಗ, ಅವರ ಮನಸ್ಸಲ್ಲಿದ್ದ ಆ ಭಾರ ಇಳಿದು ಹೋದ ಹಾಗಿತ್ತು. ನನ್ನ ಕರ್ತವ್ಯ ಮುಗೀತು, ರಾಮನಿಗೊಂದು ಸೂರು ಸಿಕ್ತು ಅನ್ನೋ ಸಾರ್ಥಕ ಭಾವ ಅವರನ್ನ ಆವರಿಸಿತ್ತೇನೋ. ಆ ನಿರಾಳ ಭಾವವೇ ಅವರ ಕಣ್ಣಲ್ಲಿ ನೀರಾಗಿ, ಕೈಗಳಲ್ಲಿ ನಡುಕವಾಗಿ ಹೊರಹೊಮ್ಮಿತ್ತು.



**ರಾಮ ಪಥದ ಮೂಲಕ ಅಯೋಧ್ಯೆಗೆ ಬಂದ ಮೋದಿ**

ಪ್ರಧಾನಿ ಮೋದಿಯವರು ಬೆಳಿಗ್ಗೆ 9.40 ರ ಸುಮಾರಿಗೆ ಮಹರ್ಷಿ ವಾಲ್ಮೀಕಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂದಿಳಿದರು. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ರಾಜ್ಯಪಾಲೆ ಆನಂದಿಬೆನ್ ಪಟೇಲ್ ಅವರನ್ನು ಸ್ವಾಗತಿಸಿದರು. ವಿಮಾನ ನಿಲ್ದಾಣದಿಂದ ಮೋದಿಯವರ ಬೆಂಗಾವಲು ಪಡೆ ಹೊಸದಾಗಿ ನಿರ್ಮಿಸಲಾದ 15 ಕಿ.ಮೀ. ಉದ್ದದ ರಾಮ ಪಥದ ಮೂಲಕ ಸಾಗಿತು. ಸಾವಿರಾರು ಜನರು ಜೈ ಶ್ರೀರಾಮ್ ಘೋಷಣೆಗಳನ್ನು ಕೂಗುತ್ತಾ ಹೂವುಗಳ ಮಳೆಗರೆದರು. ರಾಮ ಜನ್ಮಭೂಮಿ ಚಳುವಳಿಯೊಂದಿಗೆ ಸಂಬಂಧ ಹೊಂದಿದ ಬುಡಕಟ್ಟು ಹಿರಿಯರು, ಶಾಲಾ ಮಕ್ಕಳು, ಸಂತರು ಮತ್ತು ಕುಟುಂಬಗಳನ್ನು ಒಳಗೊಂಡಂತೆ 7,000 ಕ್ಕೂ ಹೆಚ್ಚು ಆಹ್ವಾನಿತ ಅತಿಥಿಗಳು ಈ ಉತ್ಸವದಲ್ಲಿ ಭಾಗವಹಿಸಿದ್ದರು. ಟ್ರಸ್ಟ್ 6,000 ಅತಿಥಿಗಳು ಸಮಾರಂಭದಲ್ಲಿ ಭಾಗಿಯಾಗಿದ್ದಾರೆ. ಮಂದಿರ ಸಂಕೀರ್ಣದಲ್ಲಿ, ಮೋದಿ ಅವರು ಬಿಳಿ ಕುರ್ತಾ-ಪೈಜಾಮಾ ಧರಿಸಿ, ಮಾತಾ ಅನ್ನಪೂರ್ಣ ದೇವಾಲಯದಲ್ಲಿ ಮತ್ತು ನಂತರ ರಾಮ ದರ್ಬಾರ್‌ನಲ್ಲಿ ಪೂಜೆಗಳನ್ನು, ಆರತಿಯನ್ನು ಸಲ್ಲಿಸಿದರು.

**191 ಅಡಿ ಎತ್ತರದ 'ಧರ್ಮ ಧ್ವಜ'**



**ಧರ್ಮ ಧ್ವಜದ ವಿಶೇಷತೆಗಳು**

ಧ್ವಜವು ಬಲ-ಕೋನ ತ್ರಿಕೋನಾಕೃತಿಯ ಕೇಸರಿ ಧ್ವಜವಾಗಿದ್ದು, 10 ಅಡಿ ಎತ್ತರ ಮತ್ತು 20 ಅಡಿ ಉದ್ದ (ಮತ್ತು ಅದರ ವಿಧ್ಯುಕ್ತ ರೂಪಾಂತರದಲ್ಲಿ 11x22 ಅಡಿ) ಇದೆ. ಧ್ವಜದ ಮೇಲೆ ಸೂರ್ಯನ ಚಿತ್ರವಿದ್ದು, ಭಗವಾನ್ ಶ್ರೀರಾಮನ ತೇಜಸ್ಸು ಮತ್ತು ಶೌರ್ಯವನ್ನು ಸಂಕೇತಿಸುತ್ತದೆ. ಹಿಂದೂ ಸಂಪ್ರದಾಯದಲ್ಲಿ ಬೇರೂರಿರುವ 'ಓಂ' ಮತ್ತು ಕೋವಿದಾರ ಮರದ ಪವಿತ್ರ ಲಾಂಛನಗಳನ್ನು, ಜೊತೆಗೆ ಸ್ವಸ್ತಿಕವನ್ನು ಸಹ ಕೆತ್ತಲಾಗಿದೆ. ಭಾರತದ ಪರಂಪರೆ ಮತ್ತು ಸಂಸ್ಕೃತಿಯ ಬಗ್ಗೆ ಹೆಮ್ಮೆಪಡುವ ಮತ್ತು ಗುಲಾಮಗಿರಿಯ ಮನಸ್ಥಿತಿಯಿಂದ ಮುಕ್ತರಾಗುವ ಅಗತ್ಯವಿದೆ. ಮುಂದಿನ 10 ವರ್ಷಗಳಲ್ಲಿ ಆನುವಂಶಿಕ ಕೀಳರಿಮೆ ಸಂಕೀರ್ಣಗಳನ್ನು ತೊಡೆದುಹಾಕಲು ನಿರ್ಣಾಯಕ ಪ್ರಯತ್ನಕ್ಕೆ ಪ್ರಧಾನಿ ಕರೆ ನೀಡಿದರು.

**ಆ ಎರಡು ಕೈಗಳು ನಡುಗಿದ್ದು ಭಕ್ತಿಗೆ!**



**ಪ್ರತಿ ಹಿಂದುವಿಗೆ ಹೆಮ್ಮೆಯ ದಿನ**

ಬಿಜೆಪಿ ನಾಯಕ ಎನ್‌ವಿ ಸುಭಾಷ್ ಮಾತನಾಡಿದ್ದು, ಪ್ರಧಾನಿ ಮೋದಿ ಅವರು ಧರ್ಮ ಧ್ವಜವನ್ನು ಸ್ಥಾಪಿಸಿದ್ದು ಪ್ರತಿಯೊಬ್ಬ ಹಿಂದೂವಿಗೆ ಹೆಮ್ಮೆಯ ದಿನವಾಗಿದೆ. ಇದು ಐತಿಹಾಸಿಕ ಸಂದರ್ಭ. ಇದರೊಂದಿಗೆ ಭವ್ಯ ಅಯೋಧ್ಯಾ ರಾಮ ಮಂದಿರ ಸಂಪನ್ನಗೊಂಡಿದೆ ಎಂದು ಹೇಳಿದರು. ಸಮಾರಂಭಕ್ಕೂ ಮುನ್ನ ಪ್ರಧಾನಿ ಮೋದಿ ಅವರು ಅಯೋಧ್ಯೆಯಲ್ಲಿ ರೋಡ್ ಶೋ ನಡೆಸಿದರು. ಅಲ್ಲಿ ಅವರನ್ನು ತ್ರಿವರ್ಣ ಧ್ವಜ ಹಿಡಿದು ನೂರಾರು ಭಕ್ತರು ಸ್ವಾಗತಿಸಿದರು.

## ರೈತರ ಪರ ಅಖಾಡಕ್ಕೆ ಬಿಜೆಪಿ: 2 ದಿನ ರಾಜ್ಯಾದ್ಯಂತ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

**ಅನ್ನದಾತನ ಕಷ್ಟಕ್ಕೆ ಸ್ಪಂದಿಸಲು ಆಗ್ರಹ**

ರಾಜ್ಯದಲ್ಲಿ ಕಬ್ಬು ಬೆಳಗಾರರು ಹಾಗೂ ಮೆಕ್ಕೇಜೋಳ ಬೆಳೆಗಾರರು ಸೇರಿದಂತೆ ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ಬಿಜೆಪಿ ಆರೋಪಿಸಿದೆ. ಈ ನಿಟ್ಟಿನಲ್ಲಿ ನವೆಂಬರ್ 27 ಹಾಗೂ 28 ರಂದು ರಾಜ್ಯಾದ್ಯಂತ ಎರಡು ದಿನಗಳ ಪ್ರತಿಭಟನೆಯನ್ನು ಬಿಜೆಪಿ ಹಮ್ಮಿಕೊಂಡಿದೆ. ಈ ಮೂಲಕ ಅನ್ನದಾತರ ಸಮಸ್ಯೆಗೆ ಸ್ಪಂದಿಸಲು ಸರ್ಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಆಗ್ರಹಿಸಿದ್ದಾರೆ.

**ರೈತರಿಗೆ ಸ್ಪಂದಿಸದೇ ಇರುವುದು ಅಕ್ಷಮ್ಯ:** ರೈತ ವಿರೋಧಿ ಕಾಂಗ್ರೆಸ್ ಸರಕಾರದ ವಿರುದ್ಧ ಇವತ್ತು ಹೋರಾಟಕ್ಕೆ ಚಾಲನೆ ನೀಡಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಸಂಕಷ್ಟದಲ್ಲಿರುವ ರೈತರಿಗೆ ಸ್ಪಂದಿಸದೇ ಇರುವುದು ಅಕ್ಷಮ್ಯ ಅಪರಾಧ ಎಂದು ಅವರು ಆಕ್ಷೇಪಿಸಿದ್ದಾರೆ. ರೈತ ಮೋರ್ಚಾ ರಾಜ್ಯ ಅಧ್ಯಕ್ಷ ನಡಹಳ್ಳಿ, ರಾಜ್ಯದ ಹಿರಿಯ ನಾಯಕ ಸಿ.ಟಿ.ರವಿ, ಮುಖಂಡರಾದ ರೇಣುಕಾಚಾರ್ಯ, ಮಾಡಾಳ್ ವಿರೂಪಾಕ್ಷಪ್ಪ ಸೇರಿ ಜಿಲ್ಲೆಯ ನಾಯಕರು ಒಟ್ಟಾಗಿ ಪ್ರತಿಭಟನೆಯಲ್ಲಿ ಭಾಗವಹಿಸುತ್ತಿದ್ದಾರೆ. ರಾಜ್ಯದಲ್ಲಿರುವ ಅನಿಷ್ಟ ರೈತವಿರೋಧಿ ಕಾಂಗ್ರೆಸ್ ಸರಕಾರವು ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಕಬ್ಬು ಬೆಳೆಗಾರರ ಸಮಸ್ಯೆ ಇತ್ಯರ್ಥವಾಗಿಲ್ಲ ಎಂದು ಟೀಕಿಸಿದರು. ಮೆಕ್ಕೆ ಜೋಳದ ಬೆಳೆಗಾರರು ಹೋರಾಟ ಮಾಡುತ್ತಿದ್ದಾರೆ. ಲಕ್ಷ್ಮೇಶ್ವರದಲ್ಲಿ ಹೋರಾಟ ನಡೆಯುತ್ತಿದೆ. ನವಲಗುಂದದಲ್ಲಿ ರೈತ ಮುಖಂಡ ಶಂಕ್ರಣ್ಣ ಅಂಬಳಿ ಉಪವಾಸ ಸತ್ಯಾಗ್ರಹ ಮಾಡುತ್ತಿದ್ದಾರೆ. ಬಾಗಲಕೋಟೆ, ಶಿವಮೊಗ್ಗ ಸೇರಿ ಅನೇಕ ಜಿಲ್ಲೆಗಳಲ್ಲಿ ಹೋರಾಟ ನಡೆಯುತ್ತಿದೆ. ಕೇಂದ್ರವು ಬೆಂಬಲ ಬೆಲೆ ಘೋಷಿಸಿದರು ರಾಜ್ಯ ಸರಕಾರವು ಖರೀದಿ ಕೇಂದ್ರ ತೆರೆದಿಲ್ಲ ಎಂದು ಆಕ್ಷೇಪಿಸಿದರು. ಮುಖ್ಯಮಂತ್ರಿಗಳು ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಬೇಕು. ತುಂಗಭದ್ರಾ ಅಣೆಕಟ್ಟಿಗೆ 32 ಕ್ರಸ್ಟ್ ಗೇಟ್ ಅಳವಡಿಸದೇ ಕೊಪ್ಪಳ, ಬಳ್ಳಾರಿ, ವಿಜಯನಗರ, ರಾಯಚೂರು ಸುತ್ತಲಿನ ರೈತರು ಎರಡನೇ ಬೆಳೆ ಬೆಳೆಯಲು ಆಗುತ್ತಿಲ್ಲ ರಾಜ್ಯ ಸರಕಾರ ಈ ನಿಟ್ಟಿನಲ್ಲಿ ಅನ್ಯಾಯ ಮಾಡಿದೆ. ಅವರಿಗೆ ಎಕರೆಗೆ 25 ಸಾವಿರ ಪರಿಹಾರ ಕೊಡಬೇಕೆಂದು ಒತ್ತಾಯಿಸಿದರು.

ರಾಜ್ಯದ ರೈತರ ಜ್ವಲಂತ ಸಮಸ್ಯೆಗಳಿಗೆ ಸ್ಪಂದಿಸದೇ ಇಡೀ ಸಚಿವ ಸಂಪುಟವು ದೆಹಲಿಯಲ್ಲಿ ಕುಳಿತಿದೆ. ಮುಖ್ಯಮಂತ್ರಿಗಳು ಮೆಕ್ಕೆಜೋಳ ಖರೀದಿ ಕೇಂದ್ರದ ಕುರಿತು ಚರ್ಚಿಸಲು ಸಭೆ ಕರೆದರೆ ಕೃಷಿ ಸಚಿವರು ದೆಹಲಿಯಲ್ಲಿದ್ದರು ಎಂದು ಟೀಕಿಸಿದರು.



**ಸಿಎಂ ಯಾರೆಂಬುದು ಸಂಬಂಧವಿಲ್ಲ ಪರಿಹಾರ ಕೊಡಿ**

ಮುಖ್ಯಮಂತ್ರಿ ಯಾರೆಂಬುದು ನಮಗೆ ಸಂಬಂಧವಿಲ್ಲ ರೈತರ ಸಮಸ್ಯೆಗೆ ತಕ್ಷಣ ಪರಿಹಾರ ನೀಡಬೇಕೆಂದು ಆಗ್ರಹಿಸಿದರು. ಇದೇ 27, 28ರಂದು ರಾಜ್ಯದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಹೋರಾಟಕ್ಕೆ ಕರೆ ನೀಡಲಾಗಿದೆ. ಡಿ.1 ಮತ್ತು 2ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಬಿಜೆಪಿ ರೈತ ಮೋರ್ಚಾ ಹೋರಾಟ ಮಾಡಲಿದೆ ಎಂದು ತಿಳಿಸಿದರು. ಇದಕ್ಕೂ ಮೊದಲು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರು, ಕಬ್ಬು ಬೆಳೆಗಾರರು, ಮೆಕ್ಕೆಜೋಳ ಬೆಳೆಗಾರರ ಸಮಸ್ಯೆಗೆ ರಾಜ್ಯ ಸರಕಾರ ಸ್ಪಂದಿಸುತ್ತಿಲ್ಲ ಎಂದು ಟೀಕಿಸಿದರು. ಸರಕಾರವನ್ನು ಎಚ್ಚರಿಸುವ ದೃಷ್ಟಿಯಿಂದ ಇಲ್ಲಿ ಹೋರಾಟಕ್ಕೆ ಚಾಲನೆ ಕೊಡಲಾಗುತ್ತಿದೆ ಎಂದರು

# ಕರ್ನಾಟಕ ರಾಜಕೀಯ ಗರ್ಭದಲ್ಲಿ ಕುದಿಯುತ್ತಿರುವ ಜ್ವಾಲಾಮುಖಿ ಸ್ಫೋಟಗೊಳ್ಳುತ್ತಾ?

## ■ ಸ್ಫೋಟಗೊಂಡರೆ ಏನೆಲ್ಲಾ ಅವಾಂತರಗಳು ಸಂಭವಿಸಬಹುದು ಎಂಬುವುದು ಮಾತ್ರ ಸದ್ಯಕ್ಕೆ ಕುತೂಹಲ

• ಉದಯವಾಹಿನಿ, ಬೆಂಗಳೂರು


ನಮ್ಮ ದೇಶದ ಕೆಲವು ರಾಜ್ಯಗಳಿಗೂ ಸಮಸ್ಯೆ ಉಂಟಾಗಲಿದೆ. ಇದು ಪ್ರಾಕೃತಿಕ ಸಮಸ್ಯೆ. ಆದರೆ ಕರ್ನಾಟಕದಲ್ಲಿ ರಾಜಕೀಯ ಜ್ವಾಲಾಮುಖಿ ಯಾವುದೇ ಕ್ಷಣದಲ್ಲೂ ಸ್ಫೋಟಗೊಳ್ಳುವ ಸಾಧ್ಯತೆ ಇದೆ. ರಾಜ್ಯದ ರಾಜಕೀಯ ಗರ್ಭದಲ್ಲಿ ಕೊತಕೊತನೆ ಕುದಿಯುತ್ತಿರುವ ಜ್ವಾಲಾಮುಖಿ ಯಾವಾಗ ಸ್ಫೋಟಗೊಳ್ಳಲಿದೆ ಎಂಬುವುದೇ ನಿಗೂಢವಾಗಿದೆ. ಕರ್ನಾಟಕದಲ್ಲಿ ರಾಜಕೀಯ ಜ್ವಾಲಾಮುಖಿ ಇಂದು ಸ್ಫೋಟಗೊಳ್ಳುತ್ತೆ, ನಾಳೆ ಸ್ಫೋಟಗೊಳ್ಳುತ್ತದೆ ಎಂಬೆಲ್ಲಾ ಚರ್ಚೆಗಳು ನಡೆಯುತ್ತಿವೆ. ಪಕ್ಷದ ಆಂತರಿಕ ವಲಯದಿಂದ ಕೆಲವೊಂದು ಬಿಸಿ ಬಿಸಿ ಸುದ್ದಿಗಳು ಹೊರಬರುತ್ತಿದ್ದರೆ, ರಾಜಕೀಯ ಪಡಸಾಲೆಯಲ್ಲಿ ನಾನಾ ರೀತಿಯ ವಿಶ್ಲೇಷಣೆಗಳು ವ್ಯಕ್ತವಾಗುತ್ತಿವೆ. ಒಂದು ವಿಭಾಗ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಪಕ್ಕಾ ಎಂದು ಹೇಳುತ್ತಿದ್ದರೆ, ಮತ್ತೊಂದು ವಿಭಾಗ ಸಿದ್ದರಾಮಯ್ಯ ಬದಲಾವಣೆ ಇಲ್ಲ. ರಾಜಕೀಯ ಕ್ರಾಂತಿ ಎಲ್ಲವೂ ಸುಳ್ಳು ಎಂದೇ ಹೇಳುತ್ತಿವೆ.



ಹಾಗಾಗಿ ಒಳಗೊಳಗೆ ಕುದಿಯುತ್ತಿರುವ ಜ್ವಾಲಾಮುಖಿ ಸ್ಫೋಟಗೊಂಡರೆ ಏನೆಲ್ಲಾ ಅವಾಂತರಗಳು ಸಂಭವಿಸಬಹುದು ಎಂಬುವುದು ಮಾತ್ರ ಸದ್ಯಕ್ಕೆ ಕುತೂಹಲ ಕೆರಳಿಸಿದೆ.



**ಸ್ಫೋಟವೋ, ಕ್ರಾಂತಿಯೋ, ಶಾಂತಿಯೋ:** ನವೆಂಬರ್ ತಿಂಗಳಿಗೂ ಮೊದಲು ರಾಜ್ಯದಲ್ಲಿ ರಾಜಕೀಯ ಸ್ಫೋಟ ನಡೆಯುತ್ತಿದೆ ಎಂಬ ಚರ್ಚೆಗಳು ನಡೆಯುತ್ತಿದ್ದವು. ನವೆಂಬರ್ ಕ್ರಾಂತಿಯಲ್ಲಿ ನಾಯಕತ್ವ ಬದಲಾವಣೆ ಫಿಕ್ಸ್ ಎಂದು ಹೇಳಲಾಗುತ್ತಿತ್ತು. ಆದರೆ ನವೆಂಬರ್ 25 ಕಳೆದಿದೆ. ತಿಂಗಳು ಅಂತ್ಯಗೊಳ್ಳಲು ಇನ್ನು ಐದು ದಿನಗಳು ಬಾಕಿ ಇವೆ. ಈ ಐದು ದಿನಗಳಲ್ಲಿ ಕ್ರಾಂತಿಯಾಗುತ್ತಾ? ರಾಜಕೀಯ ಸ್ಫೋಟ ಸಂಭವಿಸುತ್ತಾ ಅಥವಾ ಶಾಂತಿಯಾಗುತ್ತಾ? ಎಂಬುವುದು ಯಾರಲ್ಲೂ ಸ್ಪಷ್ಟತೆ ಇಲ್ಲ. ಆದರೆ, ರಾಜ್ಯದಲ್ಲಿ ರಾಜಕೀಯ ಜ್ವಾಲಾಮುಖಿಯ ಪರಿಸ್ಥಿತಿ ಇದೆ ಎಂಬ ಚರ್ಚೆಗಳು ಮಾತ್ರ ದಿನದಿಂದ ದಿನಕ್ಕೆ ಕಾವೇರಿಸುತ್ತಿದೆ.



ನಾಯಕತ್ವ ಬದಲಾವಣೆ ವಿಚಾರವಾಗಿ ಗದ್ದಲ ತೀವ್ರಗೊಂಡ ಬೆನ್ನಲ್ಲೇ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯಕ್ಕೆ ಆಗಮಿಸಿದ್ದರು. ಮೂರು ದಿನಗಳ ಕಾಲ ರಾಜ್ಯದಲ್ಲಿ ವಾಸ್ತವ್ಯ ಹೂಡಿದ್ದರು. ಈ ಸಂದರ್ಭದಲ್ಲಿ ಸಿಎಂ ಸಿದ್ದರಾಮಯ್ಯ ಆದಿಯಾಗಿ ಪ್ರಮುಖ ನಾಯಕರು ಖರ್ಗೆ ಅವರನ್ನು ಭೇಟಿ ಮಾಡಿದ್ದರು.

ದೆಹಲಿಗೆ ಖರ್ಗೆ ಹೊರಟು ನಿಂತ ಸಂದರ್ಭದಲ್ಲಿ ದಿಢೀರ್ ಆಗಿ ಡಿಕೆ ಶಿವಕುಮಾರ್ ಎಂಟ್ರಿ ಆಯ್ತು. ಖರ್ಗೆ ಜೊತೆಗೆ ಡಿಕೆಶಿಯೂ ಒಂದೇ ಕಾರಿನಲ್ಲಿ ಪ್ರಯಾಣ ಬೆಳೆಸಿದರು. ಈ ಸಂದರ್ಭದಲ್ಲಿ ನಡೆದಿರುವ ಮಾತುಕತೆ ಏನು ಎಂಬುವುದು ಸದ್ಯದ ಹಾಟ್ ಟಾಪಿಕ್.

**ರಾಹುಲ್ ಎಂಟ್ರಿ:** ಇನ್ನು ಇದೇ ಸಂದರ್ಭದಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಎಂಟ್ರಿ ಕೊಟ್ಟಿದ್ದಾರೆ. ವಿದೇಶ ಪ್ರವಾಸದಿಂದ ಆಗಮಿಸಿದ ಅವರು ರಾಜ್ಯದ ಕಾಂಗ್ರೆಸ್ ನಾಯಕರ ಜೊತೆಗೆ ಒನ್ ಟು ಒನ್ ಮಾತುಕತೆ ನಡೆಸಿದ್ದಾರೆ. ಈಗಾಗಲೇ ಹಿರಿಯ ಕಾಂಗ್ರೆಸ್ ನಾಯಕ ಬಿಕೆ ಹರಿಪ್ರಸಾದ್ ಅವರು ರಾಹುಲ್ ಗಾಂಧಿಯನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ರಾಜ್ಯದ ಸನ್ನಿವೇಶಗಳ ಬಗ್ಗೆ ಅವರು ವಿವರಣೆ ನೀಡಿದ್ದಾರೆ.

**ಪ್ರಿಯಾಂಕ್ ಜೊತೆಗೂ ಮಾತುಕತೆ:** ದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಸಚಿವ ಪ್ರಿಯಾಂಕ್ ಖರ್ಗೆ ಅವರು ಭೇಟಿ ಮಾಡಿದ್ದಾರೆ. ಪ್ರಿಯಾಂಕ್ ಅವರು ರಾಜ್ಯದ ರಾಜಕೀಯ ಪರಿಸ್ಥಿತಿ ಹಾಗೂ ಇತರ ವಿಚಾರಗಳ ಬಗ್ಗೆ ಮಾಹಿತಿ ನೀಡಿದ್ದಾರೆ.

ಈ ಎಲ್ಲಾ ಬೆಳವಣಿಗೆಗಳು ಸದ್ಯಕ್ಕೆ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

**ಪಟ್ಟು ಸಡಿಲಿಸದ ಡಿಕೆಶಿ**

ಸಿಎಂ ಆಗಲೇಬೇಕು ಎಂದು ಕನಸು ಕಂಡರುವ ಡಿಕೆ ಶಿವಕುಮಾರ್ ಅವರು ಪಟ್ಟು ಸಡಿಲಿಸುತ್ತಿಲ್ಲ. ಇದರಿಂದ ಹೈಕಮಾಂಡ್ ಸುಸ್ತಾಗಿದೆ. ಪರೋಕ್ಷವಾಗಿ ಡಿಕೆಶಿ ಒತ್ತಡ ಸೃಷ್ಟಿಸುತ್ತಿದ್ದಾರೆ. ಹೀಗಾಗಿ ಹೈಕಮಾಂಡ್ ನಾಯಕರು ಒತ್ತಡಕ್ಕೆ ಸಿಲುಕಿದ್ದಾರೆ. ಗಟ್ಟಿ ನಿರ್ಧಾರಕ್ಕೆ ಬರಲು ಅವರಿಂದ ಸಾಧ್ಯವಾಗುತ್ತಿಲ್ಲ. ಒಂದು ವೇಳೆ ಡಿಕೆಶಿಯನ್ನು ಮನವೊಲಿಸಲು ಸಾಧ್ಯವಾಗದೆ ಇದ್ದಲ್ಲಿ ಈ ಬಣದ ಭೂಗರ್ಭದಲ್ಲಿರುವ ಜ್ವಾಲಾಮುಖಿ ಸ್ಫೋಟಗೊಳ್ಳುವ ಸಾಧ್ಯತೆಯೇ ಅಧಿಕ. ಅದು ಸ್ಫೋಟಗೊಳ್ಳದಂತೆ ತಡೆಯಲು ಹೈಕಮಾಂಡ್ ಏನೆಲ್ಲಾ ತಂತ್ರಗಾರಿಕೆ ನಡೆಸುತ್ತಿದೆ ಎಂಬುವುದು ಮಾತ್ರ ಕುತೂಹಲಕ್ಕೆ ಕಾರಣವಾಗಿದೆ.



**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,704/Gram24ct ₹11,645/Gram22ct | ಬೆಳ್ಳಿ: ₹167.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ದೇವದೇವಿಯರ ಅವಹೇಳನ – 4

ನಮ್ಮ ಭಕ್ತರ ದೇವರ ಜಗುಲಿಗಳು ಮ್ಯೂಜಿಯಂ ಆಗಿವೆ. ಆ ದೇವರನ್ನೆಲ್ಲಾ ಹೊಳೆಗೆ ಹಾಕಬೇಕು, ಇದು ಸಾಣೇಹಳ್ಳಿಯ ಶಿವಸಂಚಾರಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳ ಹೇಳಿಕೆ. ಗಣಪತಿ ಒಬ್ಬ ರಾಕ್ಷಸ ಎಂದ ಮಧ್ವಮಠದ ಸ್ವಾಮಿಯೊಬ್ಬ. ದೇವರು ನಿರಾಕಾರ ನಿರ್ವಿವಾದ. ಮನಸ್ಸು ಬುದ್ಧಿ ಇಂದ್ರಿಯಗಳು ಸಗುಣ ಸಾಕಾರ. ಇವುಗಳಿಂದ ನಿರಾಕಾರ ದೇವರನ್ನು ಪಡೆಯುವುದೆಂದರೆ ಶ್ರವಣ ಮನನ ನಿಧಿಧ್ಯಾಸನ ಧ್ಯಾನ ಧಾರಣ ಸಮಾಧಿಮೂಲಕ ನಿರ್ಗುಣೋಪಾಸನೆಯಿಂದ. ಇಂಥ ತತ್ತ್ವ ಸಾಧನೆಗೆ ದೇವಾಲಯ ಮಠ ಮಂದಿರ ಮಸೀದಿ ಚರ್ಚ್ ನಿರ್ಮಾಣ, ವಿಭೂತಿ ರುದ್ರಾಕ್ಷಿ ಅರಿಷಿಣ ಕುಂಕುಮ ಹೂ ಪತ್ರೆ, ಗಂಧ ಲಿಂಗ ಪಾದೋದಕ ಪ್ರಸಾದ ಎಲ್ಲ ಅಪ್ರಸ್ತುತ. ಇವು ಸಾಕಾರದೊಳಗಿನವು. ಆದಾಗ್ಯೂ, ನಿರಾಕಾರ ಸಾಧನೆಗೆ ಸಾಕಾರ ಸೋಪಾನ. ಈ ಸಾಕಾರ ಅವರವರ ಕಲ್ಪನೆಗೆ ವಿಭಿನ್ನ ಅನೇಕ. ಸಾಕಾರವನ್ನೇ ಅಲ್ಲಗಳೆಯುವುದಾದರೆ ಯಾವುದೋ ಒಂದನ್ನು ಗುರಿಯಾಗಿ ಸದೇ ಮುಲಾಜಿಲ್ಲದೇ ಎಲ್ಲವನ್ನೂ ಬಿಡಬೇಕು. ಇದು ಅಸಾಧ್ಯ. ಸಾಕಾರ ಜಗದಲ್ಲಿ ಸಾಕಾರದಿಂದ ಮಾತ್ರ ನಿರಾಕಾರ ತಲುಪಲು ಸಾಧ್ಯ. ಬಾಲ್ಯವಿವಾಹ ಸತಿಸಹಗಮನ ಪ್ರಾಣಿಬಲಿ ಮೂಢನಂಬಿಕೆ ಕಂದಾಚಾರಗಳನ್ನು ವಿರೋಧಿಸೋಣ. ಅವರವರದ್ದನ್ನು ಅವರವರು ಪ್ರತಿಪಾದಿಸಲಿ. ಅನ್ಯರ ಟೀಕೆ ಬೇಡ. ಯಾರು ಏನೇ ಹೇಳಿದರೂ ಅಂತಿಮ ಆಯ್ಕೆ ಜನರದ್ದೇ!

# ಬಿಸಿನೆಸ್ ಕಾರಿಡಾರ್ ಯೋಜನೆಗೆ ಭೂಸ್ವಾಧೀನ ಆರಂಭಿಸಿದ ಬಿಡಿಎ

**ಭೂ ಮಾಲೀಕರು ಸ್ಪಂದಿಸದಿದ್ದರೆ ನಗದು ಪರಿಹಾರ ನ್ಯಾಯಾಲಯದಲ್ಲಿ ಠೇವಣಿ ಮಾಡಿ, ಭೂಸ್ವಾಧೀನ ಪ್ರಕ್ರಿಯೆ ಎಂದ ಬಿಡಿಎ**

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಬಿಸಿನೆಸ್ ಕಾರಿಡಾರ್ ಯೋಜನೆಗೆ ಸಂಬಂಧಿಸಿದಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) 100 ಎಕರೆ ಭೂಮಿಗೆ ಪರಿಹಾರ ಘೋಷಣೆ ಮಾಡಿದೆ. ಈ ಮೂಲಕ ಬಹುಕಾಲದಿಂದ ನೆನೆಗುದಿಗೆ ಬಿದ್ದಿದ್ದ ಯೋಜನೆಗೆ ಜೀವ ಬಂದಂತಾಗಿದೆ.

ಬಿಸಿನೆಸ್ ಕಾರಿಡಾರ್ ಯೋಜನೆ 74 ಕಿ.ಮೀ. ಇದೆ. ಒಟ್ಟು 2,560 ಎಕರೆ ಭೂಮಿ ಬೇಕಾಗಿದೆ. ಇದರಲ್ಲಿ ಸುಮಾರು 140 ಎಕರೆ ಭೂಮಿ ನ್ಯಾಯಾಲಯದ ವ್ಯಾಜ್ಯದಲ್ಲಿದೆ. ಒಟ್ಟು 45 ಭೂಮಾಲೀಕರು ಭೂಸ್ವಾಧೀನ ಪ್ರಕ್ರಿಯೆಯನ್ನು ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಈಗ ಬಿಡಿಎಯಿಂದ ಪರಿಹಾರ ಘೋಷಣೆ ಮಾಡಿರುವ ಭೂಮಿಯು ಯೋಜನೆಯ ಒಟ್ಟು ಅಗತ್ಯವಿರುವ ಭೂಮಿಯ ಶೇಕಡಾ 4 ರಷ್ಟು ಮಾತ್ರ. ಮುಂದಿನ ದಿನಗಳಲ್ಲಿ ಪರಿಹಾರ ಪ್ರಕಟಣೆಗಳ ಸಂಖ್ಯೆ ಹೆಚ್ಚಾಗಲಿದೆ ಎಂಬ ನಿರೀಕ್ಷೆ ಮೂಡಿದೆ. ಬಿಸಿನೆಸ್ ಕಾರಿಡಾರ್ ಯೋಜನೆಯ ಮುಖ್ಯಸ್ಥರಾದ ಎಲ್.ಕೆ. ಅತೀಕ್ ಅವರು ಮಾತನಾಡಿ, ಕೆಲ ದಿನಗಳಲ್ಲಿಯೇ ನಾವು ಇನ್ನೂ 300 ಎಕರೆ ಭೂಮಿಗೆ ಪರಿಹಾರ ಪ್ರಕಟಣೆ ಹೊರಡಿಸುವ ನಿರೀಕ್ಷೆಯಲ್ಲಿದ್ದೇವೆ. ಪರಿಹಾರ ಪ್ರಕಟಣೆಗಳ ನಂತರ, ಭೂಮಿ ಕಳೆದುಕೊಂಡವರಿಗೆ ಅವರ ಆಯ್ಕೆಯ ಪರಿಹಾರವನ್ನು ಪಡೆಯಲು ಅವಕಾಶ ನೀಡಲಾಗುವುದು. ಕಳೆದ ಒಂದೂವರೆ ತಿಂಗಳ ಪ್ರಯತ್ನಗಳು ಈಗ ಫಲ ನೀಡಲು ಪ್ರಾರಂಭಿಸಿವೆ ಎಂದು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಒಟ್ಟು 6 ರೀತಿಯಲ್ಲಿ ಪರಿಹಾರ ಆಯ್ಕೆ**

- ಸಾಮಾನ್ಯ ಪರಿಹಾರ – ನಗದು ರೂಪದಲ್ಲಿ ನೀಡುವುದು.
- ಒಪ್ಪಿಗೆ ಪರಿಹಾರ – ಸ್ವಯಂಪ್ರೇರಿತರಾಗಿ ಒಪ್ಪಿಕೊಳ್ಳುವ ಭೂಮಾಲೀಕರಿಗೆ ಹೆಚ್ಚಿನ ಪರಿಹಾರ ನೀಡುವುದು.
- ಜಾಗಕ್ಕೆ ಅನುಗುಣವಾಗಿ ವಾಣಿಜ್ಯ ನಿವೇಶನಗಳನ್ನು – 65:35 ಅನುಪಾತದಲ್ಲಿ ನೀಡುವುದು.
- ಡಾ. ಕೆ. ಶಿವರಾಂ ಕಾರಂತ್ ಲೇಔಟ್ ಅಥವಾ ಬಿಸಿನೆಸ್ ಕಾರಿಡಾರ್ ಮಾರ್ಗದಲ್ಲಿರುವ ಹೊಸ ಲೇಔಟ್‌ಗಳಲ್ಲಿ ವಸತಿ ನಿವೇಶನಗಳನ್ನು ನೀಡುವುದು.
- ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳು (ಟಿಡಿಆರ್)
- ಹೆಚ್ಚುವರಿ ಅಂತಸ್ತಿನ ವಿಸ್ತೀರ್ಣ (ಎಫ್‌ಎಆರ್).

ಪರಿಹಾರದ ಹಲವು ಆಯ್ಕೆಗಳಿದ್ದರೂ, ಭೂಮಾಲೀಕರು, ವಿಶೇಷವಾಗಿ ಪೂರ್ವ ಬೆಂಗಳೂರಿನಲ್ಲಿ, ಬಿಡಿಎ ನೀಡುತ್ತಿರುವ ನಗದು ಪರಿಹಾರವು ಮಾರುಕಟ್ಟೆ ಮೌಲ್ಯಕ್ಕಿಂತ ಶೇ. 25 ಕ್ಕಿಂತ ಕಡಿಮೆ ಇದೆ ಎಂದು ಪ್ರತಿಪಾದಿಸಿ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

**ನಗದು ಪರಿಹಾರ ಠೇವಣಿ ಮಾಡಿ ಭೂಸ್ವಾಧೀನ**

**ಸುಮಾರು ಎರಡು ದಶಕಗಳ ಕಾಲ ವ್ಯಾಜ್ಯಗಳಿಂದಾಗಿ ವಿಳಂಬವಾಗಿದ್ದ ಭೂಸ್ವಾಧೀನ ಪ್ರಕ್ರಿಯೆ ಈಗ ಮಹತ್ವದ ಹಂತ ತಲುಪಿದೆ. ಬಿಡಿಎ ಈಗ ಪರಿಹಾರವನ್ನು ವಿತರಿಸಲು ಮತ್ತು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಅಧಿಕಾರ ಪಡೆದಿದೆ ಎಂದು ಆದೇಶ ಪತ್ರ ತಿಳಿಸುತ್ತದೆ. ಭೂಮಿ ಕಳೆದುಕೊಂಡವರು ನಿಗದಿತ ಸಮಯದೊಳಗೆ ಸ್ಪಂದಿಸದಿದ್ದರೆ, ನಾವು ನಗದು ಪರಿಹಾರವನ್ನು ನ್ಯಾಯಾಲಯದಲ್ಲಿ ಠೇವಣಿ ಮಾಡಿ, ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರಿಸುತ್ತೇವೆ ಎಂದು ಒಬ್ಬ ಹಿರಿಯ ಭೂಸ್ವಾಧೀನ ಅಧಿಕಾರಿ ತಿಳಿಸಿದ್ದಾರೆ.**

ಅಲ್ಲದೆ, ಬಿಡಿಎ ನಿವೇಶನಗಳ ಹಂಚಿಕೆಯಲ್ಲಿ ಹಲವು ವರ್ಷಗಳ ವಿಳಂಬ ಮಾಡುವುದರಿಂದ, ಅವರು ವಸತಿ ಅಥವಾ ವಾಣಿಜ್ಯ ನಿವೇಶನಗಳ ಆಯ್ಕೆಯನ್ನು ಆರಿಸಿಕೊಳ್ಳುತ್ತಿದ್ದಾರೆ ಎನ್ನಲಾಗಿದೆ.

## ಅಮಿತ್ ಶಾ ವಿಶೇಷಾಧಿಕಾರಿ ಹೆಸರಿನಲ್ಲಿ ವೈದ್ಯನಿಗೆ ರೂ.2.7 ಕೋಟಿ ವಂಚನೆ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ವಿಶೇಷಾಧಿಕಾರಿ ಎಂದು ಹೇಳಿ, ಕಡಿಮೆ ಬೆಲೆಗೆ ಜಮೀನು ಕೊಡಿಸುವುದಾಗಿ ನಂಬಿಸಿ ವೈದ್ಯರೊಬ್ಬರಿಗೆ ರೂ.2.7 ಕೋಟಿ ವಂಚಿಸಿರುವ ಘಟನೆ ನಡೆದಿದೆ. ಜಮ್ಮು ಕಾಶ್ಮೀರದ ವೈದ್ಯರ ದೂರಿನ ಮೇರೆಗೆ ಆರ್‌ಪಿಸಿ ಲೇಔಟ್ ನಿವಾಸಿ ಸಂಜಯ್ ಅಲಿಯಾಸ್ ಸುಜಯ್ ಎಂಬುವರನ್ನು ವಿಜಯನಗರ ಠಾಣೆ ಪೊಲೀಸರು ಬಂಧಿಸಿ, ನಕಲಿ ಲೆಟರ್ ಹೆಡ್ ಸೇರಿ ಕೆಲ ದಾಖಲೆಗಳನ್ನು ಜಪ್ತಿ ಮಾಡಿದ್ದಾರೆ.

ವಂಚನೆ ಪ್ರಕರಣದಲ್ಲಿ ಹಿಂದೆ ಸಂಜಯ್ ಜೈಲಿಗೆ ಹೋಗಿ ಬಂದಿದ್ದ. ತನ್ನನ್ನು ಅಮಿತ್ ಶಾ ಅವರ ವಿಶೇಷಾಧಿಕಾರಿ ಎಂದು ಪರಿಚಯಿಸಿ ಕೊಂಡಿದ್ದ. ಕೆಲವರ ಬಳಿ ಪ್ರಧಾನ ಮಂತ್ರಿ ಕಚೇರಿ ಅಧಿಕಾರಿ ಎಂದೂ ಹೇಳಿಕೊಂಡಿದ್ದ. ಪ್ರಭಾವಿ ವ್ಯಕ್ತಿಗಳ ಹೆಸರು ಬಳಸಿ ವಂಚನೆ ಮಾಡುತ್ತಿದ್ದ' ಎಂದು ಮೂಲಗಳು ತಿಳಿಸಿವೆ. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸಮೀಪ ಮಠವೊಂದಕ್ಕೆ ಸೇರಿದ ಜಮೀನಿದೆ ಎಂದು ನಂಬಿಸಿದ್ದ ಆರೋಪಿ, ಭೂಮಿಯನ್ನು ಮಾರಾಟ ಮಾಡಲು ಮಠಾಧಿಪತಿಗಳು ಮುಂದಾಗಿದ್ದು. ಕಡಿಮೆ ಬೆಲೆಗೆ ಕೊಡಿಸುವುದಾಗಿ ಹೇಳಿದ್ದ. ಕೊನೆಗೆ ರೂ.2.7 ಕೋಟಿ ಪಡೆದುಕೊಂಡ. ಆದರೆ, 2 ವರ್ಷ ಕಳೆದರೂ ಭೂಮಿ ಕೊಡಿಸಲಿಲ್ಲ, ಹಣವೂ ವಾಪಸ್ ನೀಡಲಿಲ್ಲ. ಹಾಗಾಗಿ ಆರೋಪಿ ವಿರುದ್ಧ ಕಾನೂನು ಕ್ರಮ ಕೈಗೊಂಡು, ಹಣ ವಾಪಸ್ ಕೊಡಿಸಬೇಕು' ಎಂದು ಸಂತ್ರಸ್ತರು ದೂರಿನಲ್ಲಿ ಮನವಿ ಮಾಡಿದ್ದಾರೆ.

## ಜಿಟಿಟಿಸಿ ಕೇಂದ್ರಗಳ ಕಾಮಗಾರಿ ಶೀಘ್ರ ಪ್ರಾರಂಭಿಸಿ: ಸಿಎಂ ಸೂಚನೆ

• ಉದಯವಾಹಿನಿ, ಬೆಂಗಳೂರು

ಮಧುಗಿರಿ ಮತ್ತು ಇಂಡಿ ನಬಾರ್ಡ್ ಸಹಯೋಗದೊಂದಿಗೆ ಕಂಪ್ಲಿ, ರಾಯಚೂರು ಗ್ರಾಮೀಣ ಮತ್ತು ಸಿಂಧನೂರಿನಲ್ಲಿ ಕೆ.ಕೆ.ಆರ್.ಡಿ.ಬಿ ಮ್ಯಾಕ್ರೋ ಅನುದಾನದಡಿ ನೂತನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಗಳನ್ನು ಸ್ಥಾಪಿಸುವ ಸಂಬಂಧ ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಸಭೆ ನಡೆಯಿತು.



ಉದಯವಾಹಿನಿ ಚಿತ್ರ

ನೂತನ ಜಿಟಿಟಿಸಿ ಕೇಂದ್ರಗಳ ಸ್ಥಾಪನೆ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಸಿಎಂ, ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡುವ ಜಿಟಿಟಿಸಿ ಮೂಲಕ ಗ್ರಾಮೀಣ ಅಭ್ಯರ್ಥಿಗಳಿಗೆ ಹೆಚ್ಚಿನ ಉದ್ಯೋಗ ಕಲ್ಪಿಸಲು ಸಾಧ್ಯವಾಗಿದೆ. ರಾಜ್ಯದಲ್ಲಿ ಒಟ್ಟು 32 ಜಿಟಿಟಿಸಿ ಕೇಂದ್ರಗಳಿವೆ. ಈ ಸಾಲಿನ ಬಜೆಟ್‌ನಲ್ಲಿ ಹೊಸ 7 ಜಿಟಿಟಿಸಿ ಕೇಂದ್ರಗಳನ್ನು ಸ್ಥಾಪಿಸುವ ಘೋಷಣೆ ಮಾಡಲಾಗಿದ್ದು, ಈ ಕೇಂದ್ರಗಳ ಕಾಮಗಾರಿ ಆದಷ್ಟು ಬೇಗನೆ ಪ್ರಾರಂಭಿಸಲು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು. ಇಂಡಿ, ಮಧುಗಿರಿ, ಕಂಪ್ಲಿ, ರಾಯಚೂರು ಗ್ರಾಮೀಣ, ಸಿಂಧನೂರಿನಲ್ಲಿ ಜಿಟಿಟಿಸಿ ಪ್ರಾರಂಭಿಸಲು ಸ್ಥಳ ಗುರುತಿಸಲಾಗಿದ್ದು, ಕಾಮಗಾರಿ ಪ್ರಾರಂಭಿಸಲು ಟೆಂಡರ್ ಪ್ರಕ್ರಿಯೆ ಆರಂಭಿಸಬೇಕು. ಸಂಡೂರು ಮತ್ತು ಹೊಸದುರ್ಗ ತಾಲ್ಲೂಕುಗಳಲ್ಲಿ ಪ್ರಕ್ರಿಯೆ ಆದಷ್ಟು ಬೇಗನೆ ಪ್ರಾರಂಭಿಸಲು ಸೂಚನೆ ನೀಡಿದರು. ಜಿಟಿಟಿಸಿ ಪ್ರವೇಶಾತಿಯನ್ನು 6 ಸಾವಿರಕ್ಕೆ ಹೆಚ್ಚಿಸಲಾಗಿದೆ. ಇಲ್ಲಿಂದ ತರಬೇತಿ ಪಡೆದು ಹೊರಬರುವ ವಿದ್ಯಾರ್ಥಿಗಳಿಗೆ ವಿದೇಶಿ ಕಂಪನಿಗಳಲ್ಲಿಯೂ ಸೇರಿದಂತೆ ಶೇಕಡ 100 ರಷ್ಟು ನೇಮಕಾತಿ ಆಗುತ್ತಿದೆ ಎಂದ ಸಿಎಂ, ಯಾವ ಕೋರ್ಸ್‌ಗಳಿಗೆ ಬೇಡಿಕೆ ಇದೆ ಅಂತಹ ಕೋರ್ಸ್‌ಗಳನ್ನು ಪ್ರಾರಂಭಿಸಲು ಸೂಚನೆ ನೀಡಿದರು. ಅಲ್ಲದೆ ಕೈಗಾರಿಕೆಗಳ ಬೇಡಿಕೆಗಳಿಗೆ ಅನುಗುಣವಾಗಿ ಕೌಶಲ್ಯ ತರಬೇತಿ ನೀಡಲು ತಿಳಿಸಿದರು.

**ಪುರುಷರ ಜೂನಿಯರ್ ಹಾಕಿ ವಿಶ್ವಕಪ್ ಟ್ರೋಫಿ ಅನಾವರಣಗೊಳಿಸಿದ ಸಿಎಂ ಸಿದ್ದರಾಮಯ್ಯ**: ಸಚಿವರಾದ ಶರಣ ಪ್ರಕಾಶ್ ಪಾಟೀಲ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಂಜುಂಪರ್ವೇಜ್ ಸೇರಿ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

**ಜಿಟಿಟಿಸಿ ಉತ್ಪಾದನಾ ಕೇಂದ್ರದಲ್ಲಿ ಇಸ್ರೋದ ಚಂದ್ರಯಾನ ನೌಕೆ ಲೂನಾರ್ ರೋವರ್ ಚಕ್ರದ ಉತ್ಪಾದನೆ ಸೇರಿದಂತೆ ಹಲವು ವೈಮಾನಿಕ ಉಪಕರಣಗಳ ಉತ್ಪಾದನೆ ಮಾಡಲಾಗುತ್ತಿದೆ. ಜಿಟಿಟಿಸಿ ಅಧಿಕಾರಿಗಳು, ಕಾರ್ಮಿಕ ಇಲಾಖೆಯೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.**

## ತ್ಯಾಜ್ಯ ನೀರು ಸಂಸ್ಕರಣೆ: ನವೋದ್ಯಮಗಳಿಗೆ ಅವಕಾಶ ನೀಡಿದ ಬೆಂಗಳೂರು ಜಲಮಂಡಳಿ

• ಉದಯವಾಹಿನಿ, ಬೆಂಗಳೂರು

ಸಂಸ್ಕರಿಸಿದ ನೀರಿನ ಸಂಶೋಧನೆ ಮತ್ತು ಮಾರುಕಟ್ಟೆ ವಿಸ್ತರಣೆಗಾಗಿ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳಲ್ಲಿ ಕಾರ್ಯನಿರ್ವಹಿಸಲು ಬೆಂಗಳೂರು ಜಲಮಂಡಳಿಯು ನವೋದ್ಯಮಗಳಿಗೆ ಅವಕಾಶ ನೀಡಿದೆ.

ಈ ಯೋಜನೆಯ ಮೊದಲ ಭಾಗವಾಗಿ, ಕಾಡುಬೀಸನಹಳ್ಳಿ ತ್ಯಾಜ್ಯ ನೀರು ಶುದ್ಧೀಕರಣ ಘಟಕದಲ್ಲಿ ಕಾರ್ಯನಿರ್ವಹಿಸಲು ಬೋಸನ್ ವೈಟ್ ವಾಟರ್ ಸಂಸ್ಥೆಗೆ ಅನುಮತಿ ನೀಡಲಾಗಿದೆ. ಯೋಜನೆಯ ಮೂಲಕ ದಿನಕ್ಕೆ 70.000 ಲೀಟರ್‌ಗಳಷ್ಟು ಗುಣಮಟ್ಟದ ಸಂಸ್ಕರಿಸಿದ ನೀರು ಬಳಕೆಗೆ ಲಭ್ಯವಾಗಲಿದೆ. ನವೋದ್ಯಮಗಳಿಗೆ ಕೇವಲ ನೀರು ಒದಗಿಸುವುದಷ್ಟೇ ಅಲ್ಲದೆ, ಸಂಶೋಧನೆಯಲ್ಲಿ ತೊಡಗಿಸಿಕೊಳ್ಳಲು ಇದೊಂದು ಸುವರ್ಣಾವಕಾಶ. ಬ್ರಾಂಡ್ ಬೆಂಗಳೂರು ಪರಿಕಲ್ಪನೆಯಡಿ ನಗರದ ನೀರಿನ ಸಮಸ್ಯೆಗಳಿಗೆ ಸ್ಥಳೀಯವಾಗಿಯೇ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಜಲಮಂಡಳಿ ಈ ಕ್ರಮ ಕೈಗೊಂಡಿದೆ' ಎಂದು ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಜಲಮಂಡಳಿಯು ಈ ಯೋಜನೆಯಡಿ ಯಾವುದೇ ಬಂಡವಾಳ ಹೂಡಿಕೆ ಮಾಡುವುದಿಲ್ಲ. ಬದಲಿಗೆ, ಬೋಸನ್ ಸಂಸ್ಥೆ ಸ್ವಂತ ವೆಚ್ಚದಲ್ಲಿ ಅಗತ್ಯವಿರುವ ಅತ್ಯಾಧುನಿಕ ಶುದ್ಧೀಕರಣ ಉಪಕರಣಗಳನ್ನು ಅಳವಡಿಸಲಿದೆ. ಜಲಮಂಡಳಿಯು ಕಚ್ಚಾ ವಸ್ತುವಾಗಿ ತ್ಯಾಜ್ಯ ನೀರನ್ನು ಸರಬರಾಜು ಮಾಡಲಿದ್ದು, ಸಂಸ್ಕರಿಸಿದ ನೀರನ್ನು ಮಾರಾಟ ಮಾಡಲು ಮಾರುಕಟ್ಟೆ ಸಂಪರ್ಕ ಒದಗಿಸಲು ಸಹಾಯ ಮಾಡಲಿದೆ ಎಂದು ಹೇಳಿದ್ದಾರೆ.



## ಹೊರಗುತ್ತಿಗೆ ನಿಷೇಧಕ್ಕೆ ಕಾಯ್ದೆ

• ಉದಯವಾಹಿನಿ, ಬೆಂಗಳೂರು

ವಿವಿಧ ಇಲಾಖೆಗಳಲ್ಲಿರುವ ಹೊರಗುತ್ತಿಗೆ ನೇಮಕಾತಿ ವ್ಯವಸ್ಥೆಯನ್ನು 2028ರ ಮಾರ್ಚ್ 31ರ ಒಳಗೆ ಸಂಪೂರ್ಣವಾಗಿ ರದ್ದುಗೊಳಿಸುವ ಉದ್ದೇಶದಿಂದ ಸರ್ಕಾರಿ ಸಂಸ್ಥೆಗಳಲ್ಲಿ ಖಾಸಗಿ ಹೊರಗುತ್ತಿಗೆ ನಿಷೇಧ ಮಸೂದೆ–2025 ಮಂಡಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಹೊಸ ಕಾಯ್ದೆ ಜಾರಿಯಾದ ಬಳಿಕ, ನಿಯಮ ಉಲ್ಲಂಘಿಸಿ ಹೊರಗುತ್ತಿಗೆಯಡಿ ನೇಮಕಾತಿ ಮಾಡಿದರೆ ಅಥವಾ ನಿಗದಿತ ಅವಧಿಯನ್ನು ಮೀರಿ ಹೊರಗುತ್ತಿಗೆ ಒಪ್ಪಂದ ಮುಂದುವರಿಸಿದರೆ, ಅಂಥವರಿಗೆ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು 75 ಲಕ್ಷ ದಂಡ ವಿಧಿಸಲು ಕೂಡಾ ಈ ಮಸೂದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಮಸೂದೆಯ ಕರಡು ಸಿದ್ಧವಾಗಿದೆ. ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ನಡೆಯಲಿರುವ ವಿಧಾನ ಮಂಡಲ ಅಧಿವೇಶನದಲ್ಲಿ ಈ ಮಸೂದೆ ಮಂಡನೆಯಾಗುವ ಸಾಧ್ಯತೆಯಿದೆ.

ಸರ್ಕಾರದ ವಿವಿಧ ಇಲಾಖೆಗಳು, ಸಾರ್ವಜನಿಕ ವಲಯದ ನಿಗಮಗಳು, ಮಂಡಳಿಗಳು, ಉದ್ದಿಮೆಗಳು, ಪ್ರಾಧಿಕಾರಗಳು ಮತ್ತು ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಕಂಪನಿಗಳಲ್ಲಿ ಮಂಜೂರಾಗಿರುವ ಮೂರು ಲಕ್ಷಕ್ಕೂ ಹೆಚ್ಚು ಹುದ್ದೆಗಳನ್ನು ಖಾಸಗಿ ಏಜೆನ್ಸಿಗಳ ಮೂಲಕ ಹೊರಗುತ್ತಿಗೆ ಮತ್ತು ಇತರ ವಿಧಾನಗಳ ಮೂಲಕ ಭರ್ತಿ ಮಾಡಲಾಗಿದೆ. ಮಸೂದೆಯು ಕಾಯ್ದೆಯಾಗಿ ಜಾರಿಗೆ ಬಂದ ದಿನದಿಂದ ಈ ರೀತಿಯ ಹೊರಗುತ್ತಿಗೆ ಆಧಾರದಲ್ಲಿ ನಡೆಯುವ ಎಲ್ಲಾ ನೇಮಕಾತಿಗಳು ಸಂಪೂರ್ಣವಾಗಿ ಸ್ಥಗಿತಗೊಳ್ಳಲಿವೆ.

## ಉಬರ್ ಸಂಸ್ಥೆ ವಿರುದ್ಧ ಕ್ಯಾಬ್ ಚಾಲಕರ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಫ್ಲೀಟ್ ಚಾಲಕರು ಮತ್ತು ಸ್ವತಂತ್ರ ಚಾಲಕರ ನಡುವೆ ಕಂಪನಿಯು ವಿಭಿನ್ನವಾಗಿ ವರ್ತಿಸುವುದರಿಂದ ಕಡಿಮೆಗಳಿಕೆಯಾಗಿದೆ ಎಂದು ಆರೋಪಿಸಿ ಹಲವಾರು ಕ್ಯಾಬ್ ಚಾಲಕರು ಉಬರ್‌ನ ಚಾಲಕ ಕೇಂದ್ರದ ಹೊರಗೆ ಪ್ರತಿಭಟನೆ ನಡೆಸಿದ್ದಾರೆ.

ಚಾಲಕರ ಈ ಆರೋಪವನ್ನು ಸಂಸ್ಥೆ ತಳ್ಳಿಹಾಕಿದೆ. ಭಾರತ್ ಟ್ರಾನ್ಸ್‌ಪೋರ್ಟೇಶನ್ ಗ್ರೂಪ್ ಬ್ಯಾನರ್ ಅಡಿಯಲ್ಲಿ ಚಾಲಕರು ಆಯೋಜಿಸಿದ್ದ ಪ್ರತಿಭಟನೆಯಲ್ಲಿ, ಕಂಪನಿಯು ರಾಜ್ಯದ ಹೊರಗಿನಿಂದ ಚಾಲಕರನ್ನು ನೇಮಿಸಿಕೊಳ್ಳುತ್ತಿದೆ ಇದು ಇಲ್ಲಿನ ಸ್ಥಳೀಯ ಚಾಲಕರ ಆದಾಯದ ಮೇಲೆ ಪರಿಣಾಮ ಬೀರಿದೆ ಎಂದು ಆರೋಪಿಸಲಾಗಿದೆ. ಕೆಲವು ಚಾಲಕರು ಬೀಗ ಹಾಕಿದ ಬಾಗಿಲನ್ನು ಮುರಿದು ಕಚೇರಿಗೆ ಪ್ರವೇಶಿಸಲು ಪ್ರಯತ್ನಿಸಿದ್ದು, ಪೊಲೀಸರು ಸ್ಥಳಕ್ಕೆ ತಲುಪಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಯತ್ನಿಸಿದರು. ಉಬರ್ ಘಟನೆಯನ್ನು ಬಲವಾಗಿ ಖಂಡಿಸಿದ್ದು ಫ್ಲೀಟ್ ಚಾಲಕರು ಮತ್ತು ಸ್ವತಂತ್ರ ಚಾಲಕರ ನಡುವೆ ವಿಭಿನ್ನವಾಗಿ ವರ್ತಿಸಲಾಗಿದೆ ಎಂಬ ಆರೋಪವನ್ನು ಸ್ಪಷ್ಟವಾಗಿ ನಿರಾಕರಿಸಿದೆ. ಬೆಂಗಳೂರಿನಲ್ಲಿರುವ ಉಬರ್‌ನ ಚಾಲಕ ಕೇಂದ್ರದ ಹೊರಗೆ ಜಮಾಯಿಸಿದ ಕೆಲವು ವ್ಯಕ್ತಿಗಳಿಂದ ಹಿಂಸಾಚಾರ ಮತ್ತು ಬೆದರಿಕೆಯನ್ನು ನಾವು ಬಲವಾಗಿ ಖಂಡಿಸುತ್ತೇವೆ. ಫ್ಲೀಟ್ ಚಾಲಕರು ಮತ್ತು ಸ್ವತಂತ್ರ ಚಾಲಕರ ನಡುವೆ ವಿಭಿನ್ನವಾಗಿ ವರ್ತಿಸಲಾಗಿದೆ ಎಂಬ ಯಾವುದೇ ಆರೋಪವನ್ನು ನಾವು ಸ್ಪಷ್ಟವಾಗಿ ನಿರಾಕರಿಸುತ್ತೇವೆ ಅವರ ಕಾರ್ಯಾಚರಣೆಯ ಮಾದರಿಯನ್ನು ಲೆಕ್ಕಿಸದೆ ಎಲ್ಲರಿಗೂ ನ್ಯಾಯ, ಪಾರದರ್ಶಕತೆ ಮತ್ತು ಸಮಾನ ಅವಕಾಶವನ್ನು ಖಚಿತಪಡಿಸಿಕೊಳ್ಳಲು ನಮ್ಮ ನೀತಿಗಳನ್ನು ವಿನ್ಯಾಸಗೊಳಿಸಲಾಗಿದೆ ಎಂದು ಸಂಸ್ಥೆ ಹೇಳಿದೆ.


ಉದಯವಾಹಿನಿ ಚಿತ್ರ

ಇದು ಶೂನ್ಯ–ಕಮಿಷನ್ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತದೆ, ಅಲ್ಲಿ ಚಾಲಕರು ನಾಮಮಾತ್ರ ಚಂದಾದಾರಿಕೆ ಶುಲ್ಕದ ನಂತರ 100 ಪ್ರತಿಶತ ದರಗಳನ್ನು ಉಳಿಸಿಕೊಳ್ಳುತ್ತಾರೆ ಎಂದು ಉಬರ್ ಹೇಳಿದೆ.

## ಥಣಿಸಂದ್ರದಲ್ಲಿ ವಂದೇ ಭಾರತ್ ಡಿಪೊ: ಬಿಡ್ ಅವಧಿ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ಥಣಿಸಂದ್ರದಲ್ಲಿ ವಂದೇ ಭಾರತ್ ಸ್ಲೀಪರ್ ರೈಲುಗಳನ್ನು ನಿರ್ವಹಿಸುವ ಡಿಪೊ ನಿರ್ಮಾಣಕ್ಕೆ ಟೆಂಡರ್ ಆಹ್ವಾನಿಸಲಾಗಿದ್ದು, ಬಿಡ್ ಸಲ್ಲಿಸುವ ಅವಧಿಯನ್ನು ನೈರುತ್ಯ ರೈಲ್ವೆ ವಿಸ್ತರಿಸಿದೆ. ಇಂಜಿನಿಯರಿಂಗ್, ನಿರ್ಮಾಣ ಸಂಗ್ರಹಣೆ (ಇಸಿಪಿ) ಮಾದರಿಯ ಸೌಲಭ್ಯವನ್ನು ಸ್ಥಾಪಿಸಲು ಜುಲೈಯಲ್ಲಿ ಇ–ಟೆಂಡರ್ ಆಹ್ವಾನಿಸಲಾಗಿತ್ತು. ನವೆಂಬರ್ 21ರ ಒಳಗೆ ಬಿಡ್ ಸಲ್ಲಿಸಲು ದಿನಾಂಕ ನಿಗದಿಪಡಿಸಲಾಗಿತ್ತು.

ಈಗ ಈ ಅವಧಿಯನ್ನು ಡಿಸೆಂಬರ್ 12ರವರೆಗೆ ವಿಸ್ತರಿಸಲಾಗಿದೆ. ವಂದೇ ಭಾರತ್ ಸೂಪರ್ ಫಾಸ್ಟ್ ಸೀಟರ್ ರೈಲುಗಳು ಯಶಸ್ವಿಯಾದ ಬಳಿಕ ವಂದೇ ಭಾರತ್ ಸ್ಲೀಪರ್ ರೈಲುಗಳನ್ನು ಹಳಿಗಿಳಿಸಲು ರೈಲ್ವೆ ಇಲಾಖೆ ನಿರ್ಧರಿಸಿತ್ತು. ಸ್ಲೀಪರ್ ರೈಲುಗಳ ತಯಾರಿಯು ಭರದಿಂದ ಸಾಗುತ್ತಿದೆ.

ಅವುಗಳ ನಿರ್ವಹಣೆಗಾಗಿ ದೇಶದ ಐದು ಕಡೆಗಳಲ್ಲಿ ಡಿಪೊಗಳನ್ನು ನಿರ್ಮಿಸಲು ರೈಲ್ವೆ ಮಂಡಳಿ ನಿರ್ಧರಿಸಿತ್ತು. ಅದರಲ್ಲಿ ಈಶಾನ್ಯ ಬೆಂಗಳೂರಿನಲ್ಲಿರುವ ಥಣಿಸಂದ್ರವೂ ಒಂದು. 227.94 ಕೋಟಿ ಅಂದಾಜು ವೆಚ್ಚದಲ್ಲಿ 16 ಬೋಗಿಗಳ ರೈಲು ನಿರ್ವಹಿಸುವ ಡಿಪೊ ಇದಾಗಲಿದೆ.


ಉದಯವಾಹಿನಿ ಚಿತ್ರ

**ಬಾಣಸವಾಡಿಯಲ್ಲಿ ಶೆಡ್ ವಿಸ್ತರಣೆ**

ಚನ್ನಸಂದ್ರ ಮತ್ತು ಯಲಹಂಕ ರೈಲು ನಿಲ್ದಾಣಗಳ ನಡುವಿನ ಥಣಿಸಂದ್ರದಲ್ಲಿ ಹಿಂದೆ ರೈಲು ನಿಲ್ದಾಣವಿತ್ತು. ಇದು ದಶಕದ ಹಿಂದೆ ಸ್ಥಗಿತಗೊಂಡಿತ್ತು. ಈ ರೈಲು ನಿಲ್ದಾಣದ ಪಕ್ಕದಲ್ಲಿಯೇ ಡಿಪೊ ನಿರ್ಮಾಣಗೊಳ್ಳಲಿದೆ.

ಈ ಸ್ಥಳವು ಚನ್ನಸಂದ್ರ ಮತ್ತು ಯಲಹಂಕ ರೈಲು ನಿಲ್ದಾಣಗಳ ನಡುವೆ ಇದೆ.

ಇದು ಒಂದು ದಶಕದ ಹಿಂದೆ ಸ್ಥಗಿತಗೊಂಡಿದ್ದ ಹಿಂದಿನ ಥಣಿಸಂದ್ರ ರೈಲು ನಿಲ್ದಾಣಕ್ಕೆ ಹತ್ತಿರದಲ್ಲಿದೆ.

**ವಂದೇ ಭಾರತ್ ಸೀಟರ್ ರೈಲುಗಳ ನಿರ್ವಹಣೆಗಾಗಿ ಬಾಣಸವಾಡಿಯಲ್ಲಿರುವ ಮೆಮು ಶೆಡ್ ಅನ್ನು ರೂ. 50 ಕೋಟಿ ವೆಚ್ಚದಲ್ಲಿ ವಿಸ್ತರಿಸಲಾಗುತ್ತಿದೆ. ಅಲ್ಲದೇ ಬೈಯಪ್ಪನಹಳ್ಳಿಯಲ್ಲಿರುವ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್‌ನಲ್ಲಿ ರೂ.123 ಕೋಟಿ ವೆಚ್ಚದಲ್ಲಿ ನಿರ್ವಹಣಾ ಮೂಲಸೌಕರ್ಯವನ್ನು ನವೀಕರಿಸಲಾಗುತ್ತಿದೆ. ನಾಲ್ಕನೇ ಪಿಟ್‌ಲೈನ್ ಇದಾಗಲಿದೆ ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.**

## ಛಲವಾದಿ ನಾರಾಯಣಸ್ವಾಮಿ ವಿರುದ್ಧ ದೂರು ದಾಖಲು

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಶಾಸಕರ ಖರೀದಿ ನಡೆಯುತ್ತಿದೆ ಎಂದು ಆಧಾರ ರಹಿತ ಹೇಳಿಕೆ ನೀಡಿದ ಆರೋಪದಡಿ ವಿಧಾನ ಪರಿಷತ್ತಿನ ವಿರೋಧ ಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಕಾಂಗ್ರೆಸ್ ಪಕ್ಷದ ಯಂಗ್ ಬ್ರಿಗೇಡ್ ಸೇವಾದಳ ಅಧ್ಯಕ್ಷ ಜುನೈದ್ ಪಿ.ಕೆ. ನೇತೃತ್ವದಲ್ಲಿ ವಕೀಲರ ತಂಡ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ವಿಧಾನ ಪರಿಷತ್ತಿನ ವಿರೋಧ ಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ವಿಧಾನಸೌಧದ ಆವರಣದಲ್ಲಿ ಸುದ್ದಿಗಾರರ ಜೊತೆ ಮಾತನಾಡಿರುವ ಛಲವಾದಿ ನಾರಾಯಣಸ್ವಾಮಿ ಅವರು ರಾಜ್ಯ ಕಾಂಗ್ರೆಸ್‌ನಲ್ಲಿ ಕುದುರೆ ವ್ಯಾಪಾರ ನಡೆಯುತ್ತಿದೆ. ಶಾಸಕರಿಗೆ ತಲಾ 50 ಕೋಟಿ ರೂ. ನಗದು, ಒಂದು ಫ್ಲಾಟ್ ಹಾಗೂ ಫಾರ್ಚೂನರ್ ಕಾರು ಕೊಡಲಾಗುತ್ತಿದೆ ಎಂದು ಹೇಳಿಕೆ ನೀಡಿರುವುದು ಖಂಡನೀಯ ಮಾತ್ರವಲ್ಲದೆ, ಆಧಾರರಹಿತವಾಗಿದೆ ಎಂದು ಜುನೈದ್ ಪಿ.ಕೆ. ಹೇಳಿದ್ದಾರೆ. ಒಂದು ವೇಳೆ ಈ ರೀತಿಯ ಘಟನೆ ನಡೆದರೆ ಇದು ಭ್ರಷ್ಟಾಚಾರದ ಒಂದು ಭಾಗವಾಗಿದೆ. ಈ ಬಗ್ಗೆ ಪ್ರಚಾರ ಗಿಟ್ಟಿಸಲು ಕಾಂಗ್ರೆಸ್ ಶಾಸಕರ ಕುರಿತು ಇಲ್ಲಸಲ್ಲದ ಆರೋಪ ಮಾಡಿರುವ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು ಎಂದು ದೂರಿನಲ್ಲಿ ಅವರು ಒತ್ತಾಯಿಸಿದ್ದಾರೆ.



## ವಿದ್ಯಾರ್ಥಿ ಮೇಲೆ ಹಲ್ಲೆ: ಶಾಲೆಯ ವಿರುದ್ಧ ಪೊಲೀಸ್, ಮಕ್ಕಳ ಆಯೋಗಕ್ಕೆ ದೂರು

• ಉದಯವಾಹಿನಿ, ಬೆಂಗಳೂರು

ಕೊತ್ತನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆ ಮ್ಯಾನೇಜ್ ಮೆಂಟ್ ಆಫ್ ಜಾಮಿಯಾ ಮಹಮದಿಯಾ ಎಜುಕೇಶನ್ ಸೊಸೈಟಿನಲ್ಲಿ ವಿದ್ಯಾರ್ಥಿಯೊಬ್ಬರ ತಲೆಗೆ ಗಂಭೀರ ಗಾಯವಾಗಿದ್ದು, ಆತನಿಗೆ ಚಿಕಿತ್ಸೆ ಕೊಡಿಸದೇ ನಿರ್ಲಕ್ಷ್ಯ ವಹಿಸಿರುವ ಬಗ್ಗೆ ಶಾಲಾ ಆಡಳಿತ ಮಂಡಳಿ ವಿರುದ್ಧ ಕೊತ್ತನೂರು ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಾಗಿದೆ. ಶಾಲಾ ಆಡಳಿತ ಮಂಡಳಿಯ ದಿವ್ಯ ನಿರ್ಲಕ್ಷ್ಯದ ಬಗ್ಗೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೂ ದೂರು ಸಲ್ಲಿಸಲಾಗಿದೆ.



ಉದಯವಾಹಿನಿ ಚಿತ್ರ

**ಚಿಕಿತ್ಸೆ ಕೊಡಿಸದೇ ನಿರ್ಲಕ್ಷ್ಯ**

ಅಬ್ದುಲ್ ರಹೀಂ ಬಿನ್ ಅಬ್ದುಲ್ ಎಂಬ 54 ವರ್ಷದ ವ್ಯಕ್ತಿಯೊಬ್ಬರು ಪೊಲೀಸ್ ಠಾಣೆಗೆ ದೂರು ನೀಡಿದ್ದು, ಅವರ ಪುತ್ರ ಅಬ್ದುಲ್ ರಜಾಕ್ ಮಲಿಕ್ ಅವರು ರಕ್ಷಣಾ ಆಯೋಗಕ್ಕೆ ದೂರು ಸಲ್ಲಿಸಿ, ಶಾಲಾ ಆಡಳಿತ ಮಂಡಳಿ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಕೋರಿದ್ದಾರೆ. ಹೆಚ್‌ಬಿಆರ್ ಲೇಔಟ್‌ನ ಅಬ್ದುಲ್ ರಹೀಂ ಅವರ ಪುತ್ರ ಅಬ್ದುಲ್ ರಜಾಕ್ 14 ಅವರು ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆ ಮ್ಯಾನೇಜ್ ಮೆಂಟ್ ಆಫ್ ಜಾಮಿಯಾ ಮಹಮದಿಯಾ ಎಜುಕೇಶನ್ ಸೊಸೈಟಿನಲ್ಲಿ 10ನೇ ತರಗತಿ ವಿದ್ಯಾಭ್ಯಾಸ ಮಾಡುತ್ತಿದ್ದು, ನವೆಂಬರ್ 21ರ ಮಧ್ಯಾಹ್ನ 2.30ರ ಸಮಯದಲ್ಲಿ ಮಕ್ಕಳೊಂದಿಗೆ ವಾಲಿಬಾಲ್ ಆಡುತ್ತಿದ್ದಾಗ ಅದೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿ ನೌಮಾನ್ ಎಂಬಾತ ದೊಡ್ಡದಾದ ಕಲ್ಲು ಬೀಸಿದ್ದಾನೆ. ಜೊತೆಗೆ ಅದೇ ಕಲ್ಲಿನಿಂದ ನನ್ನ ಮಗನ ತಲೆಗೆ ಹೊಡೆದಿದ್ದಾನೆ.

ರಕ್ತಗಾಯವಾದ ಮಗನಿಗೆ ಶಾಲಾ ಆಡಳಿತ ಮಂಡಳಿ ಚಿಕಿತ್ಸೆ ಕೊಡಿಸದೇ ನಿರ್ಲಕ್ಷ್ಯ ವಹಿಸಿದೆ. ನೌಮಾನ್ ಮತ್ತು ಆಡಳಿತ ಮಂಡಳಿಯ ಖಾಲೀದ್ ಮುಶ್ರಫ್ ಅವರ ನಿರ್ಲಕ್ಷ್ಯದ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅಪ್ಪ, ಮಗ ದೂರು ದಾಖಲಿಸಿದ್ದಾರೆ.

## 2ನೇ ಸುತ್ತಿನ ಸೀಟು ಹಂಚಿಕೆ ಆರಂಭ

• ಉದಯವಾಹಿನಿ, ಬೆಂಗಳೂರು

ಸ್ನಾತಕೋತ್ತರ ಆಯುಷ್ (ಪಿಜಿ ಆಯುಷ್) ಕೋರ್ಸ್‌ಗಳ ಪ್ರವೇಶ ಸಂಬಂಧ ಎರಡನೇ ಸುತ್ತಿನ ಸೀಟು ಹಂಚಿಕೆಗೆ ವೇಳಾಪಟ್ಟಿ ಪ್ರಕಟಿಸಿದ್ದು, ಇಂದಿನಿಂದ ಆರಂಭವಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ. ಅರ್ಹ ಅಭ್ಯರ್ಥಿಗಳು ಇಚ್ಛೆ/ಆಯ್ಕೆಗಳನ್ನು ಬದಲಾಯಿಸಿಕೊಳ್ಳಲು ನ.26ರಂದು ಬೆಳಿಗ್ಗೆ 9 ಗಂಟೆವರೆಗೆ ಅವಕಾಶ ನೀಡಲಾಗಿದೆ. ನ.26ರಂದು ಸಂಜೆ 4ಗಂಟೆಗೆ ತಾತ್ಕಾಲಿಕ ಫಲಿತಾಂಶ ಹಾಗೂ ನ.27ರಂದು ಬೆಳಿಗ್ಗೆ 11ಕ್ಕೆ ಅಂತಿಮ ಫಲಿತಾಂಶ ಪ್ರಕಟಿಸಲಾಗುತ್ತದೆ ಎಂದು ವಿವರಿಸಿದ್ದಾರೆ. ಸೀಟು ಹಂಚಿಕೆಯಾದವರು ನ.28ರಿಂದ 29ರವರೆಗೆ ಶುಲ್ಕ ಪಾವತಿ ಮತ್ತು ಪ್ರವೇಶ ಪತ್ರ, ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ನ.30ರೊಳಗೆ ಕಾಲೇಜುಗಳಿಗೆ ವರದಿ ಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ.

# ಬೆಂಗಳೂರಿನ ರಸ್ತೆ ಗುಂಡಿಗೆ ಇನ್ನೂ ಸಿಕ್ಕಿಲ್ಲ ಮುಕ್ತಿ

**ಡಿಸಿಎಂ ಡಿಕೆ ಶಿವಕುಮಾರ್ ಕೂಡಾ ಅಧಿಕಾರಿಗಳಿಗೆ ಗುಂಡಿ ಮುಚ್ಚಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ**

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನ ರಸ್ತೆಗಳ ಸ್ಥಿತಿ ಪೂರ್ಣ ಪ್ರಮಾಣದಲ್ಲಿ ಸರಿ ಹೋಗಿಲ್ಲ. ನಗರದ ಹಲವು ರಸ್ತೆಗಳಲ್ಲಿ ಗುಂಡಿಗಳು ವ್ಯಾಪಕವಾಗಿ ಕಾಣಿಸಿಕೊಂಡಿದ್ದವು. ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಗಡುವಿನ ಮೇಲೆ ಗಡುವು ನೀಡಿದ್ದರು. ಆದರೆ ಗಡುವು ದಿನಾಂಕಕಷ್ಟೇ ಸೀಮಿತವಾಗಿದೆ. ಗುಂಡಿಗಳಿಗೆ ಮಾತ್ರ ಮುಕ್ತಿ ಸಿಕ್ಕಿಲ್ಲ. ಆಡಳಿತ ಸೌಧ ಅಂದರೆ ವಿಧಾನಸೌಧದ ಮುಂದೆಯೇ ರಸ್ತೆಯಲ್ಲಿ ಹೊಂಡ ಕಾಣಿಸಿಕೊಂಡಿದೆ.

ಕಳೆದ ಒಂದು ತಿಂಗಳಿಂದ ವಿಧಾನಸೌಧದ ಮುಂಭಾಗದಲ್ಲಿ ರಸ್ತೆ ಗುಂಡಿ ಇದೆ. ಇದಕ್ಕೆ ಬ್ಯಾರಿಕೇಡ್ ಹಾಕಲಾಗಿದೆ. ಇದರ ಪರಿಣಾಮವಾಗಿ ವಾಹನ ಸಂಚಾರಕ್ಕೂ ಸಮಸ್ಯೆ ಉಂಟಾಗುತ್ತಿದೆ. ವಿಧಾನಸೌಧದ ಮೆಟ್ರೋ ನಿಲ್ದಾಣದ ಸಿಗ್ನಲ್‌ನಲ್ಲಿ ದೊಡ್ಡ ಗುಂಡಿ ಕಾಣಿಸಿಕೊಂಡಿದೆ. ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಗಳು ಪ್ರವಾಸ ಆದರೂ ರಸ್ತೆ ಗುಂಡಿಗೆ ಮುಕ್ತಿ ದೊರಕಿಲ್ಲ. ಇದೊಂದೇ ಅಲ್ಲ, ಬೆಂಗಳೂರಿಗೆ ಹಲವು ಕಡೆಗಳಲ್ಲಿ ರಸ್ತೆ ಗುಂಡಿಗಳಿಗೆ ಪೂರ್ಣ ಮುಕ್ತಿ ಸಿಕ್ಕಿಲ್ಲ. ಕೆಲವು ಕಡೆ ಗುಂಡಿಗಳನ್ನು ಮುಚ್ಚಲಾಗಿದೆ.


ಉದಯವಾಹಿನಿ ಚಿತ್ರ

**ನಗರದ ಕೆಲವು ಕಡೆಗಳಿಗೆ ತೆರಳಿ ಪರಿಶೀಲನೆ**

ಆದರೆ ಇನ್ನೂ ಹಲವು ಕಡೆಗಳಲ್ಲಿ ರಸ್ತೆ ಗುಂಡಿಗಳು ಹಾಗೆಯೇ ಇವೆ. ಅವುಗಳನ್ನು ಮುಚ್ಚಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ.

**ಅಕ್ಟೋಬರ್ 31 ಗಡುವು ನೀಡಿದ್ದ ಸಿದ್ದರಾಮಯ್ಯ**: ಬೆಂಗಳೂರಿನ ರಸ್ತೆ ಗುಂಡಿಗಳನ್ನು ಮುಚ್ಚಲು ಸಿಎಂ ಸಿದ್ದರಾಮಯ್ಯ ಅವರು ಅಕ್ಟೋಬರ್ 31ರ ಗಡುವನ್ನು ನೀಡಿದ್ದರು.

ಆದರೆ ಇದು ವರ್ಕೌಟ್ ಆಗಿಲ್ಲ. ರಸ್ತೆ ಗುಂಡಿಗಳ ಸಮಸ್ಯೆಯ ಬಗ್ಗೆ ಬೆಂಗಳೂರಿನ ಉದ್ಯಮಿಗಳು ಟ್ವೀಟ್ ಮೇಲೆ ಟ್ವೀಟ್ ಮಾಡಿದ್ದರು. ಉದ್ಯಮಿ ಕಿರಣ್ ಮಜುಂದಾರ್ ಶಾ ಕೂಡಾ ಟ್ವೀಟ್ ಮಾಡಿದ್ದರು. ಇದರ ಪರ ವಿರುದ್ಧವಾದ ಅಭಿಪ್ರಾಯಗಳು ವ್ಯಕ್ತವಾಗಿದ್ದವು. ಈ ಹಿನ್ನೆಲೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಕೂಡಾ ಅಧಿಕಾರಿಗಳಿಗೆ ಗುಂಡಿ ಮುಚ್ಚಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದರು. ಅಲ್ಲದೆ ನಗರದ ಕೆಲವು ಕಡೆಗಳಿಗೆ ತೆರಳಿ ಪರಿಶೀಲನೆ ನಡೆಸಿದ್ದರು. ಇವೆಲ್ಲವೂ ಮುಗಿದರೂ ಗುಂಡಿ ಸಮಸ್ಯೆ ಪೂರ್ಣ ಪ್ರಮಾಣದಲ್ಲಿ ಬಗೆಹರಿದಿಲ್ಲ.

**ಬಿಜೆಪಿ ಪ್ರತಿಭಟನೆ**

**ಬೆಂಗಳೂರಿನ ರಸ್ತೆ ಗುಂಡಿ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದ್ದರು. ವಿಪಕ್ಷ ನಾಯಕ ಆರ್ ಅಶೋಕ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗಿತ್ತು. ಬೆಂಗಳೂರಿನ ಬಿಜೆಪಿ ಶಾಸಕರು ಕೂಡಾ ಸಾಥ್ ನೀಡಿದ್ದರು.**

# ಅಕಾಲಿಕ ಸಾವಿಗೀಡಾದ ಜಾನುವಾರುಗಳಿಗೆ ಪರಿಹಾರ ಕೊಡದ ಸರಕಾರ

## ಈ ಹಿಂದೆ ಮೃತ ಎಮ್ಮೆ, ಹೋರಿ, ಹಸು, ಎತ್ತುಗಳಿಗೆ ತಲಾ 10 ಸಾವಿರ ಪರಿಹಾರ ನೀಡಲಾಗುತ್ತಿತ್ತು. ಏಪ್ರಿಲ್‌ನಿಂದ 15 ಸಾವಿರಕ್ಕೆ ಹೆಚ್ಚಿಸಲಾಗಿದೆ

**ಕೊಡಿಗೇನಹಳ್ಳಿ:** ಗಂಭೀರ ಕಾಯಿಲೆ, ವಿಪತ್ತು, ಅವಘಡ, ಹಾವು ಕಡಿತ ಸೇರಿ ಇತರೆ ಕಾಯಿಲೆಗೆ ತುತ್ತಾದ ಜಾನುವಾರುಗಳಿಗೆ ಪರಿಹಾರ ನೀಡಿ, ರೈತರಿಗೆ ನೆರವಾಗುವ ಉದ್ದೇಶದಿಂದ ಜಾರಿಗೆ ಬಂದ ಅನುಗ್ರಹ ಯೋಜನೆಯ ಪರಿಹಾರ ವರ್ಷದಿಂದ ಸಿಗದೆ ರೈತರು ಹೈರಾಣಾಗಿದ್ದಾರೆ. ರಾಜ್ಯ ಸರಕಾರ ಅನುಗ್ರಹ ಯೋಜನೆಯಡಿ 2.64 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ. ಜಿಲ್ಲೆಯಲ್ಲಿ ಫೆಬ್ರವರಿ 2022ರಿಂದ ಜುಲೈ 2025ರವರೆಗೆ ಒಟ್ಟು 3,175 ರಾಸುಗಳು ಮೃತಪಟ್ಟಿವೆ. ಇದರಲ್ಲಿ 1,388 ಜಾನುವಾರು ಮಾಲೀಕರಿಗೆ ಪರಿಹಾರದ ಹಣ ಸಿಕ್ಕಿಲ್ಲ. 1,787 ಜಾನುವಾರುಗಳಿಗೆ 1.76 ಕೋಟಿ ರೂ. ಪರಿಹಾರ ನೀಡಿದ್ದು, 2025ರ ಮೊದಲ ಆರು ತಿಂಗಳಲ್ಲಿ 1,259 ರಾಸುಗಳು ಆಕಸ್ಮಿಕವಾಗಿ ಮೃತಪಟ್ಟಿವೆ. ಕಳೆದ ನವೆಂಬರ್‌ನಿಂದ ಈವರೆಗೆ ಸರಕಾರ ಪರಿಹಾರದ ಹಣ ಬಿಡುಗಡೆ ಮಾಡಿಲ್ಲ.

ಜಿಲ್ಲೆಯಲ್ಲಿ ಹೈನುಗಾರಿಕೆ ಅವಲಂಬಿತ ಕುಟುಂಬಗಳೇ ಹೆಚ್ಚು. ಬಹುತೇಕ ಕುಟುಂಬಗಳು ಪ್ರತಿದಿನ ಡೇರಿಗೆ ಹಾಲು ಹಾಕುವ ಮೂಲಕ ಬದುಕು ಕಟ್ಟಿಕೊಂಡಿವೆ. ಮಳೆಗಾಲದಲ್ಲಿ ಸಿಡಿಲು, ಕಾಯಿಲೆಗೆ ತುತ್ತಾದರೆ ಇಡೀ ಕುಟುಂಬವೇ ಸಂಕಷ್ಟ ಸಿಲುಕುವಂತಾಗಿದೆ.


ಉದಯವಾಹಿನಿ ಚಿತ್ರ

**2.64 ಕೋಟಿ ರೂ. ಬಾಕಿ**

**ಪರಿಹಾರ ಬಾರದೆ ಸಂಕಷ್ಟ:** ರಾಸುಗಳ ಆಕಸ್ಮಿಕ ಸಾವಿಗೀಡಾದರೆ ಪರಿಹಾರದ ಹಣ ಬರುತ್ತದೆಂಬ ನಂಬಿಕೆಯಿಂದ ಹೈನುಗಾರರು ಸಾಲ ಮಾಡಿ ಹಸು ಖರೀದಿಸುತ್ತಿದ್ದಾರೆ.

ರಾಸು ಮೃತಪಟ್ಟು ತಿಂಗಳು ಕಳೆದರೂ ಪರಿಹಾರದ ಹಣ ಖಾತೆ ಸೇರುತಿಲ್ಲ. ಮಾಡಿದ ಸಾಲಕ್ಕೆ ಬಡ್ಡಿ ಕಟ್ಟಲಾಗದೆ, ಕಚೇರಿಗೆ ಅಲೆಯುವಂತಾಗಿದೆ ಎಂದು ಹೈನುಗಾರರು ಅಳಲು ತೋಡಿಕೊಂಡಿದ್ದಾರೆ.

> ಅನುಗ್ರಹ ಯೋಜನೆಯಡಿ ಎಮ್ಮೆ, ಹೋರಿ, ಹಸು, ಎತ್ತುಗಳಿಗೆ ತಲಾ 10,000 ರೂ. ನೀಡಲಾಗುತ್ತಿತ್ತು. ಈ ವರ್ಷ ಏಪ್ರಿಲ್ ನಿಂದ 15,000 ರೂ.ಗೆ ಹೆಚ್ಚಿಸಲಾಗಿದೆ. 2025ರಲ್ಲಿ ಜಿಲ್ಲೆಯಲ್ಲಿ 1,259 ರಾಸುಗಳು ಮೃತಪಟ್ಟಿವೆ. ಅನುಗ್ರಹ ಯೋಜನೆಯಡಿ ಬಾಕಿ ಪರಿಹಾರ ಹಣಕ್ಕೆ ಸರಕಾರಕ್ಕೆ ಮನವಿ ಮಾಡಲಾಗಿದೆ. ಬಾಕಿ ಹಣ ಸದ್ಯದಲ್ಲೇ ಬಿಡುಗಡೆಯಾಗಲಿದ್ದು, ತಕ್ಷಣ ಪಶುಪಾಲಕರಿಗೆ ವಿತರಿಸಲಾಗುವುದು.
>
> –ಶಿವಪ್ರಸಾದ್, ಉಪ ನಿರ್ದೇಶಕ, ಪಶುಸಂಗೋಪನಾ ಇಲಾಖೆ

**ಪರಿಹಾರದ ಮೊತ್ತ ಏರಿಕೆ**

ಖುಷಿಯ ವಿಚಾರವಾದರೂ ಪರಿಹಾರದ ಹಣ ಮಾತ್ರ ಖಾತೆ ಸೇರುತ್ತಿಲ್ಲ. ಜಿಲ್ಲೆಯಿಂದ ಹೆಚ್ಚು ಪ್ರಧಿಸ್ತಾಧಿವಧಿನೆ ರಾಜ್ಯದಲ್ಲಿ ತುಮಕೂರು ಜಿಲ್ಲೆಯಿಂದ ಪರಿಹಾರಕ್ಕೆ ಹೆಚ್ಚು ಪ್ರಸ್ತಾವನೆ ಬರುತ್ತಿದೆ. ಪ್ರತಿ ತಿಂಗಳು ತುಮಕೂರು ಜಿಲ್ಲೆಗೆ ಸುಮಾರು 1.2 ಕೋಟಿ ರೂ. ಪರಿಹಾರದ ಬೇಡಿಕೆ ಇದೆ. ಪರಿಹಾರಕ್ಕೆ ರಾಜಕೀಯ ಒತ್ತಡ ಸೇರಿದಂತೆ ನಾನಾ ಕಾರಣಗಳಿಂದ ಪರಿಹಾರದ ಅರ್ಜಿಗಳು ಹೆಚ್ಚಾಗಿವೆ ಎಂದು ತಿಳಿದು ಬಂದಿದೆ.

**ಅನುಗ್ರಹ ಯೋಜನೆ ಯಾವಾಗ ಲಭ್ಯ:** ಅನುಗ್ರಹ ಯೋಜನೆಯಡಿ ರಾಸುಗಳ ಸಾವಿಗೆ ಪಶುಪಾಲಕರಿಗೆ ಪರಿಹಾರ ಧನ ನೀಡಲಾಗುತ್ತದೆ. ಕಾಯಿಲೆ, ವಿಪತ್ತು , ಅವಘಡ, ಹಾವು ಕಡಿತ ಸೇರಿದಂತೆ ನಾನಾ ಕಾರಣಗಳಿಂದ ಜಾನುವಾರು ಅಕಾಲಿಕ, ಆಕಸ್ಮಿಕ ಸಾವಿಗೀಡದಲ್ಲಿ ಜಾನುವಾರುಗಳ ಪಾಲಕರಿಗೆ ಪರಿಹಾರ ನೀಡಲಾಗುತ್ತದೆ.

# ಸಿಎಂ ಬದಲಾವಣೆ ವಿಚಾರ ವರಿಷ್ಠರಿಗೆ ಬಿಟ್ಟಿದ್ದು: ಸಿಎಂ

• ಉದಯವಾಹಿನಿ, ಶಿಡ್ಲಘಟ್ಟ

ಸಿಎಂ ಬದಲಾವಣೆ ವಿಚಾರದಲ್ಲಿ ವರಿಷ್ಠರು ನೀವೇ ಮುಂದುವರೆಯಿರಿ ಅಂತ ಹೇಳಿದರೆ ನಾನೇ ಮುಂದುವರೆಯುತ್ತೇನೆ. ಯಾವುದಕ್ಕೂ ಪಕ್ಷದ ವರಿಷ್ಠರ ನಿರ್ಧಾರ ಅಂತಿಮ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಿಎಂ ಬದಲಾವಣೆ ವಿಚಾರದ ಬಗ್ಗೆ ಸ್ಪಷ್ಟನೆ ನೀಡಿದರು. ಪಟ್ಟಣದಲ್ಲಿ 2008 ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗು ಶಂಕುಸ್ಥಾಪನೆ ಕಾರ್ಯಕ್ರಮಕ್ಕೂ ಮುನ್ನ ತಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ನಾಲ್ಕೈದು ತಿಂಗಳ ಹಿಂದೆಯೇ ಪಕ್ಷದ ವರಿಷ್ಠರು ಸಚಿವ ಸಂಪುಟವನ್ನು ಪುನರ್ ರಚನೆ ಮಾಡಬೇಕೆಂದು ಹೇಳಿದ್ದರು. ಆದರೆ ನಾನೇ ಎರಡೂವರೆ ವರ್ಷ ಆದ ಮೇಲೆ ಮಾಡೋಣ ಅಂತ ಹೇಳಿದ್ದೆ. ಸಿಎಂ ಬದಲಾವಣೆ ವಿಚಾರದಲ್ಲಿ ಪಕ್ಷದ ವರಿಷ್ಠರು ಏನು ನಿರ್ಧಾರ ತೆಗೆದುಕೊಳ್ಳುತ್ತಾರೆ ಅದನ್ನು ನಾನು ಒಪ್ಪಬೇಕು. ಡಿ.ಕೆ. ಶಿವಕುಮಾರ್ ಸಹ ಒಪ್ಪಬೇಕೆಂದು ಸಿಎಂ ಸಿದ್ದರಾಮಯ್ಯ ಹೇಳಿದರು.





ಕೆಲವು ಶಾಸಕರು ಡಿ.ಕೆ.ಶಿವಕುಮಾರ್ ಅವರನ್ನು ಸಿಎಂ ಮಾಡಬೇಕೆಂದು ಹೇಳಿ ದೆಹಲಿ ಪ್ರವಾಸ ಕೈಗೊಂಡಿರುವ ಕುರಿತು ಕೇಳಿದ ಪ್ರಶ್ನೆಗೆ ಪತ್ರಿಕ್ರಿಯೆ ನೀಡಿದ ಸಿಎಂ, ಯಾರೇ ಏನೇ ಹೇಳಿದರೂ ಅಂತಿಮವಾಗಿ ಪಕ್ಷದ ವರಿಷ್ಟರು ನಿರ್ಧಾರಂತೆ ಎಲ್ಲವೂ ಆಗಲಿದೆ ಎಂದು ಸ್ಪಷ್ಟಪಡಿಸಿದರು.

ಎರಡೂವರೆ ವರ್ಷ ಆದ ಮೇಲೆ ಸಿಎಂ ಸ್ಥಾನ ಬಿಟ್ಟುಕೊಡಬೇಕೆಂಬ ಮಾತು ಕೇಳಿ ಬರುತ್ತಿರುವ ಕುರಿತು ಸುದ್ದಿಗಾರರು ಮರು ಪ್ರಶ್ನೆ ಕೇಳಿದಾಗ ಪಕ್ಷದ ಹೈಕಮಾಂಡ್ ಏನೇ ನಿರ್ಧಾರ ತೆಗೆದುಕೊಂಡರೂ ಅದರಂತೆ ಮುಂದು ವರೆಯುತ್ತೇವೆಂದರು.

**ಶಾಸಕರ ಖರೀದಿ ಬಿಜೆಪಿ ಸಂಸ್ಕೃತಿ; ಡಿಕೆಶಿ ಗರಂ:** ಶಾಸಕರ ಖರೀದಿ ಸಂಸ್ಕೃತಿ ಕಾಂಗ್ರೆಸ್ ಪಕ್ಷದ್ದಲ್ಲ ಅದು ಬಿಜೆಪಿ ಸಂಸ್ಕೃತಿ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಹೇಳಿಕೆಗೆ ಡಿಸಿಎಂ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು.

ಪಟ್ಟಣದಲ್ಲಿ ತಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನವರಿಂದಲೇ ಕಾಂಗ್ರೆಸ್ ಶಾಸಕರ ಖರೀದಿ ಆರೋಪ ವಿಚಾರಕ್ಕೆ ಸಂಬಂಧಿಸಿದಂತೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದ ಅವರು, ಶಾಸಕರ ಖರೀದಿ ಸಂಸ್ಕೃತಿ ಬಿಜೆಪಿಯಲ್ಲಿದೆ ಮುಖ್ಯಮಂತ್ರಿ ಆಗಬೇಕಾದರೆ ಎಷ್ಟು ಸಾವಿರ ಕೋಟಿ ಕೊಡಬೇಕು ಅಂತ ಬಿಜೆಪಿಯವರೇ ಹಿಂದೆ ಹೇಳಿದ್ದಾರೆ. ಅಸೆಂಬ್ಲಿಯಲ್ಲೂ ಸಹ ಎಷ್ಟೆಷ್ಟೋ ಕೋಟಿ ಕೊಟ್ಟು ಶಾಸಕರ ಖರೀದಿ ಬಗ್ಗೆ ದಾಖಲೆಗಳಲ್ಲೇ ಬಂದಿದೆ. ಅವರು ಮಾಡುತ್ತಿದ್ದ ಪ್ರವೃತ್ತಿಯನ್ನು ಈಗ ಅವರು ನೆನಸಿಕೊಳ್ಳುತ್ತಿದ್ದಾರೆ ಅಷ್ಟೇ ಎಂದರು.

ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳುವುದೇ ನಮಗೆ ವೇದ ವಾಕ್ಯ ಎಂದರು.

# ಆರ್ಥಿಕ ಆಸರೆಗೆ ಗೃಹಲಕ್ಷ್ಮಿ ಸಂಘ ಜಾರಿ

• ಉದಯವಾಹಿನಿ, ಕೋಲಾರ

ರಾಜ್ಯದ ಗೃಹಲಕ್ಷ್ಮಿ ಫಲಾನುಭವಿಗಳಿಗೆ ಲಾಭ ತಂದುಕೊಡುವ ಸಲುವಾಗಿ ಇದೇ 28ರಂದು ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘ ಆರಂಭಿಸಲಾಗುತ್ತಿದೆ. ಮೂರು ತಿಂಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಸೊಸೈಟಿ ವಿಸ್ತರಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ಬೆಂಗಳೂರಿನಲ್ಲಿ ನ.28 ರಂದು ನಡೆಯಲಿರುವ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಸುವರ್ಣ ಮಹೋತ್ಸವ. ಅಕ್ಕ ಪಡೆ ಲೋಕಾರ್ಪಣೆ, ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘದ ಉದ್ಘಾಟನಾ ಸಮಾರಂಭದ ಹಿನ್ನೆಲೆಯಲ್ಲಿ ಕೋಲಾರದ ಜಿಲ್ಲಾಡಳಿತ ಭವನದಲ್ಲಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಸ್ತ್ರೀಯರು, ಮಕ್ಕಳ ಹಿತದೃಷ್ಟಿಯಿಂದ ಮಾಜಿ ಪ್ರಧಾನಿ ಇಂದಿರಾ ಗಾಂಧಿ 50 ವರ್ಷಗಳ ಹಿಂದೆ ಐಸಿಡಿಎಸ್ ಯೋಜನೆ ಜಾರಿಗೆ ತಂದು ಅಂಗನವಾಡಿ ಆರಂಭಿಸಿದರು. ಯೋಜನೆಯ ಸುವರ್ಣ ಮಹೋತ್ಸವವನ್ನು ಸಂಭ್ರಮಿಸುವ ಜೊತೆಗೆ ಮುಂದಿನ 50 ವರ್ಷಕ್ಕೆ ಸ್ತ್ರೀ ಸಬಲೀಕರಣಕ್ಕೆ ಅಣಿಗೊಳಿಸುವುದಕ್ಕೆ ಹೆಜ್ಜೆ ಇಡುವಗಳಿಗೆ ಇದಾಗಿದೆ ಎಂದರು. ಸಂಘದ ಬ್ಯಾಂಕ್‌ನಲ್ಲಿ 1 ಸಾವಿರ ಪಾವತಿಸಿ ಷೇರುದಾರರು ಆಗಬೇಕು. ಪ್ರತಿ ತಿಂಗಳು 200 ಠೇವಣಿ ಇಡಬೇಕು. ಆರು ತಿಂಗಳ ಬಳಿಕ ಸಂಘದ ಮೂಲಕ 3 ಲಕ್ಷದವರೆಗೆ ಕಡಿಮೆ ಬಡ್ಡಿ ದರದಲ್ಲಿ ಫಲಾನುಭವಿಗಳಿಗೆ ಸಾಲ ನೀಡಲಾಗುವುದು. ಜೀವವಿಮೆ ಕೂಡ ಇರಲಿದೆ. ಈಗ ಕೆಲವೆಡೆ ಮಹಿಳೆಯರಿಗೆ ಚಕ್ರಬಡ್ಡಿ ರೂಪದಲ್ಲಿ ತೊಂದರೆ ಕೊಡಲಾಗುತ್ತಿದೆ. ಈ ಬ್ಯಾಂಕ್ ಮೂಲಕ ಮಹಿಳೆಯರ ನೆರವಿಗೆ ನಿಲ್ಲಲಾಗುವುದು. ಯಾವುದೇ ಸರ್ಕಾರ ಬಂದರೂ ಈ ಬ್ಯಾಂಕ್ ಮುಂದುವರಿಸಿಕೊಂಡು ಹೋಗಬೇಕಾಗುತ್ತದೆ. ಇದು ನನ್ನ ಕನಸಿನ ಕೂಸು ಎಂದು ಹೇಳಿದರು. ಬಡ ಮಕ್ಕಳಿಗೆ ತಳಹಂತದಲ್ಲಿ ಗುಣಮಟ್ಟದ ಶಿಕ್ಷಣ ಸಿಗುವ ದೃಷ್ಟಿಯಿಂದ ಅಂಗನವಾಡಿ ಕೇಂದ್ರದಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳನ್ನು ಆರಂಭಿಸಲಾಗುತ್ತಿದೆ. ಪೌಷ್ಟಿಕ ಆಹಾರದ ಜೊತೆಗೆ ಉತ್ತಮ ಶಿಕ್ಷಣ ಬಡಮಕ್ಕಳಿಗೆ ಸಿಗಬೇಕು ಎಂಬುದೇ ನಮ್ಮ ಉದ್ದೇಶ ಎಂದರು.

ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ, ಮಹಿಳೆಯರು ಹಾಗೂ ಮಕ್ಕಳಿಗೆ ಧೈರ್ಯ ತುಂಬುವ ಕೆಲಸ ಮಾಡಬೇಕಿದೆ. ಜಿಲ್ಲೆಯಲ್ಲಿ ಈಗಾಗಲೇ ಅಂಗನವಾಡಿ ಕೇಂದ್ರಗಳಿಗೆ ಶೇ. 100ರಷ್ಟು ಖಾತೆ ಮಾಡಿಕೊಟ್ಟಿದ್ದೇವೆ. ಇದು ರಾಜ್ಯದಲ್ಲಿಯೇ ಮೊದಲು. ಈ ಇಲಾಖೆಗೆ ಇನ್ನೂ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಂ.ಎಲ್.ಅನಿಲ್‌ಕುಮಾರ್, ಗ್ಯಾರಂಟಿ ಯೋಜನೆಗಳಲ್ಲಿ ಅತಿ ಹೆಚ್ಚು ಹಣ ಗೃಹಲಕ್ಷ್ಮಿ ಯೋಜನೆಗೆ ಹೋಗುತ್ತಿದೆ. ಮಧ್ಯವರ್ತಿಗಳ ಹಾವಳಿ ಇಲ್ಲದೆ ಯೋಜನೆ ತಲುಪಿಸಲಾಗುತ್ತಿದೆ. ಸರ್ಕಾರದ ಯೋಜನೆ ಪಡೆಯಲು ಎಷ್ಟು ಎಂಬುದು ಗೊತ್ತಿದೆ. ಆದರೆ, ಈ ಯೋಜನೆಗೆ ಯಾರಾದರೂ ಹಣ ನೀಡಿದ್ದೀರಾ' ಎಂದು ಮಹಿಳೆಯರನ್ನು ಕೇಳಿದರು.

# ವೃದ್ಧೆ ಮೇಲೆ ಕರಡಿ ದಾಳಿ ; ಗಂಭೀರ ಗಾಯ

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಲಕ್ಷ್ಮೀಪುರ ಬಳಿಯ ಮಟಕಯ್ಯನದೊಡ್ಡಿ ಗ್ರಾಮದಲ್ಲಿ 75 ವರ್ಷದ ವೃದ್ಧೆ ಈರಮ್ಮ ಎಂಬುವರರ ಮೇಲೆ ಕರಡಿ ದಾಳಿ ನಡೆಸಿದೆ. ದಾಳಿಯ ತೀವ್ರತೆಗೆ ಈರಮ್ಮ ಅವರ ಎರಡು ಕಣ್ಣುಗಳು ಕಿತ್ತು ಹೋಗಿದ್ದು, ತಲೆ, ಭುಜದ ಭಾಗಕ್ಕೂ ತೀವ್ರ ಹಾನಿಯಾಗಿ ಕೂದಲು ಕಿತ್ತು ಬಂದಿದೆ. ಗಂಭೀರವಾಗಿ ಗಾಯಗೊಂಡಿರುವ ಈರಮ್ಮ ಅವರಿಗೆ ರಾಮನಗರ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿದ ಬಳಿಕ, ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ಈರಮ್ಮ ಅವರು ಬೆಳಿಗ್ಗೆ 6ರ ಸುಮಾರಿಗೆ ಲಕ್ಷ್ಮೀಪುರ ಗ್ರಾಮದಿಂದ ಮಟಕಯ್ಯನ ದೊಡ್ಡಿಯಲ್ಲಿರುವ ತಮ್ಮ ಮನೆಗೆ ನಡೆದುಕೊಂಡು ಹೋಗುತ್ತಿದ್ದರು.

ಆಗ ಏಕಾಏಕಿ ಬಂದು ಮೇಲೆರಗಿದ ಕರಡಿ ಮುಖ, ತಲೆ, ಭುಜಕ್ಕೆ ಕಚ್ಚಿದೆ. ಕರಡಿ ದಾಳಿಗೆ ನಿತ್ರಾಣಗೊಂಡ ಈರಮ್ಮ ರಸ್ತೆಯಲ್ಲಿ ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ. ಕೆಲ ಹೊತ್ತಿನ ನಂತರ ಸ್ಥಳೀಯರೊಬ್ಬರು ಅದೇ ಮಾರ್ಗದಲ್ಲಿ ಬಂದಾಗ ರಸ್ತೆಯಲ್ಲಿ ರಕ್ತಸಿಕ್ತವಾಗಿ ಬಿದ್ದಿದ್ದ ಈರಮ್ಮ ಅವರನ್ನು ಕಂಡು, ಕುಟುಂಬದವರಿಗೆ ವಿಷಯ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ನಂತರ, ವಾಹನದಲ್ಲಿ ರಾಮನಗರ ಜಿಲ್ಲಾಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸಿ, ನಂತರ ಬೆಂಗಳೂರಿಗೆ ಕರೆದೊಯ್ದಿದ್ದಾರೆ. ದಾಳಿಯಲ್ಲಿ ಈರಮ್ಮ ಅವರು ಒಂದು ಕಣ್ಣು ಸಂಪೂರ್ಣ ಕಿತ್ತು ಹೋಗಿದ್ದು, ಮತ್ತೊಂದು ಕಣ್ಣಿಗೂ ಹೆಚ್ಚಿನ ಹಾನಿಯಾಗಿದೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ಜಿಲ್ಲಾಸ್ಪತ್ರೆಗೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಂ. ರಾಮಕೃಷ್ಣಪ್ಪ, ಎಸಿಎಫ್ ಪುಟ್ಟಮ್ಮ, ವಲಯ ಅರಣ್ಯಾಧಿಕಾರಿ ಮನ್ಸೂರ್ ಅಹಮದ್, ಉಪ ಉಪ ವಲಯ ಅರಣ್ಯಾಧಿಕಾರಿ ಮಿಥುನ್ ಭೇಟಿ ನೀಡಿ ಈರಮ್ಮ ಅವರ ಆರೋಗ್ಯ ಸ್ಥಿತಿ ವಿಚಾರಿಸಿದರು. ಈರಮ್ಮ ಅವರ ಚಿಕಿತ್ಸಾ ವೆಚ್ಚವನ್ನು ಇಲಾಖೆ ವತಿಯಿಂದ ಭರಿಸಲಾಗುವುದು ಎಂದು ಕುಟುಂಬದವರಿಗೆ ಭರವಸೆ ನೀಡಿದರು.

# ಮೆಕ್ಕೆಜೋಳ ಬೆಂಬಲ ಬೆಲೆಗೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ, ಗೌರಿಬಿದನೂರು

ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ಘೋಷಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಪದಾಧಿಕಾರಿಗಳು ಕೃಷಿ ಉತ್ಪನ್ನ ಮಾರುಕಟ್ಟೆ ಮುಂಭಾಗದಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ತಾಲ್ಲೂಕು ಪಂಚಾಯಿತಿ ಆವರಣದಿಂದ ಕೃಷಿ ಉತ್ಪನ್ನ ಮಾರುಕಟ್ಟೆವರೆಗೆ ಕಾಲ್ನಡಿಗೆ ಜಾಥಾ ಮೂಲಕ ಕೃಷಿ ಉತ್ಪನ್ನ ಮಾರುಕಟ್ಟೆಗೆ ಬಂದ ಪ್ರತಿಭಟನಕಾರರು, ಮಾರುಕಟ್ಟೆ ಮುಂಭಾಗದಲ್ಲಿ ರಸ್ತೆ ತಡೆ ನಡೆಸಿದರು.

ರೈತ ಸಂಘ, ಹಸಿರು ಸೇನೆ ಜಿಲ್ಲಾಧ್ಯಕ್ಷ ಲಕ್ಷ್ಮಿನಾರಾಯಣ್ ಮಾತನಾಡಿ, ತಾಲ್ಲೂಕಿನ ರೈತರು ಮಳೆ, ಚಳಿ, ಗಾಳಿ ಎನ್ನದೆ ಬೆವರು ಸುರಿಸಿ ಮೆಕ್ಕೆಜೋಳ ಬೆಳೆದಿದ್ದಾರೆ. ರಾಜ್ಯದ 224 ಶಾಸಕರು, ಅಬಕಾರಿ, ಸಕ್ಕರೆ ಕಾರ್ಖಾನೆ, ಶಿಕ್ಷಣ ಸಂಸ್ಥೆಗಳ ಲಾಬಿಗಳಲ್ಲಿ ತೊಡಗಿದ್ದಾರೆ. ಯಾರೊಬ್ಬರೂ ಸಹ ಅನ್ನದಾತನ ಸಮಸ್ಯೆ ಬಗೆಹರಿಸಲು ಮುಂದಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮತಗಳಿಗಾಗಿ ಮಾತ್ರವೇ ರೈತರನ್ನು ಬಳಸಿಕೊಳ್ಳುತ್ತಿರುವ ಜನಪ್ರತಿನಿಧಿಗಳು, ರೈತರ ಸಮಸ್ಯೆಗಳನ್ನು ಪರಿಹರಿಸಲು ಯತ್ನ ಮಾಡುತ್ತಿಲ್ಲ. ಇದೀಗ ರೈತರ ಆಕ್ರೋಶದ ಜ್ವಾಲೆ ಸ್ಫೋಟವಾಗುವ ಸಮಯ ಬಂದಿದೆ ಎಂದು ಎಚ್ಚರಿಕೆ ನೀಡಿದರು. ತಾಲ್ಲೂಕಿನಲ್ಲಿ 2012ರಿಂದ ಖರೀದಿ ಕೇಂದ್ರ ತೆಗೆಯಲು ಮನವಿ ಮಾಡಲಾಗಿದೆ. ಆದರೆ, ಈವರೆಗೆ ಖರೀದಿ ಕೇಂದ್ರ ತೆರೆಯಲು ಸರ್ಕಾರ ಮುಂದಾಗಿಲ್ಲ. ಸರ್ಕಾರವು ರೈತರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಮೆಕ್ಕೆಜೋಳದ ಪ್ರತಿ ಕ್ವಿಂಟಲ್‌ಗೆ 2,400 ಬೆಂಬಲ ಬೆಲೆ ಘೋಷಣೆ ಮಾಡಬೇಕು. ರಾಜ್ಯ ಸರ್ಕಾರವು 600 ಸೇರಿಸಿ ಒಟ್ಟು 3,000 ನಿಗದಿಪಡಿಸಬೇಕು. ಬೆಳೆ ವಿಮೆಯಲ್ಲಿನ ತಾರತಮ್ಯವನ್ನು ಸರಿಪಡಿಸಬೇಕು ಎಂದು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

**ಬೇಡಿಕೆ ಈಡೇರುವವರೆಗೆ ಪ್ರತಿಭಟನೆ**

ತಾಲ್ಲೂಕಿನಲ್ಲಿ 53 ಸಾವಿರ ಎಕರೆಯಲ್ಲಿ ಮೆಕ್ಕೆಜೋಳ ಬೆಳೆಯಲಾಗಿದೆ. ಶೇ 90ರಷ್ಟು ಬೆಳೆ ಕಟಾವಿಗೆ ಸಿದ್ಧವಾಗಿದೆ. ಸರ್ಕಾರ 3000 ಬೆಂಬಲ ಬೆಲೆ ನೀಡಬೇಕು ಎಂದು ತಾಲ್ಲೂಕು ಅಧ್ಯಕ್ಷ ಲೋಕೇಶ್ ಗೌಡ ಒತ್ತಾಯಿಸಿದರು. ರೈತರ ಉತ್ಪಾದನಾ ವೆಚ್ಚವೇ ಹೆಚ್ಚಾಗಿರುವುದರಿಂದ ಸರ್ಕಾರ ಕೂಡಲೇ ಬೆಂಬಲ ಬೆಲೆ ಘೋಷಿಸಬೇಕು. ಅಲ್ಲದೆ ಸರ್ಕಾರವು ನಾಳೆಯಿಂದಲೇ ಖರೀದಿ ಪ್ರಾರಂಭಿಸಬೇಕು. ವಿಳಂಬ ಮಾಡಿದಲ್ಲಿ ಇದರ ಲಾಭ ಪಡೆಯುವ ದಲ್ಲಾಳಿಗಳು ರೈತರಿಂದ ಮೆಕ್ಕೆಜೋಳ ಖರೀದಿಸುವ ಸಾಧ್ಯತೆ ಇದೆ. ಇದರಿಂದ ರೈತರಿಗೆ ಅನ್ಯಾಯವಾಗಲಿದೆ. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ನಮ್ಮ ಮನವಿ ಪತ್ರ ಸ್ವೀಕರಿಸುವವರೆಗೆ ನಮ್ಮ ಪ್ರತಿಭಟನೆ ಮುಂದುವರೆಯುತ್ತದೆ.

# ಗಾಂಜಾ ಸೇವನೆ: ತಪಾಸಣೆಗೆ ಖಾಸಗಿ ಆಸ್ಪತ್ರೆ ಮೊರೆ

• ಉದಯವಾಹಿನಿ, ತುಮಕೂರು

ಗಾಂಜಾ ಸೇವಿಸಿ ಸಿಕ್ಕಿಬಿದ್ದವರ ವೈದ್ಯಕೀಯ ತಪಾಸಣೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಸೌಲಭ್ಯ ಇಲ್ಲವಾಗಿದ್ದು, ಪೊಲೀಸರು ಖಾಸಗಿ ಆಸ್ಪತ್ರೆ ಮೊರೆ ಹೋಗಬೇಕಾಗಿದೆ. ಆರೋಪಿಗಳನ್ನು ಪತ್ತೆ ಮಾಡುವುದರ ಜತೆಗೆ ಪರೀಕ್ಷೆ ಮಾಡಿಸಲು ತಮ್ಮ ಜೇಬಿನಿಂದ ಹಣ ಖರ್ಚು ಮಾಡಬೇಕಾಗಿದೆ. ಗಾಂಜಾ ಸೇವನೆಯ ಅನುಮಾನದ ಮೇಲೆ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಾರೆ. ನಂತರ ಗಾಂಜಾ ಸೇವನೆ ಮಾಡಿದ್ದಾರೆಯೇ ಇಲ್ಲವೇ ಎಂದು ಖಚಿತಪಡಿಸಿಕೊಳ್ಳಲು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಬೇಕಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಅಂತಹ ಸೌಲಭ್ಯ ಇಲ್ಲವಾಗಿದ್ದು, ತಪಾಸಣೆಗಾಗಿ ಖಾಸಗಿ ಆಸ್ಪತ್ರೆಗೆ ಕರೆದುಕೊಂಡು ಹೋಗಬೇಕಾಗಿದೆ. ಖಾಸಗಿ ಆಸ್ಪತ್ರೆಯಲ್ಲಿ ಒಬ್ಬರಿಗೆ 250 ಶುಲ್ಕ ನಿಗದಿಪಡಿಸಲಾಗಿದೆ. ಆಯಾ ಪೊಲೀಸ್ ಠಾಣೆ ವ್ಯಾಪ್ತಿಯ ಇನ್ಸ್‌ಪೆಕ್ಟರ್‌ಗಳೇ ಇದಕ್ಕೆ ಹಣ ಪಾವತಿಸಬೇಕಾಗಿದೆ.

ಕಳೆದ ಐದು ವರ್ಷದಲ್ಲಿ ಪರೀಕ್ಷೆಗೆ ಒಳಗಾದವರಲ್ಲಿ 697 ಮಂದಿ ಗಾಂಜಾ ಸೇವನೆ ಮಾಡಿರುವುದು ದೃಢಪಟ್ಟಿದೆ. ಇದಕ್ಕಾಗಿ 1,74,250 ಹಣ ಆಸ್ಪತ್ರೆಗೆ ಕಟ್ಟಲಾಗಿದೆ. ಗಾಂಜಾ ಸೇವನೆ ಮಾಡಿಲ್ಲ ಎಂದು ವಶಕ್ಕೆ ಪಡೆದವರನ್ನು ಬಿಟ್ಟು ಕಳುಹಿಸಿದ ಉದಾಹರಣೆಗಳೂ ಸಾಕಷ್ಟಿವೆ. ಪ್ರತಿ ಪರೀಕ್ಷೆಗೆ ಹಣ ಪಾವತಿ ಕಡ್ಡಾಯ. ಗಾಂಜಾ ಸೇವನೆ ಖಚಿತಪಟ್ಟರೆ ಪ್ರಕರಣ ದಾಖಲಿಸಲಾಗುತ್ತದೆ. ಮುಂದಿನ ಪ್ರಕ್ರಿಯೆಗಳು ನಡೆಯುತ್ತವೆ. ತಪಾಸಣೆಯಲ್ಲಿ ನೆಗೆಟಿವ್ ವರದಿ ಬಂದರೆ ಹಣ, ಸಮಯ ಎರಡೂ ವ್ಯರ್ಥ. ಜಿಲ್ಲಾ ಆಸ್ಪತ್ರೆಯಲ್ಲಿ ಬೃಹತ್ ಕಟ್ಟಡಗಳು ತಲೆಎತ್ತುತ್ತಿವೆ. ಗಾಂಜಾ ಸೇವನೆ ಪರೀಕ್ಷೆಗೆ ಅಗತ್ಯವಾಗಿ ಬೇಕಾದ ಸೌಲಭ್ಯ ಕಲ್ಪಿಸಿಲ್ಲ. ಪೊಲೀಸರು ಅನಿವಾರ್ಯವಾಗಿ ಖಾಸಗಿ ಆಸ್ಪತ್ರೆಗಳನ್ನು ಅವಲಂಬಿಸಿದ್ದಾರೆ. ವರದಿ ಸಿಗುವುದು ಸಹ ಎರಡು–ಮೂರು ದಿನ ವಿಳಂಬವಾಗುತ್ತದೆ. ಸರ್ಕಾರಿ ಆಸ್ಪತ್ರೆಯಲ್ಲಿಯೇ ಇದಕ್ಕೆ ಅವಕಾಶ ಕಲ್ಪಿಸಿದರೆ ಪೊಲೀಸರ ಅಲೆದಾಟ ತಪ್ಪುತ್ತದೆ. ಕೆಲಸವೂ ವೇಗ ಪಡೆಯುತ್ತದೆ. ಜಿಲ್ಲೆಯವರೇ ಆದ ಜಿ.ಪರಮೇಶ್ವರ ಗೃಹ ಸಚಿವರಾಗಿದ್ದಾರೆ. ಹಲವು ವರ್ಷಗಳಿಂದ ಪೊಲೀಸ್ ಇಲಾಖೆ ಅವರ ಉಸ್ತುವಾರಿಯಲ್ಲಿ ಕೆಲಸ ಮಾಡುತ್ತಿದೆ. ಪೊಲೀಸರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಿಲ್ಲ. ಕೆಲವೊಮ್ಮೆ ವೈದ್ಯಕೀಯ ವರದಿಗಾಗಿ ಬೆಂಗಳೂರಿನ ತನಕ ಹೋಗಿ ಬರಬೇಕಾದ ಪರಿಸ್ಥಿತಿಯೂ ನಿರ್ಮಾಣವಾಗುತ್ತದೆ. ನಗರದಲ್ಲಿಯೇ ಕನಿಷ್ಠ ಸೌಲಭ್ಯ ಕಲ್ಪಿಸಿದರೆ ಉತ್ತಮ ಎಂದು ಕೆಲವು ಪೊಲೀಸ್ ಅಧಿಕಾರಿಗಳು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ.


ಉದಯವಾಹಿನಿ ಚಿತ್ರ

**488 ಕೆ.ಜಿ ಗಾಂಜಾ ಜಪ್ತಿ**

**2021ರಿಂದ 2025ರ ಮೇ ಅಂತ್ಯದವರೆಗೆ 2.65 ಕೋಟಿ ಮೌಲ್ಯದ ಮಾದಕ ವಸ್ತು ಜಪ್ತಿ ಮಾಡಲಾಗಿದೆ. 488 ಕೆ.ಜಿ ಗಾಂಜಾ 319 ಗ್ರಾಂ ಓಪಿಎಂ, 100.5 ಗ್ರಾಂ ಎಂಡಿಎಂಎ, 1,720 ಟೆಪೆಂಟಡಾಲ್ ಅಸ್ಪಡಾಲ್ ಮಾತ್ರೆಗಳು ಪತ್ತೆಯಾಗಿವೆ.**

**ಗಾಂಜಾ ಸೇವನೆ ಹೆಚ್ಚಳ: ಸಿಗದ ಜಾಡು:** 20 ವರ್ಷದ ಬಿ.ಕಾಂ ವಿದ್ಯಾರ್ಥಿ ಖಾಸಗಿ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ. ಗಾಂಜಾ ವ್ಯಸನಿಯಾಗಿದ್ದ ಆತನನ್ನು 2025ರ ಮೇ 10ರಂದು ಪೊಲೀಸರು ವಶಕ್ಕೆ ಪಡೆದರು. ನಗರ ಹೊರವಲಯದ ಶಿರಾ ರಸ್ತೆಯ ವೈದ್ಯಕೀಯ ಕಾಲೇಜು ಬಳಿ ಗಾಂಜಾ ತುಂಬಿದ್ದ ಚೀಲದ ಜತೆಗೆ ನಿಂತಿದ್ದ ಇಬ್ಬರನ್ನು ಇದೇ ಮೇ ತಿಂಗಳಲ್ಲಿ ಸೈಬರ್ ಠಾಣೆ ಪೊಲೀಸರು ಬಂಧಿಸಿದರು.

# ನ್ಯಾಯಯುತವಾಗಿ ಸಿಎಂ ಸ್ಥಾನ ಡಿಕೆಶಿಗೆ ಸಿಗಬೇಕಿತು: ಪ್ರತಾಪ್ ಸಿಂಹ

• ಉದಯವಾಹಿನಿ, ಮಂಡ್ಯ

ನ್ಯಾಯಯುತವಾಗಿ ಮುಖ್ಯಮಂತ್ರಿ ಸ್ಥಾನ ಡಿ.ಕೆ. ಶಿವಕುಮಾರ್‌ಗೆ ಸಿಗಬೇಕಿತ್ತು. ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಬಲಹೀನರಾಗಿದ್ದು, ಎಲ್ಲರಿಗೂ ಹೆದರಿಕೊಳ್ಳುವ ಹೈಕಮಾಂಡ್ ಆಗಿದೆ. ಅದಕ್ಕೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾದರು ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಆರೋಪಿಸಿದರು. ಸಿದ್ದರಾಮಯ್ಯನವರು ಡಿ.ಕೆ.ಶಿವಕುಮಾರ್ ಅವರಿಗೆ ಸೀಟು ಬಿಟ್ಟು ಕೊಡ್ತಾರೆ ಅಂತ ಅನಿಸುತ್ತಿಲ್ಲ. ದೇವೇಗೌಡರ ಗರಡಿಯಲ್ಲಿ ಪಳಗಿದ ಸಿದ್ದರಾಮಯ್ಯನವರು ಅಭಿವೃದ್ಧಿ ಕೆಲಸ ಕಲಿತಿದ್ರೆ ರಾಜ್ಯಕ್ಕೆ ಒಳ್ಳೆಯದಾಗುತ್ತಿತ್ತು. ಆದರೆ, ಬರೀ ಪಾಲಿಟಿಕ್ಸ್ ಕಲಿತರು.



ಎರಡೂವರೆ ವರ್ಷ ಒಳ್ಳೆಯ ಕೆಲಸ ಮಾಡಿದ್ರೆ, ಸಿದ್ದರಾಮಯ್ಯ ಮುಂದುವರಿಯಲಿ ಅಂತ ಜನರೇ ಧ್ವನಿ ಎತ್ತುತ್ತಿದ್ದರು. ಕೆಟ್ಟ ಆಡಳಿತ ನೀಡಿದರೂ ಸೀಟು ಬಿಟ್ಟು ಕೊಡುವ ಮನಸಿಲ್ಲ ಎಂದು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಕುಟುಕಿದರು. 2013ರಲ್ಲಿ ಡಾ.ಜಿ. ಪರಮೇಶ್ವರ್ ಕೆಪಿಸಿಸಿ ಅಧ್ಯಕ್ಷರಾಗಿದ್ದರು. ಮೂಲ ಕಾಂಗ್ರೆಸ್ಸಿಗರಾದ ಪರಮೇಶ್ವರ್‌ಗೆ ಅವಕಾಶ ಸಿಗುತ್ತೆ ಅಂತ ಸಿದ್ದರಾಮಯ್ಯನವರು ಸ್ವಜಾತಿಯವರನ್ನು ಛೂ ಬಿಟ್ಟು ಸೋಲಿಸಿ. ಇವರು ಸಿಎಂ ಆಗ್ಬಿಟ್ರು.

2023ರಲ್ಲಿ ಡಿ.ಕೆ.ಶಿವಕುಮಾರ್ ಅವರನ್ನು ಸೋಲಿಸಲು ಸಾಧ್ಯವಾಗಲಿಲ್ಲ. ಡಿಕೆಶಿ ಹುಟ್ಟು ಹೋರಾಟಗಾರ, ರಾಜಕಾರಣ ಚೆನ್ನಾಗಿ ಮಾಡ್ತಾರೆ ಎಂದರು. ನವೆಂಬರ್ ಕ್ರಾಂತಿ ಡಿಸೆಂಬರ್‌ನಲ್ಲಿ ಬ್ರಾಂತಿ ಆಗುತ್ತೆ. ಸತೀಶ್ ಜಾರಕಿಹೋಳಿ ಅವರನ್ನು ಎತ್ತಿ ಕಟ್ಟುವುದು, ಶಾಸಕರನ್ನು ಹಿಡಿದಿಟ್ಟುಕೊಳ್ಳುವ ಕೆಲಸ ಮಾತ್ರ ಆಗುತ್ತಿದೆ. ನಾವು ರೈತರ ಪರ ಧ್ವನಿ ಎತ್ತಿ ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡುತ್ತೇವೆ. ರಾಜ್ಯದಾದ್ಯಂತ ವಿಜಯೇಂದ್ರ, ಆರ್. ಅಶೋಕ್ ನೇತೃತ್ವದಲ್ಲಿ ಹೋರಾಟದ ಕಹಳೆ ಮೊಳಗಲಿದೆ ಎಂದರು.

## ಮಿನಿ ನ್ಯೂಸ್

### ಕರ್ನಾಟಕ ಕಾವಲು ಪಡೆಯಿಂದ ಕನ್ನಡ ರಾಜ್ಯೋತ್ಸವ ಆಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಕರ್ನಾಟಕ ಕಾವಲು ಪಡೆ ಗುಂಡ್ಲುಪೇಟೆ ತಾಲ್ಲೂಕು ಘಟಕದ ವತಿಯಿಂದ 70ನೇ ಕನ್ನಡ ರಾಜ್ಯೋತ್ಸವವನ್ನ ಆಚರಣೆ ಮಾಡಲಾಯಿತು. ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಮುಂಭಾಗ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಸಂಘಟನೆಯ ರಾಜ್ಯಾಧ್ಯಕ್ಷ ಮೋಹನ್ ಕುಮಾರ್ ಗೌಡ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಬಿಜೆಪಿ ಚಾಮರಾಜನಗರ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್, ಮಾನವ ಬಂದುತ್ವ ವೇದಿಕೆ ಜಿಲ್ಲಾ ಸಂಚಾಲಕ ಸುಭಾಷ್ ಮಾಡ್ರಹಳ್ಳಿ, ಡಾ.ನವೀನ್ ಮೌರ್ಯ, ಸಂಘಟನೆ ತಾಲ್ಲೂಕು ಅಧ್ಯಕ್ಷ ಅಬ್ದುಲ್ ಮಾಲೀಕ್, ಕಾರ್ಯದರ್ಶಿ ಮುಬಾರಕ್, ಜಿಲ್ಲಾ ಕಾರ್ಯಾಧ್ಯಕ್ಷ ಅಬ್ದುಲ್ ರಶೀದ್, ಗೌರವಾಧ್ಯಕ್ಷ ರಾಮೇಗೌಡ, ಟೌನ್ ಉಪಾಧ್ಯಕ್ಷ ಸಾಧಿಕ್ ಪಾಷಾ, ಕುಂಜುಟ್ಟಿ, ಮಿಮಿಕ್ರಿ ರಾಜು, ಪತ್ರಿಕಾಪ್ರತಿನಿದಿ ಸದಾನಂದ ಸೇರಿದಂತೆ ಹಲವರು ಹಾಜರಿದ್ದರು.

### ನನಗೆ ಯಾವುದೇ ಬಣವಿಲ್ಲ ಸಿ.ಪಿ. ಯೋಗೇಶ್ವರ್

• ಉದಯವಾಹಿನಿ, ಚನ್ನಪಟ್ಟಣ

ನಾನು ಒಂದು ವರ್ಷದ ಹಿಂದೆ ಕಾಂಗ್ರೆಸ್ ಸೇರಿ ಶಾಸಕನಾಗಿರುವವನು. ಪಕ್ಷದಲ್ಲಿ ನಾನಿನ್ನೂ ಒಂದು ವರ್ಷದ ಮಗು. ನನಗೆ ಯಾವ ಬಣವೂ ಇಲ್ಲ. ನಾಯಕತ್ವ ಬದಲಾವಣೆ ಕುರಿತ ಚರ್ಚೆ ಗೊತ್ತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಬ್ಬರೂ ನಮ್ಮ ನಾಯಕರು ಎಂದು ಶಾಸಕ ಸಿ.ಪಿ. ಯೋಗೇಶ್ವರ್ ಹೇಳಿದರ.

ರಾಜ್ಯದಲ್ಲಿ ಸಿಎಂ ಬದಲಾವಣೆ ಕುರಿತು ಪಟ್ಟಣದಲ್ಲಿ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ವಿಷಯ ಪಕ್ಷದ ಹೈಕಮಾಂಡ್‌ಗೆ ಬಿಟ್ಟದ್ದು. ಈ ವಿಚಾರದಲ್ಲಿ ನನ್ನನ್ನು ಎಳೆದು ತಂದು ಚರ್ಚೆಗೆ ಆಸ್ಪದ ಕೊಡಬೇಡಿ. ನನ್ನ ಪಾಡಿಗೆ ನನ್ನನ್ನು ಬಿಟ್ಟು ಬಿಡಿ. ಈ ವಿಷಯದಲ್ಲಿ ಪಕ್ಷದ ನಾಯಕರು ಸಭೆ ಕರೆದು ಅಭಿಪ್ರಾಯ ಕೇಳಿದರೆ ಹೇಳುತ್ತೇನೆ ಎಂದರು. ಸಹಕಾರ ಇಲಾಖೆಯ ಕೆಲಸವೊಂದರ ವಿಷಯವಾಗಿ ಸಹಕಾರ ಕೇಳುವುದಕ್ಕಾಗಿ ಸಿಎಂ ಅವರನ್ನು ನಾನು ಭೇಟಿಯಾಗಿದ್ದೆ. ಈಗಲೂ ಆ ಕುರಿತು ಕರೆ ಮಾಡಿ ಮಾತನಾಡಿದೆ. ನೀರಾವರಿಗೆ ಸಂಬಂಧಿಸಿದ ಕೆಲಸಗಳ ಬಗ್ಗೆ ಉಪ ಮುಖ್ಯಮಂತ್ರಿ ಅವರನ್ನು ಭೇಟಿಯಾಗಿ ಮಾತನಾಡಿದ್ದೇನೆ. ಅಭಿವೃದ್ಧಿ ದೃಷ್ಟಿಯಿಂದ ಇಬ್ಬರ ಬಳಿಯೂ ಮಾತನಾಡುತ್ತೇನೆಯೇ ಹೊರತು, ರಾಜಕೀಯ ವಿಚಾರವಾಗಿ ಏನನ್ನೂ ಚರ್ಚಿಸಿಲ್ಲ ಎಂದು ಸ್ಪಷ್ಟಪಡಿಸಿದರು.

ಸದ್ಯದ ಬೆಳವಣಿಗೆಗಳ ಕುರಿತು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಈಗಾಗಲೇ ಪ್ರತಿಕ್ರಿಯಿಸಿದ್ದಾರೆ. ಗೊಂದಲವನ್ನು ಬಗೆಹರಿಸುವುದಾಗಿ ಅವರೇ ಹೇಳಿದ್ದಾರೆ. ಹಾಗಾಗಿ, ನಮ್ಮ ಅಭಿಪ್ರಾಯವನ್ನು ಮಾಧ್ಯಮದ ಮುಂದೆ ಹೇಳಲು ಸಾಧ್ಯವಿಲ್ಲ ಎಂದು ತಿಳಿಸಿದರು. ಕಾಂಗ್ರೆಸ್‌ನ ಕೆಲ ಶಾಸಕರ ದೆಹಲಿ ಭೇಟಿ ಕುರಿತು ಪ್ರಶ್ನೆಗೆ, ಆ ಬಗ್ಗೆಯೂ ನನಗೆ ಗೊತ್ತಿಲ್ಲ. ಮಾಗಡಿ ಶಾಸಕ ಬಾಲಕೃಷ್ಣ ಅವರು ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದಾರೆ. ನಮ್ಮ ಜಿಲ್ಲೆಗೆ ಮತ್ತೊಂದು ಸಚಿವ ಸ್ಥಾನ ಬೇಕಿದೆ. ಹಾಗಾಗಿ, ಅದನ್ನು ಕೇಳಲು ದೆಹಲಿಗೆ ಹೋಗಿರಬಹುದು ಎಂದರು.

### ಹನುಮ ಜಯಂತಿ ಆಚರಣೆಗೆ ಸಿದ್ಧತಾ ಪೂರ್ವಭಾವಿ ಸಭೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಪಟ್ಟಣದಲ್ಲಿ ಡಿಸಂಬರ್ 27 ರಂದು ವಿಜೃಂಭಣೆಯಿಂದ ಆಚರಿಸಲು ಉದ್ದೇಶಿಸಿರುವ ಹನುಮ ಜಯಂತಿ ಕಾರ್ಯಕ್ರಮದ ಸಿದ್ಧತಾ ಪೂರ್ವಭಾವಿ ಸಭೆಯನ್ನ ವಿಜಯನಾರಾಯಣ ಸ್ವಾಮಿ ದೇವಸ್ಥಾನದಲ್ಲಿ ನಡೆಸಲಾಯಿತು. ಡಿ. 27ರಂದು ಪಟ್ಟಣದಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲು ಉದ್ದೇಶಿಸಿರುವ ಹನುಮ ಜಯಂತಿ ಕಾರ್ಯಕ್ರಮದ ಪೂರ್ವ ಸಿದ್ಧತಾ ಸಭೆ ವಿಜಯನಾರಾಯಣ ಸ್ವಾಮಿ ದೇವಸ್ಥಾನದಲ್ಲಿ ಹನುಮ ಭಕ್ತರ ಉಪಸ್ಥಿತಿಯಲ್ಲಿ ನಡೆಯಿತು. ಇದೆ ಮೊದಲ ಬಾರಿಗೆ ಆಚರಿಸಲು ಮುಂದಾಗಿರುವ ಹನುಮ ಜಯಂತಿಯಲ್ಲಿ ಶೋಭಾಯಾತ್ರೆ ನಡೆಸಲು ತೀರ್ಮಾನಿಸಲಾಯಿತು, ಕಾರ್ಯಕ್ರಮಕ್ಕೆ ಪಕ್ಷಾತೀತವಾಗಿ ಎಲ್ಲಾ ಸಮುದಾಯವನ್ನ ಒಟ್ಟುಗೂಡಿಸಿ ಆಚರಣೆ ಮಾಡಲು ಒಕ್ಕೂರುಲಿನ ಅಭಿಪ್ರಾಯಕ್ಕೆ ಮನ್ನಣೆ ನೀಡಲಾಯಿತು. ಪ್ರತಿ ಗ್ರಾಮಗಳಿಗೆ ತೆರಳಿ ಹಿರಿಯರು, ಯುವಕರಿಗೆ ಆಹ್ವಾನ ನೀಡಲು ಹಾಗೂ ಹನುಮನ ಮೂರ್ತಿ ಮೆರವಣಿಗೆ ಕುರಿತು ಚರ್ಚಿಸಲಾಯಿತು.

# ದಿನ ದಿನಕ್ಕೂ ಧಾರಣೆ ಏರಿಕೆ, ಸಾವಿರ ರೂ.ನತ್ತ ದ್ವಿತಳಿ ಗೂಡಿನ ದರ

## ● ರಾಮನಗರ ರೇಷ್ಮೆ ಮಾರುಕಟ್ಟೆಯಲ್ಲಿ ದ್ವಿತಳಿ ರೇಷ್ಮೆಗೂಡು 905 ರೂ.ಗೆ ವ್ಯಾಪಾರ, ರೇಷ್ಮೆ ಗೂಡಿಗೆ ಬಂಗಾರದ ಬೆಲೆ

• ಉದಯವಾಹಿನಿ, ರಾಮನಗರ

ಕಳೆದೊಂದು ತಿಂಗಳಿನಿಂದ ರೇಷ್ಮೆ ಧಾರಣೆಯಲ್ಲಿ ಏರಿಕೆಯಾಗುತ್ತಲೇ ಇದ್ದು, ರೇಷ್ಮೆ ಬೆಳೆಗಾರರಲ್ಲಿ ಭಾರಿ ಲಾಭದ ನಿರೀಕ್ಷೆ ಮೂಡಿಸಿದೆ. ಏಷ್ಯಾ ಖಂಡದಲ್ಲಿಯೇ ಪ್ರಸಿದ್ಧಿ ಪಡೆದಿರುವ ರಾಮನಗರ ರೇಷ್ಮೆ ಮಾರುಕಟ್ಟೆಯಲ್ಲಿ ದ್ವಿತಳಿ ಮತ್ತು ಮಿಶ್ರತಳಿಯ ರೇಷ್ಮೆ ಗೂಡುಗಳು ಮಾರಾಟವಾಗುತ್ತವೆ. ಇಲ್ಲಿ ಕೇವಲ ಬೇರೆ ಬೇರೆ ಜಿಲ್ಲೆಯಿಂದ ಮಾತ್ರವಲ್ಲ, ಹೊರ ರಾಜ್ಯದಿಂದಲೂ ಬಂದು ರೇಷ್ಮೆ ಗೂಡುಗಳನ್ನು ಮಾರಾಟ ಮಾಡಿ ಹೋಗುತ್ತಿದ್ದಾರೆ. ಇದರಿಂದಾಗಿ ರೇಷ್ಮೆ ದರ ಕಡಿಮೆಯಾಗುತ್ತಿದೆ. ತಮಗೆ ಒಳ್ಳೆಯ ದರ ಸಿಗುತ್ತಿಲ್ಲ ಎನ್ನುವುದು ರೇಷ್ಮೆ ಬೆಳೆಗಾರರ ಕೊರಗಾಗಿತ್ತು. ಆದರೀಗ ರಾಮನಗರ ರೇಷ್ಮೆ ಮಾರುಕಟ್ಟೆಯಲ್ಲಿ ದಿನೇ ದಿನೆ ರೇಷ್ಮೆ ದರ ಏರಿಕೆಯಾಗುತ್ತಲೇ ಇದ್ದು, ಒಂದು ಕೆ.ಜಿ. ದ್ವಿತಳಿ ರೇಷ್ಮೆ ಗೂಡಿನ ಬೆಲೆ ಸಾವಿರ ರೂಪಾಯಿ ಸಮೀಪಿಸುತ್ತಿದೆ.

**800ರ ಗಡಿ ದಾಟಿದ ರೇಷ್ಮೆ ಧಾರಣೆ:** ಕೆಲವು ತಿಂಗಳ ಹಿಂದೆ ರೇಷ್ಮೆ ಗೂಡಿನ ಬೆಲೆ ಕುಸಿತ ಕಂಡಿತ್ತು. ಆದರೆ ಕಳೆದ ಒಂದು ತಿಂಗಳಿನಿಂದ ರೇಷ್ಮೆ ಧಾರಣೆಯಲ್ಲಿ ಚೇತರಿಕೆ ಕಾಣಿಸಿಕೊಂಡಿದೆ. ಕೆಲ ದಿನಗಳ ಹಿಂದೆ ಒಂದು ಕೆ.ಜಿ. ರೇಷ್ಮೆ ಗೂಡಿನ ಬೆಲೆ 750–800ರ ಆಸುಪಾಸಿನಲ್ಲಿತ್ತು. ಕಳೆದ ವಾರದಿಂದ ರೇಷ್ಮೆ ಧಾರಣೆಯಲ್ಲಿ ಭಾರಿ ಏರಿಕೆ ಕಂಡಿದ್ದು, ಒಂದು ಕೆ.ಜಿ. ರೇಷ್ಮೆ ಗೂಡಿನ ದರ 800ರ ಗಡಿ ದಾಟಿದೆ. ಈಗ 900ರ ಗಡಿಯನ್ನೂ ದಾಟಿ ಸಾವಿರದತ್ತ ಮುನ್ನುಗ್ಗುತ್ತಿರುವುದು ರೇಷ್ಮೆ ಬೆಳಗಾರರ ಸಂತಸಕ್ಕೆ ಕಾರಣವಾಗಿದೆ.

**1 ಕೆ.ಜಿ. ರೇಷ್ಮೆ ಗೂಡು 905 ರೂ.ಗೆ ಹರಾಜು:** ಈ ವರ್ಷದಲ್ಲಿಯೇ ಪ್ರಥಮ ಬಾರಿಗೆ ಒಂದು ಕೆಜಿ ರೇಷ್ಮೆ ಗೂಡಿನ ಬೆಲೆ 900ರ ಗಡಿ ದಾಟಿದ್ದು, ರೈತರಲ್ಲಿ ಭರ್ಜರಿ ಭರವಸೆ ಮೂಡಿಸಿದೆ. ರಾಮನಗರ ರೇಷ್ಮೆ ಮಾರುಕಟ್ಟೆಯಲ್ಲಿ ಒಂದು ಕೆಜಿ ದ್ವಿತಳಿ ರೇಷ್ಮೆಗೂಡು ಬರೋಬ್ಬರಿ 905 ರೂಪಾಯಿಗೆ ಹರಾಜಾಗಿದೆ.


ಉದಯವಾಹಿನಿ ಚಿತ್ರ

**ರೈತರಲ್ಲಿ ಮನೆ ಮಾಡಿದ ಸಂತಸ**

**2022ರಲ್ಲಿ ಸಾವಿರದ ಗಡಿ ದಾಟಿದ್ದ ರೇಷ್ಮೆ ಧಾರಣೆ:** ಸಾಮಾನ್ಯವಾಗಿ 700–800ರ ಆಸುಪಾಸಿನಲ್ಲಿಯೇ ಇರುವ ರೇಷ್ಮೆ ಧಾರಣೆ 2022ರಲ್ಲಿ ದಾಖಲೆ ಬರೆದಿತ್ತು. ಒಂದು ಕೆ.ಜಿ. ರೇಷ್ಮೆ ಗೂಡಿನ ದರ ಒಂದು ಸಾವಿರದ ಗಡಿ ದಾಟುವ ಮೂಲಕ ರೇಷ್ಮೆ ಬೆಳೆಗಾರರ ಸಂತಸಕ್ಕೆ ಕಾರಣವಾಗಿತ್ತು. ರೈತರೊಬ್ಬರು ತಂದಿದ್ದ ರೇಷ್ಮೆ ಗೂಡು ಸಾವಿರ ರೂಪಾಯಿಗಿಂತಲೂ ಹೆಚ್ಚಿನ ಬೆಲೆಗೆ ಹರಾಜಾಗಿತ್ತು. ಇದೀಗ ಈ ವರ್ಷವೂ ರೇಷ್ಮೆ ದರ ಸಾವಿರದ ಗಡಿ ದಾಟಬಹುದು ಎನ್ನುವ ನಿರೀಕ್ಷೆಯಲ್ಲಿ ರೈತರಿದ್ದಾರೆ.

> ದಿನೇದಿನೆ ರೇಷ್ಮೆ ಗೂಡಿನ ದರಲ್ಲಿ ಏರಿಕೆ ಕಂಡುಬರುತ್ತಿದೆ. ಇದು ಇನ್ನೂ ಹೆಚ್ಚಾಗುವ ನಿರೀಕ್ಷೆಯಿದೆ. ರೇಷ್ಮೆ ಧಾರಣೆ ಸಾವಿರ ರೂಪಾಯಿಯನ್ನು ದಾಟುವ ನಿರೀಕ್ಷೆಯಿದ್ದು, ಈ ವರ್ಷ ದಾಖಲೆ ಬರೆಯುವ ವಿಶ್ವಾಸದಲ್ಲಿವೆ. ರೈತರಿಗೂ ಇದರಿಂದ ಬಹಳ ಸಂತಸವಾಗಿದೆ.
>
> –ಎಂ. ಮಲ್ಲಿಕಾರ್ಜುನಸ್ವಾಮಿ, ಉಪನಿರ್ದೇಶಕರು, ರೇಷ್ಮೆ ಇಲಾಖೆ

**ರೇಷ್ಮೆ ದರ ಏರಿಕೆಗೆ ಕಾರಣಗಳೇನು?**

ಆವಕ ಕಡಿಮೆಯಾಗುತ್ತಿರುವುದೇ ರೇಷ್ಮೆ ಧಾರಣೆಯಲ್ಲಿ ಏರಿಕೆಯಾಗುತ್ತಿರುವುದಕ್ಕೆ ಪ್ರಮುಖ ಕಾರಣ ಚಳಿಗಾಲ ಇರುವುದರಿಂದ ಹಿಪ್ಪುನೇರಳೆ ಸೊಪ್ಪು ಹೆಚ್ಚು ಬೆಳೆಯುವುದಿಲ್ಲ. ಸೊಪ್ಪು ಇಲ್ಲದಾಗ ಸಹಜವಾಗಿ ಹುಳುಗಳ ಸಾಕಾಣಿಕೆ ಪ್ರಮಾಣವೂ ಕಡಿಮೆ ಇರುತ್ತದೆ. ಆದ್ದರಿಂದ ಎಲ್ಲಾ ಮಾರುಕಟ್ಟೆಯಲ್ಲಿಯೂ ರೇಷ್ಮೆ ಗೂಡಿನ ಆವಕ ಕಡಿಮೆಯಾಗಿದೆ. ಮತ್ತೊಂದೆಡೆ ರಾಮನಗರ ರೇಷ್ಮೆ ಮಾರುಕಟ್ಟೆಯಲ್ಲಿ ಕೆಲವು ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಮಾರುಕಟ್ಟೆಯ ಪ್ರತಿ ವಿಭಾಗದಲ್ಲಿಯೂ ಸಿಸಿಟಿವಿ ಅಳವಡಿಕೆ ಮಾಡಲಾಗಿದ್ದು, ರೇಷ್ಮೆ ಬೆಳೆಗಾರರಿಗೆ ಆಗುತ್ತಿದ್ದ ತೊಂದರೆಗಳಿಗೆ ಬ್ರೇಕ್ ಬಿದ್ದಿದೆ. ರೇಷ್ಮೆ ಗೂಡು ಕದಿಯುತ್ತಿದ್ದವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಠಿಣ ಕ್ರಮ ಜರುಗಿಸಲಾಗುತ್ತಿದೆ. ರೈತರಿಗೆ ನೇರವಾಗಿ ಗೂಡಿನ ಮೌಲ್ಯಕ್ಕೆ ತಕ್ಕಂತೆ ದರ ಸಿಗುವ ವ್ಯವಸ್ಥೆ, ಇ-ಪೇಮೆಂಟ್ ವ್ಯವಸ್ಥೆ ಜಾರಿ ಸೇರಿದಂತೆ ಇನ್ನಿತರ ಸುಧಾರಣೆಗಳನ್ನು ತಂದಿರುವುದರಿಂದ ರೈತರಿಗೆ ನೈಜ ಬೆಲೆ ಸಿಗುತ್ತಿದೆ ಎನ್ನಲಾಗುತ್ತಿದೆ.

**ಕೆಸ್ತೂರು ರೈತ ಬಸವರಾಜುಗೆ ಸಿಕ್ಕಿತು ಬಂಪರ್ ಬೆಲೆ:** ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಕೆಸ್ತೂರು ಗ್ರಾಮದ ರೈತ ಬಸವರಾಜು ಎಂಬುವವರು ರೇಷ್ಮೆ ಗೂಡುಗಳನ್ನು ಮಾರಾಟ ಮಾಡಲು ಬಂದಿದ್ದರು. ಉತ್ತಮ ಗುಣಮಟ್ಟದ ದ್ವಿತಳಿಯ 102 ಕೆ.ಜಿ. ರೇಷ್ಮೆ ಗೂಡುಗಳನ್ನು ಮಾರಾಟಕ್ಕೆ ತೆಗೆದುಕೊಂಡು ಬಂದಿದ್ದರು. ಈ ರೇಷ್ಮೆ ಲಾಟು ತಲಾ ಒಂದು ಕೆ.ಜಿ.ಗೆ 905 ರೂಪಾಯಿಗೆ ಹರಾಜಾಗುವ ಮೂಲಕ ದಾಖಲೆ ನಿರ್ಮಿಸಿದೆ. ರೈತ ಬಸವರಾಜು ಅವರು ತಂದಿದ್ದ ರೇಷ್ಮೆ ಗೂಡುಗಳನ್ನು ಈ ದಾಖಲೆಯ ಮೊತ್ತ ನೀಡಿ ಕೆಎಸಿಯವರು ಖರೀದಿ ಮಾಡಿದ್ದಾರೆ.

ಅಂತರಾಳದಿಂದ..
EDITORIAL

# ನವಜಾತ ಶಿಶುಗಳ ಸಾವುಗಳಿಗೆ ಕೊನೆ ಯಾವಾಗ?




ಆದರೂ ತಡೆಯಲು ಸಾಧ್ಯವಾಗಿಲ್ಲ ಎಂಬುದು ವಿಷಾದದ ಸಂಗತಿಯಾಗಿದೆ. ನಮ್ಮ ಕರ್ನಾಟಕವನ್ನೇ ಉದಾಹರಣೆಯಾಗಿ ತೆಗೆದುಕೊಂಡರೆ ಕಳೆದ ಮೂರು ವರ್ಷಗಳಲ್ಲಿ 18,931 ನವಜಾತ ಶಿಶುಗಳು ಸಾವನ್ನಪ್ಪಿವೆ ಎಂಬುದು ಕಳವಳಕಾರಿ ಸಂಗತಿಯಾಗಿದೆ. ಆರೋಗ್ಯ ನಿರ್ವಹಣಾ ಮಾಹಿತಿ ವ್ಯವಸ್ಥೆಯ ಅಂಕಿ ಅಂಶಗಳ ಪ್ರಕಾರ 2022–2300ರಲ್ಲಿ 7,471ಹಾಗೂ 2023–2400 5,634 2024–2500 5,826.ರಾಜಧಾನಿ ಬೆಂಗಳೂರು ಮೊದಲ ಸ್ಥಾನದಲ್ಲಿದೆ. ಬೆಂಗಳೂರಿನಲ್ಲಿ 2,324 ಶಿಶುಗಳ ಸಾವು ದಾಖಲಾಗಿದೆ. ರಾಯಚೂರು, ಬಳ್ಳಾರಿ, ಬೆಳಗಾವಿ, ಮೈಸೂರು ಮುಂತಾದ ಜಿಲ್ಲೆಗಳು ನಂತರದ ಸ್ಥಾನದಲ್ಲಿ ಇವೆ. ದೇಶದ ಉಳಿದ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಶಿಶು ಮರಣ ಪ್ರಮಾಣ ಕೊಂಚ ಕಡಿಮೆ. 1,000 ಜೀವಂತ ಜನನಗಳಿಗೆ 12ಕ್ಕೆ ಇಳಿಕೆಯಾಗಿದೆ. ಆದರೆ ಪಕ್ಕದ ಕೇರಳದಲ್ಲಿ ಇದರ ಪ್ರಮಾಣ 5 ಇದೆ. ಹಾಗಾಗಿ ಇದು ಇನ್ನಷ್ಟು ಕಡಿಮೆಯಾಗಬೇಕಾಗಿದೆ. ಮತ್ತೊಂದು ಗಮನಿಸಬೇಕಾದ ಅಂಶವೆಂದರೆ ಗ್ರಾಮೀಣ ಪ್ರದೇಶಗಳಿಗಿಂತ ನಗರ ಪ್ರದೇಶಗಳಲ್ಲಿ ಶಿಶು ಸಾವಿನ ಪ್ರಕರಣಗಳು ಜಾಸ್ತಿಯಾಗಿವೆ. ಹಾಗೆ ನೋಡಿದರೆ ಗ್ರಾಮೀಣ ಪ್ರದೇಶಗಳಲ್ಲಿ ಸರಕಾರದ ಆರೋಗ್ಯ ಸೇವೆ, ಆಸ್ಪತ್ರೆಗಳು ಕಡಿಮೆ. ನಗರ ಪ್ರದೇಶದಲ್ಲಿ ದಿನದ 24 ತಾಸುಗಳ ಕಾಲ ಕಾರ್ಯ ನಿರ್ವಹಿಸುವ ಆಸ್ಪತ್ರೆಗಳಿರುತ್ತವೆ. ಆದರೂ ನಗರ ಪ್ರದೇಶಗಳಲ್ಲಿ ನವಜಾತ ಶಿಶುಗಳ ಮರಣ ಹೆಚ್ಚಾಗಿರುವುದು ವಿಪರ್ಯಾಸದ ಸಂಗತಿಯಾಗಿದೆ. ಈ ಶಿಶುಗಳ ಸಾವಿಗೆ ಹಲವಾರು ಕಾರಣಗಳಿವೆ. ಇದಕ್ಕೆ ಅವಧಿ ಪೂರ್ವ ಜನನ, ಉಸಿರುಗಟ್ಟುವಿಕೆ, ಕಡಿಮೆ ತೂಕ, ನ್ಯುಮೋನಿಯಾ ಹೀಗೆ ಹಲವಾರು ಕಾರಣಗಳನ್ನು ಕೊಡಬಹುದು.

**ದೇಶಕ್ಕೆ ಸ್ವಾತಂತ್ರ್ಯ ಬಂದು ಏಳೂವರೆ ದಶಕಗಳು ಗತಿಸಿದವು. ಅಭಿವೃದ್ಧಿಯ ದಿಕ್ಕಿನಲ್ಲಿ ದೇಶ ದಾಪುಗಾಲಿಡುತ್ತಾ ಸಾಗಿದರೂ ಮಾನವಾಭಿವೃದ್ಧಿಯಲ್ಲಿ ನಿಜವಾದ ಗುರಿಯನ್ನು ತಲುಪಲು ಸಾಧ್ಯವಾಗಿಲ್ಲ ಎಂಬುದು ವಾಸ್ತವ ಸಂಗತಿ. ಉಳಿದುದೇನೇ ಇರಲಿ ಹೆಚ್ಚುತ್ತಿರುವ ನವಜಾತ ಶಿಶುಗಳ ಸಾವನ್ನು ತಡೆಯಲು ಈ ವರೆಗೆ ಸಾಧ್ಯವಾಗಿಲ್ಲ. ಈ ಸಾವುಗಳಿಗೆ ಏನು ಕಾರಣ ಎಂಬುದು ಸರಕಾರಕ್ಕೂ ಗೊತ್ತಿದೆ. ಹಾಗಾಗಿಯೇ ಕೆಲವು ಯೋಜನೆಗಳನ್ನು ರೂಪಿಸಿ ಇದನ್ನು ತಡೆಯಲು ಕ್ರಮಗಳನ್ನು ಕೈಗೊಳ್ಳುತ್ತಲೇ ಇದೆ.**

ಕೇಂದ್ರ ಮತ್ತು ರಾಜ್ಯ ಸರಕಾರಗಳು ಕೋಟ್ಯಂತರ ರೂಪಾಯಿ ಅನುದಾನವನ್ನು ನೀಡುತ್ತವೆ. ಹಲವಾರು ಆಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ನವಜಾತ ಶಿಶುಗಳ ಆರೋಗ್ಯ ಘಟಕಗಳು, ಸ್ಥಿರೀಕರಣ ಘಟಕಗಳು, ನವಜಾತ ಶಿಶುಗಳ ಶಿಶು ಆರೋಗ್ಯ ಕೇಂದ್ರಗಳು ಎನ್.ಬಿ.ಸಿ ಹಾಗೂ ಮದರ್ ಕೇರ್ ವಾರ್ಡುಗಳಂಥ ವಿಶೇಷ ಸೌಕರ್ಯಗಳನ್ನು ಒದಗಿಸಲಾಗಿದೆ. ಇವೆಲ್ಲ ಇದ್ದರೂ ಶಿಶು ಮರಣವನ್ನು ಸಂಪೂರ್ಣ ತೊಡೆದು ಹಾಕಲು ಸಾಧ್ಯವಾಗಿಲ್ಲ ಎಂಬುದು ಆತಂಕದ ಸಂಗತಿಯಾಗಿದೆ.

ಮಹಿಳೆಯರಿಗೆ ಗರ್ಭಾವಸ್ಥೆಯಲ್ಲಿ ಪೌಷ್ಟಿಕಾಹಾರ ಕೊರತೆ, ಮಾತ್ರವಲ್ಲ ಬಾಣಂತಿಯರಿಗೆ ಮತ್ತು ಅವರ ಕುಟುಂಬದವರಿಗೆ ನವಜಾತ ಶಿಶುವಿನ ಆರೋಗ್ಯದ ಬಗ್ಗೆ ತಿಳುವಳಿಕೆಯ ಅಭಾವ ನವಜಾತ ಶಿಶು ಮರಣಕ್ಕೆ ಕಾರಣವಾಗಿದೆ. ಸೂಕ್ತ ವೈದ್ಯಕೀಯ ಮಾರ್ಗದರ್ಶನದ ಕೊರತೆ ಕೂಡ ಇದಕ್ಕೆ ಇನ್ನೊಂದು ಕಾರಣವಾಗಿದೆ. ಇಷ್ಟೆಲ್ಲಾ ಸೌಕರ್ಯಗಳನ್ನು ಒದಗಿಸಿದರೂ ಶಿಶು ಮರಣದ ಪ್ರಮಾಣವನ್ನು ಕಡಿಮೆ ಮಾಡಲು ಇಲ್ಲವೇ ನಿವಾರಿಸಲು ಯಾಕೆ ಸಾಧ್ಯವಾಗಿಲ್ಲ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ. ಇಂದಿನ ಮಕ್ಕಳನ್ನು ನಾಳಿನ ನಾಗರಿಕರೆಂದು ಕರೆಯಲಾಗುತ್ತದೆ. ಆದರೆ ಆ ಮಕ್ಕಳ ಸರ್ವತೋಮುಖ ಏಳಿಗೆಗೆ ಸಮಗ್ರವಾದ ಯೋಜನೆಯನ್ನು ಯನ್ನು ರೂಪಿಸಲು ಈವರೆಗೆ ಸಾಧ್ಯವಾಗಿಲ್ಲ. ದೇಶದಲ್ಲಿ ಕೆಲಸಕ್ಕೆ ಬಾರದ ವಿಷಯಗಳ ಬಗ್ಗೆ ಆರೋಪ, ಪ್ರತ್ಯಾರೋಪಗಳು ಕೇಳಿಬರುತ್ತವೆ. ಜಾತಿ, ಮತದ ಹೆಸರಿನಲ್ಲಿ ನಿತ್ಯ ಕೋಲಾಹಲಗಳು ನಡೆಯುತ್ತವೆ. ಆದರೆ ಶಿಶುಗಳ ಸಾವಿನ ಬಗ್ಗೆ ಹಾಗೂ ಮಕ್ಕಳ ಭವಿಷ್ಯದ ಬಗ್ಗೆ ಯಾರೂ ಯೋಚಿಸುತ್ತಿಲ್ಲ. ಈ ಬಗ್ಗೆ ಚರ್ಚೆಯಾಗುತ್ತಿಲ್ಲ. ಇದು ವಿಷಾದದ ಸಂಗತಿಯಾಗಿದೆ. ಗರ್ಭಿಣಿಯರು, ಬಾಣಂತಿಯರು ಸೇರಿದಂತೆ ಬಡ ಹಿಂದುಳಿದ ಕುಟುಂಬಗಳಿಗೆ ಸೇರಿದ ಮಹಿಳೆಯರು ಪೌಷ್ಟಿಕಾಂಶದ ಕೊರತೆಯಿಂದಾಗಿ ಅಸು ನೀಗಿದ ಉದಾಹರಣೆಗಳು ಸಾಕಷ್ಟು ಇವೆ. ನಮ್ಮ ರಾಜ್ಯದಲ್ಲಿ ಕಲಬುರಗಿ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಮಹಿಳೆಯರು ಪೌಷ್ಟಿಕಾಂಶದ ಕೊರತೆಯಿಂದ ಬಳಲುತ್ತಿರುವ ಸಂಗತಿ ಹೊಸದೇನಲ್ಲ.ಇದರ ಪರಿಣಾಮ ನವಜಾತ ಶಿಶುಗಳ ಮೇಲೂ ಆಗುತ್ತಿರುವುದರಿಂದ ಶಿಶು ಮರಣಗಳ ಪ್ರಮಾಣ ಜಾಸ್ತಿಯಾಗುತ್ತಿದೆ. ಶಿಶು ಮರಣವನ್ನು ತಡೆಯಲು ಕೇಂದ್ರ ಮತ್ತು ರಾಜ್ಯ ಸರಕಾರಗಳು ಕಾಟಾಚಾರದ ಯೋಜನೆಗಳನ್ನು ರೂಪಿಸಿದರೆ ಸಾಲದು. ಇಂಥ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗೆಗೂ ಎಚ್ಚರ ವಹಿಸಬೇಕಾಗಿದೆ. ಇದರಲ್ಲಿ ಸಮಾಜದ ಪಾತ್ರವೂ ಮುಖ್ಯವಾಗಿದೆ. ಕೇಂದ್ರ ಸರಕಾರ ಮತ್ತು ರಾಜ್ಯ ಸರಕಾರಗಳು ಯಾವ್ಯಾವುದಕ್ಕೋ ಕೋಟ್ಯಂತರ ರೂಪಾಯಿಗಳನ್ನು ಖರ್ಚು ಮಾಡುತ್ತವೆ. ಬ್ಯಾಂಕುಗಳ ಸಾಲವನ್ನು ಕಟ್ಟಲಾಗದ ಕೋಟ್ಯಧೀಶ ಉದ್ಯಮ ಪತಿಗಳ ಸಾವಿರಾರು ಕೋಟಿ ರೂಪಾಯಿ ಮನ್ನಾ ಮಾಡಲಾಗುತ್ತದೆ. ಆದರೆ ಮಕ್ಕಳ, ಮಹಿಳೆಯರ ಆರೋಗ್ಯಕ್ಕೆ ಸಂಬಂಧಿಸಿದಂತೆ ಅವಶ್ಯವಿರುವಷ್ಟು ಹಣವನ್ನು ಒದಗಿಸುವ ಬಗ್ಗೆ ಅಸಕ್ತಿಯನ್ನು ತೋರಿಸುತ್ತಿಲ್ಲ. ಇದು ವಿಷಾದದ ಸಂಗತಿಯಾಗಿದೆ. ನಮ್ಮ ಜನ ಪ್ರತಿನಿಧಿಗಳು ಕೂಡ ಶಿಶು ಮರಣವನ್ನು ಸಂಪೂರ್ಣವಾಗಿ ತೊಡೆದು ಹಾಕಲು ಆಸಕ್ತಿ ತೋರಿಸಬೇಕಾಗಿದೆ.

# ರಾಮಾಯಣ



**ಆಮೇಲೆ ಶ್ರೀರಾಮನು ಲಕ್ಷ್ಮಣನ ಕಡೆಗೆ ತಿರುಗಿ ಹೀಗೆಂದನು**

• ಹಿಂದಿನ ಸಂಚಿಕೆಯಿಂದ 120 **ನೆಯ ಅಧ್ಯಾಯ**

ನೀನೇನಾದರೂ ಅವಳನ್ನು ನೋಡಿದೆಯಾ ನಿನ್ನೊಡನೆ ಅವಳು ಆಟವಾಡಲು ಬರಲಿಲ್ಲವೆ ಓ ಗಜರಾಜ, ನಿನಗೆ ಜಾನಕಿಯ ವೃತ್ತಾಂತವು ಗೊತ್ತಿರಬೇಕು. ಅದನ್ನು ದಯೆಮಾಡಿ ನನಗೆ ಹೇಳು. ಎಲೈ ವ್ಯಾಘ್ರವೆ, ಹೆದರಬೇಡ. ನನ್ನ ಸೀತೆಯ ಸುದ್ದಿಯನ್ನು ಹೇಳು. ನಿನಗೆ ನಾನು ಹಿಂಸೆಯನ್ನು ಕೊಡುವುದಿಲ್ಲ ಅನಂತರ ಮೃಗಗಳೂ ಉತ್ತರವನ್ನು ಕೊಡದಿರಲು ಶ್ರೀರಾಮನು ಶೋಕದಿಂದ ಉನ್ಮತ್ತನಾದನು. ಸೀತೆಯು ಅರಣ್ಯದಲ್ಲಿ ಸುಳಿದಾಡಿದಂತೆ ಕಾಣಿಸಿತು. ಓ ಪ್ರಿಯೆ, ಕಮಲನೇತ್ರ, ನಿನ್ನನ್ನು ನೋಡಿಬಿಟ್ಟೆನು. ಏಕೆ ಓಡಿಹೋಗುತ್ತೀಯೆ ಅಗೋ, ಮರದ ಹಿಂದೆ ಮರೆಯಾದಳು. ನನ್ನೊಡನೆ ಮಾತನಾಡದೆ ಅಡಗಿಕೊಂಡಿದ್ದೀಯಾ ಸುಂದರಿ, ನಿಲ್ಲು ನಿಲ್ಲು.

ನನ್ನಲ್ಲಿ ನಿನಗೆ ಕರುಣೆ ಇಲ್ಲವೆ ಯಾವಾಗಲೂ ಇಷ್ಟು ಅತಿರೇಕವಾಗಿ ನೀನು ಹಾಸ್ಯಮಾಡಿದವಳಲ್ಲ. ನನ್ನ ಮೇಲೆ ನಿನಗೇಕೆ ಉಪೇಕ್ಷೆ ಸೀತೆ, ನೀನು ಉಟ್ಟಿದ್ದ ರೇಷ್ಮೆಯ ಸೀರೆ ಕಂಡುಹೋಯಿತು ! ಏಕೆ ಸುಮ್ಮನೆ ಓಡುತ್ತಿದ್ದೀಯೆ ನಿಲ್ಲು ನಿಲ್ಲು ಎಂದು ಹಲಬಿದನು.

**ಆಮೇಲೆ ಶ್ರೀರಾಮನು ಲಕ್ಷ್ಮಣನ ಕಡೆಗೆ ತಿರುಗಿ ಹೀಗೆಂದನು:**

ಲಕ್ಷ್ಮಣ, ಮಾಂಸಾಹಾರಿ ಗಳಾದ ರಾಕ್ಷಸರು ಆ ಹುಡುಗಿಯನ್ನು ಕೊಯ್ದು ಕೊಯ್ದು ತಿಂದುಬಿಟ್ಟಿರಬೇಕು. ಆ ಸಮಯದಲ್ಲಿ ಅವಳ ಸುಂದರವಾದ ಮುಖವು ಕೊರಗಿ ಕುಗ್ಗಿ ಎಷ್ಟು ಬಾಡಿಹೋಗಿರಬಹುದು ಆ ಸುಂದರವಾದ ದಂತಪಂಕ್ತಿ, ಮನೋಜ್ಞವಾದ ನಾಸಿಕೆ, ಚಂದವಾದ ಓಲೆಗಳು–ಇವುಗಳಿಂದ ವಿರಾಜಿಸುತ್ತಿದ್ದ ಪೂರ್ಣ ಚಂದ್ರನಂತಹ ಮುಖಕ್ಕೆ ರಾಹು ಹಿಡಿದಂತಾಗಿರಬೇಕು ಸಂಪಿಗೆ ಹೂವಿನಂತೆ ಮೈಬಣ್ಣವಿದ್ದ ಆ ಕೋಮಲಾಂಗಿಯು, ರಾಕ್ಷಸರು ಕೊಯ್ದು ಕೊಯ್ದುತಿನ್ನುವಾಗ ಎಷ್ಟೊಂದು ಗೋಳಾಡಿರಬೇಕು ಪಲ್ಲವದಂತೆ ಮೃದುವಾದ ಕೈಗಳನ್ನು ಆಭರಣಸಹಿತವಾಗಿ ಅತ್ತಿಂದಿತ್ತ ಎಳೆದಾಡುತ್ತ ರಾಕ್ಷಸರು ತಿಂದಿರಬೇಕು ರಾಕ್ಷಸರು ತಿನ್ನಲೆಂದೇ ನಾನು ಅವಳನ್ನು ಬಿಟ್ಟು ಹೋದಂತಾಯಿತಲ್ಲ ಸಕಲ ಬಂಧುಬಾಂಧವರಿದ್ದರೂ ಸೀತೆಯು ಅನಾಥಳಾದಳು. ಅಯ್ಯೋ ಲಕ್ಷ್ಮಣ, ನಿನಗೆ ಎಲ್ಲಾದರೂ ಸೀತೆ ಕಾಣಿಸುತ್ತಿದ್ದಾಳೆಯೆ ಹಾ ಪ್ರಿಯೆ ಹಾ ಸೀತೆ ಎಲ್ಲಿ ಹೋದೆ ಎಂದು ಹಲುಬುತ್ತಿದ್ದನು.

ಹೀಗೆ ಹಲುಬುತ್ತ ಶ್ರೀರಾಮನು ವನದಿಂದ ವನಕ್ಕೆ ಓಡುತ್ತ ಎಡವುತ್ತ ಮುಗ್ಗರಿಸುತ್ತ ಹುಚ್ಚನಂತೆ ಮಾತನಾಡುತ್ತ ಹೊಳೆಯ ತೀರದಲ್ಲಿ ಬೆಟ್ಟದ ಕಿಬ್ಬದಿಯಲ್ಲಿ ಎಲ್ಲೆಲ್ಲಿಯೂ ಸೀತಾದೇವಿ ಯನ್ನು ಹುಡುಕಿದನು. ಆಮೇಲೆ ದಶರಥರಾಯನ ಕುಮಾರನಾದ ಶ್ರೀರಾಮನು ಪರ್ಣಶಾಲೆಯಲ್ಲಿ ಸೀತಾದೇವಿಯನ್ನು ಕಾಣದೆ ಅಲ್ಲಿ ಬಿದ್ದಿದ್ದ ದರ್ಭೆಚಾಪೆಗಳನ್ನು ನೋಡಿ ಲಕ್ಷ್ಮಣನ ಎರಡು ಭುಜಗಳನ್ನೂ ಹಿಡಿದುಕೊಂಡು ಹೀಗೆ ವಿಲಾಪಿಸಿದಳು: ಲಕ್ಷ್ಮಣ, ಸೀತಾದೇವಿಯು ಎಲ್ಲಿರಬಹುದು ಇಲ್ಲಿಂದ ಯಾವ ದಿಕ್ಕಿಗೆ ಹೋಗಿರಬಹುದು ಆಕೆಯನ್ನು ಯಾರು ಹಿಡಿದುಕೊಂಡು ಹೋದರೊ ಯಾರು ಭಕ್ಷಿಸಿದರೆ ಸೀತೆ, ವೃಕ್ಷಗಳ ಮರೆಯಲ್ಲಿ ಅವಿತುಕೊಂಡಿದ್ದೀಯಾ? ಹಾಸ್ಯ ಮಾಡಬೇಡ.

**ಮುಂದುವರಿಯುವುದು...**

# ಡಿಜಿಟಲ್ ಯುಗದಲ್ಲಿ ಮಾನಸಿಕ ಆರೋಗ್ಯ



ವಿಶ್ವಾಸ್.ಡಿ.ಗೌಡ

ಇಂದು ನಾವು ಬದುಕುತ್ತಿರುವ ಯುಗ ಡಿಜಿಟಲ್ ಕ್ರಾಂತಿಯ ಶಿಖರ. ಮಾಹಿತಿಯ ವೇಗ, ತಂತ್ರಜ್ಞಾನಗಳ ವಿಶಾಲ ಜಾಲ, ಮತ್ತು ಕೈಯಲ್ಲೇ ಜಗತ್ತನ್ನೇ ಹಿಡಿದಿರುವ ಸ್ಮಾರ್ಟ್‌ಫೋನ್‌ಗಳು ಇವು ಎಲ್ಲಾವೂ ಮಾನವನ ಬದುಕನ್ನು ಸುಲಭಗೊಳಿಸಿದರೂ, ಅವುಗಳಲ್ಲಿ ಅಡಗಿರುವ ಕಾಣದ ಒತ್ತಡಗಳು ಮಾನಸಿಕ ಆರೋಗ್ಯಕ್ಕೆ ಹೊಸ ಸವಾಲುಗಳನ್ನು ತಂದಿವೆ.

ತಾಂತ್ರಿಕ ದೃಷ್ಟಿಯಿಂದ ನೋಡಿದರೆ, ಡಿಜಿಟಲ್ ಉಪಕರಣಗಳು ಮಾನವನ ಮೆದುಳಿನ ರಿವಾರ್ಡ್ ಸಿಸ್ಟಂ ಅನ್ನು ಗಂಭೀರವಾಗಿ ಪ್ರಭಾವಿಸುತ್ತವೆ. ಪ್ರತಿಯೊಂದು ನೋಟಿಫಿಕೇಶನ್, ಲೈಕ್, ಫಾಲೋ, ಮೆಸೇಜ್ all release small doses of dopamine. ಇದು ಮತ್ತೆ ಮತ್ತೆ ಫೋನ್ ಹಿಡಿಯುವಂತಹ 'ಡಿಜಿಟಲ್ ವ್ಯಸನ'ಕ್ಕೆ ಕಾರಣವಾಗುತ್ತದೆ. ಸೈಬರ್‌ಸೈಕಾಲಜಿ ತಜ್ಞರು ಇದನ್ನು continuous partial attention syndrome ಎಂದು ಕರೆಯುತ್ತಾರೆ ಮನುಷ್ಯ ಯಾವ ಕೆಲಸಕ್ಕೂ ಸಂಪೂರ್ಣವಾಗಿ ಒತ್ತು ಕೊಡಲಾಗದೆ, ಸದಾ ಭಾಗಶಃ ಗಮನ ಹರಿಸುವ ಸ್ಥಿತಿಗೆ ಸಿಲುಕುತ್ತಾನೆ. ಭಾವುಕ ದೃಷ್ಟಿಯಿಂದ, ಈ ತಂತ್ರಜ್ಞಾನ ನಮ್ಮೊಳಗೆ ನಿಶ್ಶಬ್ದವನ್ನು (loneliness) ತುಂಬುತ್ತಿದೆ. ಸಾವಿರಾರು ಫಾಲೋವರ್‌ಗಳಿದ್ದರೂ, ಹೃದಯಕ್ಕೆ ಮಾತನಾಡಲು ಒಬ್ಬ ಸ್ನೇಹಿತನೂ ಇಲ್ಲದ ಪರಿಸ್ಥಿತಿ ಉಂಟಾಗುತ್ತಿತ್ತು.ಇತರರ ಜೀವನದ ಪರಿಪೂರ್ಣ ಚಿತ್ರಗಳನ್ನು ನೋಡುತ್ತಾ ನಾವು ನಮ್ಮ ಬದುಕನ್ನು ಕಡಿಮೆ ಅಂದರೆಕೊಂಡು ಬದುಕುತ್ತಿದ್ದೇವೆ. ಹೀಗೆ ಆತ್ಮವಿಶ್ವಾಸ, ಸಂತೋಷ, ಆತ್ಮಸ್ವೀಕಾರತೆ ನಿಧಾನವಾಗಿ ಹಾಳಾಗುತ್ತವೆ. ಅದರ ಜೊತೆಗೆ, ಪರದೆಗೆ ಅಂಟಿಕೊಳ್ಳುವ ಜೀವನವು ನಿದ್ರೆಯ ಚಕ್ರವನ್ನು ಅಸ್ತವ್ಯಸ್ತಗೊಳಿಸಿ, blue-light exposure ಹೆಚ್ಚು ಆಗಿಸುವ ಮೂಲಕ ಮೆದುಳಿನ ವಿಶ್ರಾಂತಿಯನ್ನು ಕದಡುತ್ತದೆ. ದೀರ್ಘಾವಧಿಯಲ್ಲಿ ಇದು ಆತಂಕ, ಡಿಪ್ರೆಷನ್ ಮತ್ತು ಮನಶಾಂತಿಯ ಕಲಕಾಟಕ್ಕೆ ಕಾರಣವಾಗುತ್ತದೆ. ಆದರೆ ತಂತ್ರಜ್ಞಾನವೇ ಸಮಸ್ಯೆ ಅಲ್ಲ ನಾವು ಅದನ್ನು ಹೇಗೆ ಬಳಸುತ್ತೇವೆ ಎಂಬುದೇ ಮುಖ್ಯ. ಡಿಜಿಟಲ್ ಡಿಟಾಕ್ಸ್, ಪರದೆ ಸಮಯ ನಿಯಂತ್ರಣ, ರಿಯಲ್ ಲೈಫ್ ಸಂಭಾಷಣೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ, ಮತ್ತೊಂದು ಕಡೆ ಧ್ಯಾನ, ವ್ಯಾಯಾಮ, ಪ್ರಕೃತಿಯೊಂದಿಗೆ ಸಂಪರ್ಕಇವು ಮಾನಸಿಕ ಆರೋಗ್ಯಕ್ಕೆ ಒಂದು ಹಸಿರು ಬೆಳಕಾಗಿ ನಿಲ್ಲುತ್ತವೆ. ತಂತ್ರಜ್ಞಾನ ನಮ್ಮ ಕೈಯಲ್ಲಿರುವ ಶಕ್ತಿ. ಅದನ್ನು ಮನಸ್ಸಿಗೆ ಸ್ನೇಹವಾಗಿಸುವುದೇ ನಮ್ಮ ಹೊಣೆ




# 76ನೇ ವರ್ಷದ ಸಂವಿಧಾನಾತ್ಮಕ ಕಾನೂನು ದಿನಾಚರಣೆಯ ಶುಭಾಶಯಗಳು

ಭಾರತದ ಸಂವಿಧಾನಾತ್ಮಕ ಕಾನೂನು ದಿನವನ್ನು ಪ್ರತಿವರ್ಷ ನವಂಬರ್ 26 ರಂದು ಇಡೀ ರಾಷ್ಟ್ರಾದ್ಯಂತ ಕಾನೂನು ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತದೆ ಅದರಂತೆ ಕಾನೂನು ದಿನವನ್ನು ಪ್ರತಿ ವರ್ಷ ಆಚರಿಸುತ್ತಾ ಕಾನೂನನ್ನು ಪ್ರತಿಯೊಬ್ಬ ಭಾರತೀಯ ನಾಗರೀಕರೂ ಸಹ ಕಾನೂನಿಗೆ ಗೌರವ ನೀಡಿ ತಮ್ಮಗಳ ಜೀವನದ ಬದುಕಿನಲ್ಲಿ ಅಳವಡಿಸಿಕೊಂಡು ನಡೆದುಕೊಳ್ಳುವ ದಿನಾಚರಣೆ.

ಕಾನೂನಿಗಿಂತ ಶ್ರೀಮಂತರಾಗಲೀ ಹಾಗೂ ಅಧಿಕಾರಿಗಳೇ ಆಗಲೀ, ರಾಜಕಾರಣಿಗಳೇ ಆಗಲೀ, ದೊಡ್ಡವರಾಗಲೀ ಅಥವಾ ಶ್ರೇಷ್ಠ ಉಳ್ಳವರಾಗಲೀ ಕಾನೂನಿಗಿಂತ ದೊಡ್ಡವರು ಈ ರಾಷ್ಟ್ರದಲ್ಲಿ ಯಾರೂ ಇಲ್ಲ. ಸಂವಿಧಾನವನ್ನು ನವಂಬರ್ 26, 1949 ರಂದು ಸಂಸತ್‌ನಲ್ಲಿ ಅಂಗೀಕರಿಸಲಾಗಿದ್ದು ಪೂರ್ಣವಾಗಿ ಜನವರಿ 26, 1950 ರಂದು ಸಂವಿಧಾನ ಜಾರಿಗೆ ಬಂದಿತು. ಆ ದಿನವನ್ನು ನಾವು ಗಣರಾಜ್ಯ ದಿನವೆಂದು ಪ್ರತಿವರ್ಷವೂ ಆಚರಿಸುತ್ತಿದ್ದೇವೆ.

1947ರಲ್ಲಿ ದೊರೆತ ಸ್ವಾತಂತ್ರ್ಯಕ್ಕೆ ಸ್ವತಂತ್ರ ಸಂಕೇತವಾದರೆ, 1950 ರಂದು ಸಂವಿಧಾನ ಜಾರಿಗೆ ಬಂದ ದಿನವನ್ನು ಗಣರಾಜ್ಯ ದಿನದ ಸಂಕೇತವೇ ಸಮಾನತೆ. ಸಮಾಜದಲ್ಲಿ ಅನಿಷ್ಟ ಪದ್ಧತಿಯಾಗಿರುವ ಅಸ್ಪೃಶ್ಯತೆ ನೂರಾರು ವರ್ಷಗಳಿಂದ ಬೆಳೆದು ಬೇರೂರಿರುವುದರಿಂದ ಇನ್ನೂ ಇದನ್ನು ಅಳಿಸಿಹಾಕಲು ಸಾಧ್ಯವಾಗಿಲ್ಲ. ಕಂದಾಚಾರ ಹಾಗೂ ಮೌಢ್ಯಾಚರಣೆ ಸಮಾಜದಲ್ಲಿ ತಾಂಡವವಾಡುತ್ತಿರುವ ಈ ನಮ್ಮ ದೇಶದಲ್ಲಿ ಕೇವಲ ಕಾನೂನಿನ ಮೂಲಕ ಅಸ್ಪೃಶ್ಯತೆಯನ್ನು ತೊಡೆದು ಹಾಕಲು ಸಾಧ್ಯವಾಗಿಲ್ಲ. ವಿದ್ಯೆ ಹಾಗೂ ವೈಜ್ಞಾನಿಕ, ವೈಚಾರಿಕ ಹಾಗೂ ಸೈದ್ಧಾಂತಿಕ ಪ್ರಗತಿಯ ಮೂಲಕ ಸಾರ್ವಜನಿಕರಲ್ಲಿ ಅರಿವನ್ನು ಮೂಡಿಸಿ ಅಸ್ಪೃಶ್ಯತೆ ಮಾನವ ಕುಲಕ್ಕೆ ವಿರುದ್ಧವಾದದ್ದು ಎಂಬ ಬಗ್ಗೆ ಜನ ಜಾಗೃತಿ ಮೂಡಿಸುವ ಕೆಲಸವಾಗಬೇಕು. ಆದರೆ ಎಲ್ಲಾ ಕಾನೂನು ಗೊತ್ತಿರುವವರೇ ಕಾನೂನು ಉಲ್ಲಂಘನೆ ಮಾಡುವವರೇ ಜಾಸ್ತಿ ಇರುವ ಈ ಸಮಾಜ ಎಂತಹ ವಿಪರ್ಯಾಸ. ಕಾನೂನನ್ನು ಕೈಗೆತ್ತಿ ಕೊಳ್ಳುವುದು ಅಕ್ಷಮ್ಯ ಅಪರಾಧ.ಕೆಲವರಲ್ಲಿ ಕಾನೂನು ಇದ್ದರೇನು ಅಥವಾ ಇಲ್ಲದಿದ್ದರೇನು ಎಂಬ ನಿರ್ಧಾರಕ್ಕೆ ಬಂದಿರುತ್ತಾರೆ.

ಕಾರಣ ಶ್ರೀಮಂತರಿಗೆ ಅಥವಾ ಬಲಾಢ್ಯ ಉಳ್ಳ ಪ್ರಬಲರಿಗೆ ಒಂದು ಕಾನೂನು, ಬಡವರಿಗೆ ಅಥವಾ ದುರ್ಬಲ ವರ್ಗದವರಿಗೆ ಒಂದು ಕಾನೂನು ಎಂಬ ಮಾತು ಸಮಾಜದಲ್ಲಿ ಸದಾ ಹರಿದಾಡುತ್ತಿದೆ. ಈ ರೀತಿ ಸಮಾಜ ಚಿಂತಿಸುವಾಗ ಕಾನೂನಿನ ದಿನವನ್ನು ನಾವು ಆಚರಿಸಬೇಕಾದರೆ ಮನಸ್ಸಿಗೆ ಮುಜುಗರವಾಗುತ್ತದೆ.

ಆದರೂ ಕೂಡ ಭಾರತೀಯರಾದ ನಾವು ಸಂವಿಧಾನಕ್ಕೆ ಗೌರವ ನೀಡಿ ಕಾನೂನಿನ ದಿನಾಚರಣೆಯನ್ನು ಪ್ರತಿವರ್ಷ ನವಂಬರ್ 26 ರಂದು ಆಚರಿಸುವುದರಲ್ಲಿ ಅರ್ಥವಿದೆ. ಸರ್ವಧರ್ಮ ಜನಾಂಗದವರು ಕಾನೂನಿಗೆ ತಲೆಬಾಗಿ ಗೌರವ ನೀಡಿ ಆ ನಿಟ್ಟಿನಲ್ಲಿ ಬದುಕನ್ನು ಕಟ್ಟಿಕೊಂಡರೆ ಕಾನೂನಿಗೆ ಒಂದು ಗೌರವ. ಕೊನೆಯದಾಗಿ ನಾವು ಮಾಡಿಕೊಂಡಿರುವ ಕಾನೂನನ್ನು ನಾವೇ ಗೌರವಿಸಬೇಕು. ಪ್ರತಿಯೊಬ್ಬರೂ ಕಾನೂನಿನಂತೆ ನಡೆದುಕೊಂಡರೆ ಭಯರಹಿತ ಜೀವನ ನಮ್ಮದಾಗುತ್ತದೆ. ಈ ರೀತಿ ಸಮಾಜ ನಿರ್ಮಾಣವಾದರೆ ನ್ಯಾಯಾಲಯ ಮತ್ತು ಪೊಲೀಸ್ ಠಾಣೆಯ ಅಗತ್ಯತೆ ಅವಶ್ಯಕತೆ ಕೆಲವು ಅನಿವಾರ್ಯ ಕಾರಣಗಳಿಗೆ ಮಾತ್ರ ಇರುವುದಿಲ್ಲ. ಕಾನೂನಿನ ದಿನದ ದಿನಾಚರಣೆಯನ್ನು ಈ ದಿನಕ್ಕೆ ಮಾತ್ರ ಸೀಮಿತವಾಗದೇ ಸದಾ ನಿರಂತರ ಕಾನೂನಿಗೆ ಗೌರವಿಸಿ, ಪೂಜಿಸಿ,ಅನುಸರಿಸಿ, ಆಚರಿಸುವುದರಲ್ಲಿ ಅರ್ಥವಿದೆ. 76ನೇ ವರ್ಷದ ಭಾರತದ ಸಂವಿಧಾನಾತ್ಮಕ ಕಾನೂನು ದಿನಾಚರಣೆಯ ಹಾರ್ದಿಕ ಶುಭಾಶಯಗಳು.

**ಉದಾಹರಣೆಗೆ**

**ಹಿಂದೂಗಳಲ್ಲಿರುವ ಅಸ್ಪೃಶ್ಯತೆ, ಮುಸ್ಲಿಮರಲ್ಲಿರುವ ಧರ್ಮಾಂಧತೆ ಹಾಗೂ ಕ್ರೈಸ್ತರಲ್ಲಿರುವ ಮತಾಂತರ ಹೀಗೆ ಎಲ್ಲಾ ಧರ್ಮಗಳಲ್ಲಿರುವ ತೊಡಕುಗಳನ್ನು ಕಾನೂನಿನ ಮೂಲಕ ನಿವಾರಿಸುವ ಕೆಲಸವಾಗಿಲ್ಲ. ಈ ಭಾರತ ಮಾತೆಯ ತಾಯಿಯೇ ಕಾನೂನು, ಕಾನೂನೇ ದೇಹ. ತಂದೆಯೇ ಸಂವಿಧಾನ, ಸಂವಿಧಾನವೇ ಆತ್ಮ. ವಿದ್ಯಾವಂತರು, ಬುದ್ಧಿವಂತರು, ಜ್ಞಾನವಂತರು, ಪ್ರಜ್ಞಾವಂತರು ಹಾಗೂ ಇತರೆ ಸಂಬಂಧಪಟ್ಟವರು ಅವಿದ್ಯಾವಂತರಿಗೆ ಹಾಗೂ ಅಜ್ಞಾನಿಗಳಿಗೆ ಕಾನೂನಿನ ಬಗ್ಗೆ ಸದಾ ಅರಿವು ಹಾಗೂ ತಿಳುವಳಿಕೆ ನೀಡಿ ಜನ- ಜಾಗೃತಿ ಮೂಡಿಸಬೇಕು.**



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ,
ವಿಮರ್ಶಕರು



• ಉದಯವಾಹಿನಿ, ವಿಶೇಷ



ಚಳಿಗಾಲ ಕಾಣಿಸಿಕೊಂಡರೆ ಸಾಕು, ಹಳೆಯ ನೋವು ಕೂಡ, ಮತ್ತೆ ಕಾಡಲು ಶುರುವಾಗುತ್ತದೆ! ಅದರಲ್ಲೂ ಮೂಳೆಗಳಿಗೆ ಸಂಬಂಧಪಟ್ಟ ಸಮಸ್ಯೆಯಿಂದ ಬಳಲುತ್ತಿರುವವರು ಈ ಸಮಯದಲ್ಲಿ ಆದಷ್ಟು ಎಚ್ಚರಿಕೆಯಿಂದ ಇರಬೇಕು.ಯಾಕೆಂದರೆ ಈ ಋತುವಿನಲ್ಲಿ ರಕ್ತ ಸಂಚಾರವು ಕಡಿಮೆ ಆಗುವುದರ ಜೊತೆಗೆ, ಗಂಟುಗಳಲ್ಲಿ ನೋವು ಕೂಡ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ. ಸಾಮಾನ್ಯವಾಗಿ ನಮಗೆಲ್ಲಾ ಗೊತ್ತೇ ಇರುವ ಹಾಗೆ, ಚಳಿಗಾಲದಲ್ಲಿ ತಂಪಾದ ವಾತಾವರಣದ ಕಾರಣಗಳಿಂದಾಗಿ, ಸಾಕಷ್ಟು ಆರೋಗ್ಯ ಸಮಸ್ಯೆಗಳು ಚಳಿಗಾಲದಲ್ಲಿ ಕಾಣಿಸಿಕೊಳ್ಳಲು ಶುರು ವಾಗುತ್ತವೆ.

# ಚಳಿಗಾಲದಲ್ಲಿ ರಕ್ತದ ಹರಿವನ್ನು ಹೆಚ್ಚಿಸಿ

ಅದರಲ್ಲೂ ವಯಸ್ಸಾದವರಿಗೆ ಅಂತೂ ಚಳಿಗಾಲ ಅಷ್ಟಾಗಿ ಆಗಿಯೇ ಬರಲ್ಲ ಎಂದರೂ ಕೂಡ ತಪ್ಪಾಗಲಾರದು. ಸಾಮಾನ್ಯವಾಗಿ ಚಳಿಗಾಲದಲ್ಲಿ ಶೀತ ನೆಗಡಿ ಕೆಮ್ಮಿನ ಜೊತೆಗೆ ಮೂಳೆಗಳಿಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು ಕೂಡ ಬಹಳ ಹೆಚ್ಚಾಗಿ ಕಾಣಿಸಿಕೊಳ್ಳಲು ಶುರುವಾಗುತ್ತದೆ.

ಈಗಾಗಲೇ ಮೂಳೆಗಳಿಗೆ ಸಂಬಂಧಪಟ್ಟ ಸಮಸ್ಯೆಗಳಿಂದ ಬಳಲುತ್ತಿರುವವರು ಈ ಬಗ್ಗೆ ತುಂಬಾನೇ ಎಚ್ಚರಿಕೆಯಿಂದ ಇರಬೇಕಾಗುತ್ತದೆ ಪ್ರಮುಖವಾಗಿ ಕೆಲವೊಂದು ಮುನ್ನೆಚ್ಚರಿಕೆಗ ಳನ್ನು ಅನುಸರಿಸಬೇಕಾಗುತ್ತದೆ.

**ಚಳಿಗಾಲದಲ್ಲಿ ಮೂಳೆಗಳಿಗೆ ಸಂಬಂಧಪಟ್ಟ ಸಮಸ್ಯೆಗಳು ಹೆಚ್ಚಾಗಲು ಕಾರಣಗಳೇನು:** ಈಗಾಗಲೇ ಹೇಳಿದ ಹಾಗೆ, ಚಳಿಗಾಲದಲ್ಲಿ ಅನೇಕ ರೀತಿಯಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಕೀಲು ಅಥವಾ ಮೊಣಕಾಲು ನೋವಿನಿಂದ ಬಳಲುತ್ತಿರು ವವರಿಗೆ, ಈ ಋತುವು ತೊಂದರೆದಾಯಕವಾಗಿರುತ್ತದೆ. ಅದರಲ್ಲೂ ಈಗಾಗಲೇ ಮೂಳೆಗಳಿಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರಿಗೆ, ಅತಿಯಾದ ಚಳಿಯಿಂದಾಗಿ ಮೂಳೆಗಳಲ್ಲಿ ಬಿಗಿತ ಹೆಚ್ಚಾಗು ತ್ತದೆ ಮತ್ತು ದೇಹದಲ್ಲಿನ ರಕ್ತದಲ್ಲಿನ ಹರಿವಿನ ಪ್ರಮಾಣವು ಕೂಡ ನಿಧಾನವಾ ಗುತ್ತದೆ. ಇದು ಕೀಲುಗಳಲ್ಲಿ ಬಿಗಿತವನ್ನು ಉಂಟುಮಾಡುತ್ತದೆ ಮತ್ತು ಹಳೆಯ ನೋವನ್ನು ಮತ್ತೆ ಉಂಟುಮಾಡುತ್ತದೆ. ಬಹುತೇಕ ಜನರಲ್ಲಿ ತಂಪಾದ ವಾತಾವರಣದ ಕಾರಣಗಳಿಂದಾಗಿ ಪಾದಗಳಲ್ಲಿ ಊತ ಕೂಡ ಕಾಣಿಸಿಕೊಳ್ಳುತ್ತದೆ. ಇದರಿಂದ ನಡೆಯಲು ಕೂಡ ಕಷ್ಟವಾಗುತ್ತದೆ. ಒಂದು ವೇಳೆ ನಿಮಗೂ ಕೂಡ ಇಂತಹದ್ದೇ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿದ್ದರೆ, ಇಲ್ಲಿದೆ ನೋಡಿ ಸರಳ ಮನೆಮದ್ದುಗಳು

**ಚಳಿಗಾಲದಲ್ಲಿ ಬಿಸಿ ಎಣ್ಣೆಯ ಮಸಾಜ್‌ನ ಪ್ರಯೋಜನಗಳೇನು** : ಆರೋಗ್ಯ ತಜ್ಞರ ಪ್ರಕಾರ, ಚಳಿಗಾಲದಲ್ಲಿ ಸ್ನಾಯುಗಳು ಗಟ್ಟಿಯಾಗುತ್ತವೆ, ಇದು ಕೀಲು ನೋವಿಗೆ ಕಾರಣವಾಗುತ್ತದೆ. ಅಂತಹ ಸಂದರ್ಭಗಳಲ್ಲಿ, ಉಗುರು ಬೆಚ್ಚಗಿನ ಸಾಸಿವೆ, ಎಳ್ಳು ಅಥವಾ ತೆಂಗಿನ ಎಣ್ಣೆಯಿಂದ ಮಸಾಜ್ ಮಾಡುವುದು ಅತ್ಯಂತ ಪ್ರಯೋಜನಕಾರಿ. ಬೆಚ್ಚಗಿನ ಎಣ್ಣೆ ಚರ್ಮ ಮತ್ತು ಅಂಗಾಂಶಗಳಿಗೆ ಆಳವಾಗಿ ತೂರಿಕೊಂಡು ರಕ್ತದ ಹರಿವನ್ನು ಹೆಚ್ಚಿಸುತ್ತದೆ. ಇದು ಊತವನ್ನು ಕಡಿಮೆ ಮಾಡುತ್ತದೆ ಮತ್ತು ನೋವು ನಿವಾರಣೆಯನ್ನು ನೀಡುತ್ತದೆ. ಪ್ರತಿದಿನ ರಾತ್ರಿ ಮಲಗುವ ಮುನ್ನ 10 ನಿಮಿಷಗಳ ಕಾಲ ಮಸಾಜ್ ಮಾಡುವುದರಿಂದ ಮೊಣಕಾಲಿನ ಬಿಗಿತವನ್ನು ಕಡಿಮೆ ಮಾಡ ಬಹುದು.

## ಸನಾತನ ರಾಷ್ಟ್ರದ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ಕರೆ

**ಮಹಾಭಾರತ ಯುದ್ಧಕ್ಕೆ ಮುನ್ನ ಭಗವಾನ ಶ್ರೀಕೃಷ್ಣನು ಧರ್ಮಯುದ್ಧದ ಘೋಷಣೆಯನ್ನು ಶಂಖನಾದದ ಮೂಲಕ ಮಾಡಿದ್ದರು; ಅದೇ ಪ್ರೇರಣೆಯಿಂದ ಸನಾತನ ಸಂಸ್ಥೆಯ ಸಂಸ್ಥಾಪಕರಾದ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆಯವರು ಈಶ್ವರೀ ಅಧಿಷ್ಠಾನದ ಆಧಾರದ ಮೇಲೆ ಸನಾತನ ರಾಷ್ಟ್ರದ ನಿರ್ಮಾಣದ ಗುರಿಯನ್ನು ಇರಿಸಿದ್ದಾರೆ. ದೆಹಲಿಯಲ್ಲಿ ನಡೆಯಲಿರುವ ಈ 'ಶಂಖನಾದ ಮಹೋತ್ಸವವು ಧರ್ಮನಿಷ್ಠ ಸಮಾಜಕ್ಕೆ ಆತ್ಮಶಕ್ತಿ, ನವಚೈತನ್ಯ ಮತ್ತು ರಾಷ್ಟ್ರಸೇವೆಯ ಶಕ್ತಿಯನ್ನು ಒದಗಿಸುತ್ತದೆ. ಪ್ರತಿಯೊಬ್ಬ ಸನಾತನಿಯು ಛತ್ರಪತಿ ಶಿವಾಜಿ ಮಹಾರಾಜರ ಹಿಂದವಿ ಸ್ವರಾಜ್ಯದ ಆದರ್ಶ ಮತ್ತು ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆಯವರ ಸನಾತನ ರಾಷ್ಟ್ರದ ಸಂಕಲ್ಪದಿಂದ ಪ್ರೇರಿತರಾದಾಗ, ಈ ಶಂಖನಾದ ಮಹೋತ್ಸವವು ಕೇವಲ ಒಂದು ಆಯೋಜನೆಯಾಗಿ ಉಳಿಯದೆ, ರಾಷ್ಟ್ರ ರಕ್ಷಣೆ, ಸಾಮಾಜಿಕ ಏಕತೆ ಮತ್ತು ದೈವಿಕ ಪುನರುತ್ಥಾನದ ದಿಕ್ಕಿನಲ್ಲಿ ಒಂದು ಸಶಕ್ತ ಹೆಜ್ಜೆಯಾಗಿ ಸಾಬೀತಾಗುತ್ತದೆ.**

# ದೆಹಲಿಯಲ್ಲಿ ಸನಾತನ ರಾಷ್ಟ್ರದ ಶಂಖನಾದ!

• **ಉದಯವಾಹಿನಿ, ಪೀಠಿಕೆ**



ಒಂದು ಕಾಲದಲ್ಲಿ ಚಿನ್ನದ ಹಕ್ಕಿ ಸೋನೆಯ ಕಿ ಚಿಡಿಯಾ ಎಂದು ಕರೆಯಲ್ಪಡುತ್ತಿದ್ದ ಭಾರತವು ಕೇವಲ ತನ್ನ ಸಮೃದ್ಧಿಯಿಂದಾಗಿ ಶ್ರೇಷ್ಠವಾಗಿರಲಿಲ್ಲ, ಆದರೆ ತನ್ನ ಸನಾತನ ಸಂಸ್ಕೃತಿ, ಧರ್ಮನಿಷ್ಠ ಜೀವನಶೈಲಿ, ಶೌರ್ಯ ಮತ್ತು ವೀರತನದಿಂದ ಕೂಡಿದ ಆಡಳಿತದಿಂದಾಗಿ ಶ್ರೇಷ್ಠವಾಗಿತ್ತು.

ಇಂದು ಭಾರತವು ತಂತ್ರಜ್ಞಾನ ಮತ್ತು ಯುದ್ಧತಂತ್ರದಲ್ಲಿ ವೇಗವಾಗಿ ಪ್ರಗತಿ ಸಾಧಿಸುತ್ತಿದೆ. ಆಪರೇಶನ್ ಸಿಂಧೂರ್' ಮೂಲಕ ಭಾರತೀಯ ಸೇನೆಗಳು ತಮ್ಮ ಸಾಮರ್ಥ್ಯವನ್ನು ವಿಶ್ವಕ್ಕೆ ತೋರಿಸಿವೆ, ಆದರೂ ದೇಶದ ಮುಂದಿರುವ ಸವಾಲುಗಳು ಕಡಿಮೆಯಾಗುತ್ತಿಲ್ಲ. ಭಾರತವು ಎಷ್ಟು ವೇಗವಾಗಿ ಮುಂದುವರೆಯುತ್ತಿದೆಯೋ ಹಾಗೂ ಅಷ್ಟೇ ವೇಗವಾಗಿ ಬಾಹ್ಯ ಮತ್ತು ಆಂತರಿಕ ಶತ್ರುಗಳ ಸವಾಲುಗಳು ಉಲ್ಬಣಗೊಳ್ಳುತ್ತಿವೆ. ಇತ್ತೀಚೆಗೆ ದೆಹಲಿಯಲ್ಲಿ ನಡೆದ ಬಾಂಬ್ ಸ್ಫೋಟದ ಘಟನೆಯು ರಾಷ್ಟ್ರದ ಏಕತೆ, ಭದ್ರತೆ ಮತ್ತು ಸಾಂಸ್ಕೃತಿಕ ಪ್ರಜ್ಞೆಯನ್ನು ದುರ್ಬಲಗೊಳಿಸುವವರ ಬಗ್ಗೆ ಎಚ್ಚರದಿಂದ ಇರುವುದು ಅತ್ಯಂತ ಅವಶ್ಯಕವಾಗಿದೆ ಎಂದು ಸ್ಪಷ್ಟಪಡಿಸಿದೆ. ಇಂತಹ ಸಮಯದಲ್ಲಿ ಭಾರತದ ಹುಸಿ ಜಾತ್ಯತೀತತೆ ಮತ್ತು ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ಮಾಡಲಾಗುವ ತುಷ್ಟೀಕರಣವು ದೇಶವನ್ನು ಮತ್ತಷ್ಟು ದುರ್ಬಲಗೊಳಿಸುತ್ತದೆ. ಆದ್ದರಿಂದ, ಭಾರತವು ಮತ್ತೆ ವಿಶ್ವಕಲ್ಯಾಣಕಾರಿ 'ಸನಾತನ ರಾಷ್ಟ್ರ'ವಾಗಿ ನಿಲ್ಲುವುದು ಕಾಲದ ಅಗತ್ಯವಾಗಿದೆ. ಇದೇ ಉದ್ದೇಶದಿಂದ ಸೇವ್ ಕಲ್ಚರ್ ಸೇವ್ ಭಾರತ್ ಫೌಂಡೇಶನ್ ಪ್ರಸ್ತುತಿ ಸನಾತನ ಸಂಸ್ಥೆಯ ಆಯೋಜನೆಯಲ್ಲಿ ಶಂಖನಾದ ಮಹೋತ್ಸವ'ವನ್ನು 2025ರ ಡಿಸೆಂಬರ್ 13 ಮತ್ತು 14 ರಂದು ನವ ದೆಹಲಿಯಲ್ಲಿರುವ 'ಭಾರತ ಮಂಟಪಂ'(ಇಂದ್ರಪ್ರಸ್ಥ) ನಲ್ಲಿ ಅದ್ದೂರಿಯಾಗಿ ಆಯೋಜಿಸಲಾಗುತ್ತಿದೆ. ಈ ಆಯೋಜನೆಯು ಅಧ್ಯಾತ್ಮದ ತೇಜಸ್ವಿ ಪ್ರಸಾರ ಮಾಡುವ ಸನಾತನ ಸಂಸ್ಥೆಯ ರಜತ ಮಹೋತ್ಸವದ ವಿಶೇಷ ಸಂದರ್ಭವೂ ಆಗಿದೆ. ನವ ದೆಹಲಿಯಲ್ಲಿ ಈ ಆಯೋಜನೆ ನಡೆಯುವುದು ಸಹ ಮಹತ್ವಪೂರ್ಣವಾಗಿದೆ, ಏಕೆಂದರೆ ದೆಹಲಿಯು ಕೇವಲ ಭಾರತದ ರಾಜಧಾನಿ ಮಾತ್ರವಲ್ಲದೇ, ರಾಜಕೀಯ, ಆಡಳಿತಾತ್ಮಕ ಮತ್ತು ಸಾಮಾಜಿಕ ನಿರ್ಧಾರಗಳ ಕೇಂದ್ರವಾಗಿದೆ.

ಇಲ್ಲಿಂದ ಪ್ರಸಾರವಾಗುವ ಸನಾತನ ಸಂಸ್ಕೃತಿ ಮತ್ತು ರಾಷ್ಟ್ರ ಭಕ್ತಿಯ ಸಂದೇಶವು ಇಡೀ ರಾಷ್ಟ್ರದಲ್ಲಿ ಪ್ರಭಾವಶಾಲಿ ಪ್ರತಿಧ್ವನಿಯನ್ನು ಉಂಟುಮಾಡುತ್ತದೆ. ಇದರ ಪರಿಣಾಮವು ರಾಷ್ಟ್ರೀಯ ಏಕತೆ, ಶೌರ್ಯ ಮತ್ತು ನಾಗರಿಕ ಪ್ರಜ್ಞೆಯ ಬಲವರ್ಧನೆಯ ರೂಪದಲ್ಲಿ ಹೊರಬರುತ್ತದೆ.

ಈ ಮಹೋತ್ಸವವು ಧರ್ಮನಿಷ್ಠ ಜೀವನಮೌಲ್ಯಗಳ ಉತ್ಸವವಾಗಿರುವುದಲ್ಲದೆ, ಇತ್ತೀಚಿನ ಭಯೋತ್ಪಾದಕ ಘಟನೆಗಳ ಹಿನ್ನೆಲೆಯಲ್ಲಿ ಸಮಾಜಕ್ಕೆ ಜಾಗೃತಿ ಮತ್ತು ಸಾಮೂಹಿಕ ಭದ್ರತೆಯ ಸಂದೇಶವನ್ನೂ ನೀಡಲಿದೆ.

**ಮುಖ್ಯ ಆಯೋಜನೆ ಮತ್ತು ಪ್ರದರ್ಶನ:** ಮುಖ್ಯ ಕಾರ್ಯಕ್ರಮವು ಡಿಸೆಂಬರ್ 13 ಮತ್ತು 14 ರಂದು ಭಾರತ ಮಂಟಪಮನ ಮುಖ್ಯ ಕನ್ವೆನ್ಶನ್ ಸಭಾಂಗಣದಲ್ಲಿ ನಡೆಯಲಿದ್ದು, ಇದರಲ್ಲಿ ಸನಾತನ ಸಂಸ್ಕೃತಿ ಸಂವಾದದ ಅಡಿಯಲ್ಲಿ ಸಾಂಸ್ಕೃತಿಕ, ಸಾಮಾಜಿಕ ಮತ್ತು ರಕ್ಷಣಾತ್ಮಕ ವಿವಿಧ ಆಯಾಮಗಳ ಕುರಿತು ಚರ್ಚೆ ನಡೆಯಲಿದೆ. ಎಕ್ಸಿಬಿಶನ್ ಹಾಲ್ 12–೦ ನಲ್ಲಿ ಡಿಸೆಂಬರ್ 13 ರಿಂದ 15 ರವರೆಗೆ ಐತಿಹಾಸಿಕ ಶಸ್ತ್ರ ಪ್ರದರ್ಶನ ಮತ್ತು ಸಂಸ್ಕೃತಿ ಪ್ರದರ್ಶನವನ್ನು ಆಯೋಜಿಸಲಾಗುವುದು. ಈ ಪ್ರದರ್ಶನದಲ್ಲಿ ಮೊದಲ ಬಾರಿಗೆ ಛತ್ರಪತಿ ಶಿವಾಜಿ ಮಹಾರಾಜರ ಭವಾನಿ ಖಡ್ಗ'ದ ಪ್ರತ್ಯಕ್ಷ ದರ್ಶನ ಲಭ್ಯವಾಗಲಿದೆ. ಇದರೊಂದಿಗೆ ಸಾಂಪ್ರದಾಯಿಕ ಯುದ್ಧಕಲೆಯ ಜೀವಂತ ಪ್ರಾತ್ಯಕ್ಷಿಕೆಗಳು ಈ ಸಮಾರಂಭದ ಪ್ರಮುಖ ಆಕರ್ಷಣೆಯಾಗಿರುತ್ತವೆ.

**ರಾಷ್ಟ್ರ ಪ್ರೇರಣೆಯ ಸ್ವರಗಳು:** ಈ ಮಹೋತ್ಸವದ ಎರಡನೇ ದಿನದಂದು ವಿಶ್ವಕಲ್ಯಾಣಕಾರಿ ಸನಾತನ ರಾಷ್ಟ್ರ ಕುರಿತು ವಿಶೇಷ ಅಧಿವೇಶನ ನಡೆಯಲಿದ್ದು, ಇದರಲ್ಲಿ ನಕ್ಸಲ್‌ವಾದ ಮತ್ತು ಭಯೋತ್ಪಾದನೆ ಮತ್ತು ರಾಷ್ಟ್ರೀಯ ಭದ್ರತೆಯಂತಹ ಗಂಭೀರ ವಿಷಯಗಳ ಬಗ್ಗೆ ತಜ್ಞರು ವಿಮರ್ಶಿಸಲಿದ್ದಾರೆ. ಭಾರತದ ರಕ್ಷಣಾ ನೀತಿ, ಸಾಂಸ್ಕೃತಿಕ ಪುನರುಜ್ಜೀವನ ರಾಷ್ಟ್ರೀಯ ಆತ್ಮಬಲವನ್ನು ಬಲಪಡಿಸುವ ಮಾರ್ಗೋಪಾಯಗಳ ಕುರಿತು ಗಹನ ಸಂವಾದಗಳು ನಡೆಯಲಿವೆ.



### ಚಂದ್ರಂಪಳ್ಳಿ ಜಲಾಶಯದಲ್ಲಿ ನೀರು ತುಂಬಿ ಗೇಟ್ ಮೇಲಿಂದ ಕೆಳಗೆ ಹರಿಯುತ್ತಿವೆ ಆದರೆ ರೈತರಿಗೆ ನೀರು ಬಿಡುತ್ತಿಲ್ಲ

# ನೀರು ಬಿಡದ ಅಧಿಕಾರಿಗಳು: ರೈತರು ನೀರು ಖರೀದಿಸಿ ಸ್ಪಿಂಕ್ಲರ್ ಮೊರೆ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಐನೋಳ್ಳಿ,ದೇಗಲ್ಮಡಿ,ಎಂಪಳ್ಳಿ, ಫತ್ತೇಪೂರ,ಚಿಂಚೋಳಿ, ಭಾವಿತಾಂಡಾ,ಕಲಭಾವಿತಾಂಡಾ,ಚಂದಾಪೂರ,ಪೋಲಕಪಳ್ಳಿ, ಚಂದ್ರಂಪಳ್ಳಿ ಗ್ರಾಮಗಳ ರೈತರು ಚಂದ್ರಂಪಳ್ಳಿ ಜಲಾಶಯ ನೀರಿನ ಮೇಲೆ ಅವಲಂಬಿತರಾಗಿದ್ದು ಆದರೆ ಕಳೆದ ಒಂದು ತಿಂಗಳಿಂದ ಚಂದ್ರಂಪಳ್ಳಿ ಜಲಾಶಯ ಅಧಿಕಾರಿಗಳು ಕಾಲುವೆಗಳಿಗೆ ನೀರು ಹರಿಸದೆಯಿರುವುದರಿಂದ ರೈತರು ಬೇರೆಯವರ ಬೋರವೇಲ್ ದಿಂದ ನೀರು ಬಾಡಿಗೆ ಪಡೆದು ಸ್ಪಿಂಕ್ಲರ್ ಮೂಲಕ ಬೆಳೆದಿರುವ ಉಳ್ಳಗಡ್ಡಿ, ಅರಿಸೀಣ,ಕಡ್ಲೆಬೇಳೆ,ತೊಗರಿ ಬೆಳೆಗಳಿಗೆ ನೀರುಣಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರೈತ ಶಂಕರ ಭೋಗವಂತಿ ತಿಳಿಸಿದ್ದಾರೆ.

ಚಂದ್ರಂಪಳ್ಳಿ ನೀರು ಕಾಲುವೆಗಳಿಗೆ ನವೆಂಬರ್ ಒಂದರಿಂದ ನೀರು ಹರಿಸಬೇಕು ಆದರೆ ಇಲ್ಲಿಯವರೆಗೆ ನೀರು ಹರಿಸದೆ ಇರುವ ಜಲಾಶಯ ಅಧಿಕಾರಿಗಳು ಬೇಜವಾಬ್ದಾರಿ ತೋರಿ ಈಗ ಟೆಂಡರ್ ಕರೆಯುತ್ತೇವೆಂದು ಹೇಳುತ್ತಿರುವುದು ಇದರಿಂದ ಟೆಂಡರ್ ಪ್ರಕ್ರಿಯೆ ಈಗ ಪ್ರಾರಂಭವಾದರೆ ರೈತರಿಗೆ ಡಿಸೆಂಬರ್ ಕೊನೆಯ ಹಂತದಲ್ಲಿ ನೀರು ಬಿಡುತ್ತಾರೆ ರೈತರು ಬೆಳೆಗಳಿಗೆ ಯಾವಾಗ ನೀರು ಬಿಡಬೇಕು ಎಂದು ಪ್ರಶ್ನೆಸಿದರು.

ಈಗಾಗಲೇ ಚಂದ್ರಂಪಳ್ಳಿ ಜಲಾಶಯದಲ್ಲಿ ನೀರು ತುಂಬಿ ಗೇಟ್ ಮೇಲಿಂದ ಕೆಳಗೆ ಹರಿಯುತ್ತಿವೆ ಆದರೆ ರೈತರಿಗೆ ನೀರು ಬಿಡುತ್ತಿಲ್ಲ, ಚಂದ್ರಂಪಳ್ಳಿ ಜಲಾಶಯ ಅಧಿಕಾರಿಗಳು ಬೇಜವಾಬ್ದಾರಿತನ ತೋರುತ್ತಿದ್ದು ಇದರಿಂದ ರೈತರು ಕಂಗಾಲಾಗುತ್ತಿದ್ದಾರೆ,ಶೀಘ್ರದಲ್ಲೇ ಉನ್ನತಮಟ್ಟದ ಅಧಿಕಾರಿಗಳು ಜನಪ್ರತಿನಿಧಿಗಳು ಗಮನಹರಿಸಿ ಸಮಯಕ್ಕೆ ಸರಿಯಾಗಿ ಕಾಲವೆಗಳಿಗೆ ನೀರು ಹರಿಸಿ ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕು, ಎಡದಂಡೆ ಕಾಲುವೆ ಮತ್ತು ಬಲದಂಡೆ ಕಾಲುವೆಗಳು ಯಾವುದೇ ಚನ್ನಾಗಿ ಇರುವುದೆ ಕಾರಣ ರೈತರ


ಉದಯವಾಹಿನಿ ಚಿತ್ರ

**ಅಧಿಕಾರಿಗಳಿಗೆ ಏಕವಚನದಲ್ಲಿ ತರಾಟೆ**

ಜಮೀನುಗಳಿಗೆ ನೀರು ಮುಟ್ಟುತ್ತಿಲ್ಲಾ,ಇದರಿಂದ ರೈತರು ಕಂಲಾಗುತ್ತಿದ್ದು ಜನಪ್ರತಿನಿಧಿಗಳು ಗಮನಹರಿಸಿ ರೈತರಿಗೆ ಅನುಕೂಲವಾಗಲು ಎಡದಂಡೆ ಬಲದಂಡೆ ಕಾಲುವೆಗಳು ನೂತನವಾಗಿ ನಿರ್ಮಿಸಿ ರೈತರಿಗೆ ಸಮರ್ಪಕವಾಗಿ ನೀರು ಜಮೀನುಗಳಿಗೆ ಮುಟ್ಟುವಂತೆ ಮಾಡಬೇಕು ಎಂದರು.

ಒಟ್ಟಾರೆ 12ಸಾವಿರ ಏಕರೆ ಜಮೀನು ಚಂದ್ರಂಪಳ್ಳಿ ಜಲಾಶಯ ನೀರಿನಿಂದ ರೈತರು ಸದುಪಯೋಗ ಪಡೆದುಕೊಳ್ಳುತ್ತಾರೆ ಆದರೆ ಈಗಿನ ಅಧಿಕಾರಿಗಳು ಜನಪ್ರತಿನಿಧಿಗಳ ನಿರ್ಲಕ್ಷ್ಯತನದಿಂದ ರೈತರಿಗೆ ಸಮರ್ಪಕವಾಗಿ ನೀರು ಬಳಕೆಯಾಗದೆ ಬೆಳೆಗಳಿಗೆ ನೀರುಣಿಸಲು ಸಾಧ್ಯವಾಗದೆ ರೈತರು ಸಂಕಷ್ಟದಲ್ಲಿದ್ದಾರೆ ಎಂದರು.

**ರೈತ ಸಭೆಯಲ್ಲಿ ಗದ್ದಲ:-** ಕಾಲುವೆಗಳಿಗೆ ನೀರು ಹರಿಸಲು ರೈತರ ಅಧಿಕಾರಿಗಳ ಸಭೆ ಕರೆಯಲಾಗಿತ್ತು,ಆದರೆ ಸಭೆಯಲ್ಲಿ ಕಾಲುವೆಗೆ ನೀರು ಹರಿಸುವುದು ಪ್ರಶ್ನೆ ಕೆಳುವ ಬದಲು ಚಂದ್ರಂಪಳ್ಳಿ ಜಲಾಶಯ ಎಇಇ ಚೇತನ್ ಕಳಸ್ಕರ ಕಾಲುವೆಗೆ ನೀರು ಹರಿಸಲು ಇನ್ನು ಕಾಲುವೆ ದುರಸ್ತಿ ಸೇರಿ ಕೊಂಡಿಗಳ ದುರಸ್ತಿ ಕಾರ್ಯ,ಕಾಲುವೆ ಟೆಂಡರ್ ಕರೆಯಲಾಗಿದೆ ಯಾರು ಟೆಂಡರ್ ಹಾಕಿಲ್ಲ ಟೆಂಡರ್ ಪ್ರಕ್ರಿಯೆಯಾಗಿ ಕೆಲಸ ಮುಗಿದ ನಂತರ ನೀರು ಹರಿಸಲಾಗುವುದೆಂದು

**ಕಾಲುವೆಗಳಿಗೆ ನೀರು ಹರಿಸಲಾಗಿದೆ**

ಚಂದ್ರಂಪಳ್ಳಿ ಜಲಾಶಯದಿಂದ ತಾತ್ಕಾಲಿಕವಾಗಿ ನೀರು ಬಿಡಲು ರೈತರ ಸಮ್ಮುಖದಲ್ಲಿ ಬೇಣ್ಣೆತೋರಾ ನೀರಾವರಿ ಯೋಜನೆ ಇಇ ವಿಜಯಕುಮಾರ ಪಾಟೀಲ ಹಾಗೂ ಎಇಇ ಚೇತನ ಕಳಸ್ಕರ ಚಾಲನೆ ನೀಡಿ ಮಾತನಾಡಿದರು. ಚಂದ್ರಂಪಳ್ಳಿ ಜಲಾಶಯದ ಕಛೇರಿಯಲ್ಲಿ ರೈತರ ಸಭೆ ಕರೆಯಲಾಗಿತ್ತು ಸಭೆಯಲ್ಲಿ ರೈತರ ಅಭಿಪ್ರಾಯ ಪಡೆದು ಕಾಲುವೆಗಳಿಗೆ ನೀರು ಹರಿಸಲಾಗಿದೆ.


ಉದಯವಾಹಿನಿ ಚಿತ್ರ

ಹೇಳಿದಾಗ ರೈತರು ಆಕ್ರೋಶಗೊಂಡು ಅಧಿಕಾರಿಗಳಿಗೆ ಏಕವಚನದಲ್ಲಿ ತರಾಟೆಗೆ ತೆಗೆದುಕೊಂಡ ಪ್ರಸಂಗ ನಡೆಯಿತು.

ನವೆಂಬರ್ ಮೊದಲ ವಾರದಲ್ಲಿ ಕಾಲುವೆಗೆ ನೀರು ಹರಿಸಬೇಕಾದ ಅಧಿಕಾರಿಗಳು ನವ್ಹಂಬರ್ ಮುಕ್ತಾಯಗೊಳ್ಳುವ ಸಮಯದಲ್ಲಿ ಟೆಂಡರ್ ಆಗಿಲ್ಲ ನೀರು ಬಿಡಲು ಆಗಲ್ಲವೆಂದರೆ ನಡೆಯಲ್ಲ ಮೊದಲು ಕಾಲುವೆಗೆ ನೀರು ಹರಿಸಿ ರೈತರ ಜಮೀನುಗಳಿಗೆ ನೀರು


ಉದಯವಾಹಿನಿ ಚಿತ್ರ

ಚಂದ್ರಂಪಳ್ಳಿ ಜಲಾಶಯ ಬಲದಂಡೆ ಮುಖ್ಯ ಕಾಲುವೆ 21ಕಿಮೀ ಇದ್ದು ಎಡದಂಡೆ ಮುಖ್ಯಕಾಲುವೆ 14ಕಿಮೀಯಿದ್ದು ಒಟ್ಟಾರೆ 12,900ಏಕರೆ ಅಚ್ಚುಕಟ್ಟು ಪ್ರದೇಶ ಜಮೀನು ನೀರಾವರಿ ಸೌಲಭ್ಯ ದೊರಕುತ್ತದೆ. ಆದರೆ ಈಗ ಸಂಪೂರ್ಣ ರೈತರ ಜಮೀನುಗಳಿಗೆ ನೀರು ಹೋಗುತ್ತಿಲ್ಲಾ, ಮತ್ತೊಮ್ಮೆ ಈಗ ಸರ್ವೇ ಕಾರ್ಯ ಪ್ರಾರಂಭವಾಗಲಿದೆ ಆಗ ಸಂಪೂರ್ಣ ಕಾಲುವೆ ನೂತನವಾಗಿ ನಿರ್ಮಿಸಿದರೆ ರೈತರ ಜಮೀನುಗಳಿಗೆ ನೀರು ಹೋಗುತ್ತದೆ.

-ಚೇತನ್ ಕಳಸ್ಕರ ಜಲಾಶಯ ಎಇಇ

ಮುಟ್ಟಿಸಬೇಕು ಎಂದು ರೈತರಾದ ಸುಬ್ಬಣ್ಣ ಕೆರೋಳ್ಳಿ, ಶಂಕರ ಭೋಗವಂತಿ, ನಂದು ಕೆರೋಳ್ಳಿ,ಬಸಣ್ಣ ಚಿಂಚೋಳಿ, ಗುಂಡಪ್ಪ ಪೋಲಕಪಳ್ಳಿ, ವೀರಭದ್ರಪ್ಪ, ಸಿದ್ದಪ್ಪಾ ಪಾಟೀಲ, ಸತೀಶ ಇಟಗಿ, ನಾಗೇಂದ್ರ ಪೋಲಕಪಳ್ಳಿ,ಶಿವಕುಮಾರ ಚಿಂಚೋಳಿ, ವಿಠ್ಠಲ ಶಾರದ್, ದೇವೀಂದ್ರ, ರಾಜಶೇಖರ ಕೊಳ್ಳೂರ, ಸುಭಾಷ್ ಚಿಂಚೋಳಿ, ಶಿವರಾಯ ಹಿತ್ತಲ ಒತ್ತಾಯಿಸಿ ತರಾಟೆಗೆ ತೆಗೆದುಕೊಂಡರು.

## ಕಾಡು ಪ್ರಾಣಿಗಳ ಉಪಟಳ: ಗ್ರಾಮಸ್ಥರ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸುಳ್ಯ

ಎರಡು ದಶಕಗಳಿಂದ ಮಂಡೆಕೋಲು ಗ್ರಾಮಸ್ಥರನ್ನು ಕಾಡುತ್ತಿರುವ ಕಾಡಾನೆ ಹಾಗೂ ಇತರ ವನ್ಯಮೃಗಗಳ ಹಾವಳಿ ವಿರುದ್ಧ ಶಾಶ್ವತ ಪರಿಹಾರಕ್ಕೆ ಆಗ್ರಹಿಸಿ ಮಂಡೆಕೋಲಿನಲ್ಲಿ ಪ್ರತಿಭಟನೆ ನಡೆಯಿತು. ಗ್ರಾಮದ ಮುಖ್ಯ ರಸ್ತೆಯಲ್ಲಿ ಮೆರವಣಿಗೆ ನಡೆಸಿದ ಗ್ರಾಮಸ್ಥರು ಸೂಕ್ತ ಕ್ರಮಕ್ಕೆ ಆಗ್ರಹಿಸಿ ಘೋಷಣೆ ಕೂಗಿದರು.

ಪ್ರತಿಭಟನಾ ಸ್ಥಳಕ್ಕೆ ಬಂದ ಸುಳ್ಯ ಶಾಸಕಿ ಭಾಗೀರಥಿ ಮುರುಳ್ಯ ಮಾತನಾಡಿ, ಮಂಡೆಕೋಲು ಗ್ರಾಮಸ್ಥರು ಕಾಡುಪ್ರಾಣಿಗಳ ಉಪಟಳದಿಂದ ಸಮಸ್ಯೆ ಅನುಭವಿಸುತ್ತಿದ್ದಾರೆ. ಗ್ರಾಮಸ್ಥರು ನನ್ನ ಬಳಿಗೂ ದೂರು ತಂದಿದ್ದಾರೆ. ಅಧಿವೇಶನದಲ್ಲೂ ಈ ಸಂಬಂಧ ಸರ್ಕಾರಕ್ಕೆ ಪ್ರಶ್ನೆ ಕೇಳಿ ಕಾಡು ಪ್ರಾಣಿಗಳ ಉಪಟಳಕ್ಕೆ ಶಾಶ್ವತ ಪರಿಹಾರ ಒದಗಿಸುವಂತೆ ಒತ್ತಾಯಿಸಿದ್ದೆ. ಇದೀಗ ಮಂಡೆಕೋಲು ಗ್ರಾಮಸ್ಥರ ಮನವಿ ಮೇರೆಗೆ ಮುಂದಿನ ಬೆಳಗಾವಿ ಅಧಿವೇಶನದಲ್ಲೂ ಈ ಬಗ್ಗೆ ಪ್ರಸ್ತಾಪಿಸಿ ಗ್ರಾಮಸ್ಥರ ಬೇಡಿಕೆ ಈಡೇರಿಸಲು ಒತ್ತಾಯಿಸುತ್ತೇನೆ ಎಂದು ಭರವಸೆ ನೀಡಿದರು. ಆನೆ ಹಾವಳಿ ತಡೆಗೆ ಸರ್ಕಾರದಿಂದ ಅರಣ್ಯ ಇಲಾಖೆ ಮೂಲಕ ಸೋಲಾರ್ ಬೇಲಿ ಅಳವಡಿಸುವ ಪ್ರಕ್ರಿಯೆ ನಡೆಯುತ್ತಿದೆ. ಆದರೆ, ಸೂಕ್ತ ಅನುದಾನವೇ ಬರುತ್ತಿಲ್ಲ.

ವೈಯಕ್ತಿಕವಾಗಿಯೂ ಸೋಲಾರ್ ಬೇಲಿ ಅಳವಡಿಸಲು ಅವಕಾಶ ಇದ್ದು, ಅದಕ್ಕೆ ಸರ್ಕಾರ ಶೇ 50 ಸಹಾಯಧನ ನೀಡುತ್ತಿದೆ. ಆದರೆ, ಬಡವರೇ ಹೆಚ್ಚಾಗಿರುವ ಗ್ರಾಮದಲ್ಲಿ ಶೇ 50ರಷ್ಟು ಸಹಾಯಧನ ಪಡೆದು ಸೋಲಾರ್ ಬೇಲಿ ಅಳವಡಿಸಲು ಶಕ್ತಿ ಇಲ್ಲ. ಈ ಸಂಬಂಧ ಸರ್ಕಾರವೇ ಕೃಷಿ ಬೆಳೆ ರಕ್ಷಣೆಗಾಗಿ ಸಂಪೂರ್ಣ ಉಚಿತವಾಗಿ ಸೋಲಾರ್ ಬೇಲಿ ಅಳವಡಿಸಬೇಕು ಎಂದು ಅಧಿವೇಶನದಲ್ಲಿ ಒತ್ತಾಯಿಸಲಾಗುವುದು ಎಂದರು. ಅರಣ್ಯ ಇಲಾಖೆ ಸುಳ್ಯ ವಲಯದ ಎಸಿಎಫ್ ಮಂಜುನಾಥ್ ಮಾತನಾಡಿ, ಗ್ರಾಮಸ್ಥರ ಬೇಡಿಕೆ ಸಕಾಲಿಕವಾಗಿದೆ.

ನಮ್ಮ ಇಲಾಖೆ ವತಿಯಿಂದಲೂ ನಾವು ಆಗಾಗ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುತ್ತಲೇ ಇದ್ದೇವೆ. ಒಂದು ಕಿ.ಮೀ ಉದ್ದ ಸೋಲಾರ್ ಬೇಲಿ ಅಳವಡಿಸಲು ಸುಮಾರು ರೂ.6.5 ಲಕ್ಷ ವೆಚ್ಚವಾಗುತ್ತಿದ್ದು, ಅನುದಾನ ಬಂದಂತೆ ಆದ್ಯತೆ ಮೇರೆಗೆ ಸೋಲಾರ್ ಬೇಲಿ ಅಳವಡಿಕೆ ಮಾಡುತ್ತಿದ್ದೇವೆ. ದಕ್ಷಿಣ ಕನ್ನಡ ಜಿಲ್ಲೆಗೆ ಆನೆ ಕಾರ್ಯಪಡೆ ಘೋಷಣೆ ಆಗಿದ್ದು, ಹಣಕಾಸು ಇಲಾಖೆ ಒಪ್ಪಿಗೆ ಸಿಕ್ಕ ತಕ್ಷಣ ಕಾರ್ಯಪಡೆ ಜಿಲ್ಲೆಗೆ ಬರಲಿದೆ. ಮುಂದೆ ಕಾರ್ಯಪಡೆ ಮೂಲಕ ಆನೆ ಹಾವಳಿ ತಡೆಯುವ ಪ್ರಯತ್ನ ಮಾಡಲಿದ್ದೇವೆ ಎಂದರು.

## ಪ್ರಧಾನಿ ಮೋದಿ ಭೇಟಿ: ಡಿಸಿ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ

• ಉದಯವಾಹಿನಿ ಉಡುಪಿ

ಪ್ರಧಾನಿ ನರೇಂದ್ರ ಮೋದಿ ಅವರು ಇದೇ 28 ರಂದು ಉಡುಪಿಗೆ ಭೇಟಿ ನೀಡಲಿದ್ದು, ಈ ವೇಳೆ ಭದ್ರತೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸ್ವರೂಪಾ ಟಿ.ಕೆ. ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶೀಲಾ ಹಾಲ್ಕುರಿಕೆ ಸಾಮಾಜಿಕ ಕಾರ್ಯಕರ್ತೆ ರಂಗಭೂಮಿ ನಟಿ ಮಣಿಪಾಲದ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನರೇಂದ್ರ ಮೋದಿ ಅವರು ಆದಿಉಡುಪಿಯ ಹೆಲಿಪ್ಯಾಡ್‌ನಲ್ಲಿ ಇಳಿದು ಕರಾವಳಿ ಬೈಪಾಸ್, ಸಿಟಿ ಬಸ್ ನಿಲ್ದಾಣ, ಕಲ್ಸಂಕ ಮಾರ್ಗವಾಗಿ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡುವರು. ಬಳಿಕ ಲಕ್ಷ ಕಂಠ ಗೀತೋತ್ಸವದಲ್ಲಿ ಭಾಗವಹಿಸುವರು. ಈ ಸಂದರ್ಭದಲ್ಲಿ ಸರ್ಕಾರದ ನಿಯಮಾನುಸಾರ ಶಿಷ್ಟಾಚಾರ ಪಾಲಿಸಬೇಕು ಎಂದರು.

ಕಾರ್ಯಕ್ರಮಕ್ಕೆ ಕೇಂದ್ರ ಹಾಗೂ ರಾಜ್ಯ ಸಚಿವರು ಬರುವ ನಿರೀಕ್ಷೆಯಿದ್ದು, ಅವರ ಸುರಕ್ಷತೆಗೂ ಒತ್ತು ನೀಡಬೇಕು. ಪ್ರಧಾನಿ ಹೆಲಿಪ್ಯಾಡ್‌ನಿಂದ ಕೃಷ್ಣ ಮಠಕ್ಕೆ ಸಂಚರಿಸುವ ರಸ್ತೆಯ


ಉದಯವಾಹಿನಿ ಚಿತ್ರ

ಎರಡೂ ಬದಿಯಲ್ಲಿ ಬ್ಯಾರಿಕೇಡ್ ಅಳವಡಿಸಿ, ಪೊಲೀಸರನ್ನು ನಿಯೋಜನೆಗೊಳಿಸಬೇಕು. ಕೋಲುಗಳನ್ನೊಳಗೊಂಡ ಭಾವುಟಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ ಎಂದು ಹೇಳಿದರು. ಕಾರ್ಯಕ್ರಮಕ್ಕೆ ಜಿಲ್ಲೆಯ ವಿವಿಧ ಭಾಗಗಳಿಂದ ಬರುವ ಜನರ ವಾಹನಗಳ ಸಂಚಾರ ಮಾರ್ಗ, ಅವುಗಳ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ಮೂಲ ಸೌಕರ್ಯಗಳನ್ನು ಆದ್ಯತೆಯ ಮೇಲೆ ಕೈಗೊಳ್ಳಬೇಕು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಅಗ್ನಿಶಾಮಕ ವಾಹನವನ್ನು ನಿಯೋಜಿಸಬೇಕು ಎಂದರು.

ವಾಹನಗಳ ಸುಗಮ ಸಂಚಾರಕ್ಕೆ ಅನುಕೂಲವಾಗುವ ರೀತಿಯಲ್ಲಿ ರಸ್ತೆ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಆದ್ಯತೆಯ ಮೇಲೆ ಕೈಗೊಳ್ಳಬೇಕು. ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆ ಜೊತೆಗೆ ಪ್ರಯಾಣಿಕರಿಗೆ ಬದಲಿ ಮಾರ್ಗ ಅನುಸರಿಸುವ ಬಗ್ಗೆ ಹಾಗೂ ಜನದಟ್ಟಣೆ ನಿಯಂತ್ರಿಸಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

**ಬ್ಯಾಗ್ ನೀರಿನ ಬಾಟಲಿ ನಿಷೇಧ**

ಪ್ರಧಾನಿ ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರು ಬ್ಯಾಗ್ ನೀರಿನ ಬಾಟಲಿ ಧ್ವಜ ಸೇರಿದಂತೆ ಯಾವುದೇ ವಸ್ತುಗಳನ್ನು ತರುವುದನ್ನು ನಿಷೇಧಿಸಲಾಗಿದ್ದು ಈ ಕುರಿತು ಜನರಿಗೆ ಮೊದಲೇ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚಿಸಿದರು. ಪ್ರಧಾನಿ ಭೇಟಿ ಸಂದರ್ಭದಲ್ಲಿ ನಿರಂತರ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳಬೇಕು. ರಸ್ತೆ ಕಾಮಗಾರಿ ಹಾಗೂ ಇತರ ಕಾಮಗಾರಿಗಳಿಗಾಗಿ ಶೇಖರಿಸಿರುವ ಜಲ್ಲಿ ಸೇರಿದಂತೆ ವಿವಿಧ ವಸ್ತುಗಳನ್ನು ತೆರವುಗೊಳಿಸುವುದರೊಂದಿಗೆ ನಗರದ ಶುಚಿತ್ವ ಕಾಪಾಡಬೇಕು ಎಂದರು.

## ಹಿರಿಯ ನಾಗರಿಕರಿಗೆ ಗೌರವ ಕೊಡಿ: ಹೇಮಾವತಿ

• ಉದಯವಾಹಿನಿ, ಹಾಸನ

ಹುಟ್ಟಿದ ಮನುಷ್ಯ ಯಾವಾಗ ಸಾಯುತ್ತಾನೆ ಎಂಬುದು ಗೊತ್ತಿರುವುದಿಲ್ಲ. ಆದರೆ ಬದುಕಿದ್ದ ಸಂದರ್ಭದಲ್ಲಿ ಹಿರಿಯ ನಾಗರಿಕರಿಗೆ ಎಷ್ಟು ಬೆಲೆ, ಗೌರವ ಕೊಡುತ್ತೇವೆ ಎನ್ನುವುದು ಬಹುಮುಖ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಹೇಮಾವತಿ ಹೇಳಿದರು.

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ಹಿರಿಯ ನಾಗರಿಕರ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ನಗರದ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಅಟಲ್ ಅಭ್ಯುದಯ ಯೋಜನೆ ಕುರಿತು ಅಧಿಕಾರಿಗಳಿಗೆ ಆಯೋಜಿಸಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ


ಉದಯವಾಹಿನಿ ಚಿತ್ರ

ದೇಶದ ಸಾಮಾಜಿಕ ವ್ಯವಸ್ಥೆಯನ್ನು ಸದೃಢಗೊಳಿಸಲು ಹಿರಿಯ ನಾಗರಿಕರ ಹಕ್ಕುಗಳ ಸಂರಕ್ಷಣೆ ಕಾಯ್ದೆ ಜಾರಿಗೊಳಿಸಲಾಗಿದೆ. ಆದರೆ ಆ ಕಾಯ್ದೆ ಪ್ರಯೋಜನ ಎಷ್ಟು ಜನರು ಪಡೆಯುತ್ತಿದ್ದಾರೆ ಈ ಕಾಯ್ದೆ ಬಗ್ಗೆ ಅಧಿಕಾರಿಗಳಿಗೆ ಎಷ್ಟು ಗೊತ್ತಿದೆ ಎನ್ನುವುದು ಒಂದು ಪ್ರಶ್ನೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು. -ಕೆ.ಎಸ್. ಲತಾಕುಮಾರಿ, ಜಿಲ್ಲಾಧಿಕಾರಿ

ಅವರು ಮಾತನಾಡಿದರು.

ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಸರ್ಕಾರದ ಯೋಜನೆಗಳನ್ನು ಸಜನಸಾಮಾನ್ಯರಿಗೆ ತ್ವರಿತವಾಗಿ ತಲುಪಿಸಲು ಕ್ರಮ ಕೈಗೊಳ್ಳಬೇಕು. ಹೆತ್ತು, ಹೊತ್ತು, ಸಾಕಿ ಸಲುಹಿ, ಜೀವನ ಕೊಟ್ಟು ಸಮಾಜಕ್ಕೆ ಉತ್ತಮ ಪ್ರಜೆಯನ್ನಾಗಿ ಮಾಡಿದ ತಂದೆ-ತಾಯಿಗಳನ್ನು ಮಕ್ಕಳು ವೃದ್ಧಾಪ್ಯದಲ್ಲಿ ಸರಿಯಾಗಿ ನೋಡಿಕೊಳ್ಳದೇ ವೃದ್ಧಾಶ್ರಮಗಳಿಗೆ ಕಳುಹಿಸುತ್ತಿದ್ದಾರೆ. ಇದು ಸರಿಯಲ್ಲ ಎಂದು ಬೇಸರಿಸಿದರು.

## ಹತ್ತಿ ಖರೀದಿಯಲ್ಲಿ ಆಗುತ್ತಿರುವ ಅನ್ಯಾಯದ ವಿರುದ್ಧ ಹೋರಾಟ

• ಉದಯವಾಹಿನಿ, ವಿಜಯಪುರ

ಸಿಸಿಐ ಅಧಿಕಾರಿ ಸಿದ್ದಲಿಂಗ ಮದರಕಂಡಿ ಅವರು ರೈತರಿಗೆ ಏಕ ವಚನದಲ್ಲಿ ಮಾತನಾಡುತ್ತ ಅನ್ಯಾಯ ಎಸಗಿ ಹತ್ತಿ ಸರಿ ಇಲ್ಲಾ ಎಂದು ಮತ್ತು ಕಪಾಸ ಸೈಟ್ ಅಲ್ಲಿ ಹತ್ತಿ ಎಂದು ನಮೂದಿಸಿಲ್ಲ ನಿಮ್ಮ ಹತ್ತಿ ತೆಗೆದುಕೊಳ್ಳುವುದಿಲ್ಲ ಎಂದು ಅಹಂಕಾರದಿಂದ ಮಾತನಾಡಿ ರೈತರಿಗೆ ಜೋರು ಧ್ವನಿಯಲ್ಲಿ ಮಾತನಾಡಿ ಅವಮಾನ ಮಾಡಿರುವ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದರು

ಹತ್ತಿ ಖರೀದಿ ಕೇಂದ್ರದಲ್ಲಿ ಆಗುತ್ತಿರುವ ಮೋಸ ಮಾಡುತ್ತಿರುವುದಾಗಿ ಹಲವಾರು ರೈತರು ಅಧಿಕಾರಿಯ ವಿರುದ್ಧ ದೂರುಗಳನ್ನು ನೀಡಿರುವ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಹತ್ತಿಸುರಿವಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ರೈತರೊಂದಿಗೆ ಹೋರಾಟ ಮಾಡಲಾಯಿತು. ಸತತವಾಗಿ 3 ಘಂಟೆ ಹೋರಾಟದ ನಂತರ ಸಿಸಿಐ ಅಧಿಕಾರಿ ಸಿದ್ದಲಿಂಗ ಮದರಕಂಡಿ ಅವರನ್ನು ಕರೆಸಿ ಜಿಲ್ಲಾಧಿಕಾರಿ, ಜಿಲ್ಲಾ ಜಂಟಿ ಕೃಷಿ ಅಧಿಕಾರಿ, ಎ. ಪಿ. ಎಂ. ಸಿ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಯಿಸಿ ಅವನಿಂದ ರೈತರಿಗೆ ತಪಾಯಿತು ಎಂದು ಕೇಳಿಸಿ, ಯಾವುದೇ ರೈತರಿಗೆ ಅನ್ಯಾಯ ಮಾಡಬಾರದು ಹಾಗೂ ಮರ್ಯಾದೆ ಕೊಟ್ಟು ಮಾತನಾಡಬೇಕು, ರೈತರ ಜೀವನದ ಜೊತೆ ಚಲ್ಲಾಟ


ಉದಯವಾಹಿನಿ ಚಿತ್ರ

ಮಾಡಬಾರದು ಎಂದು ಎಚ್ಚರಿಕೆ ನೀಡಲಾಯಿತು.

ನೂರಾರು ಕಿ. ಮೀ ದೂರದಿಂದ ರೈತರು ಕಷ್ಟಪಟ್ಟು ರಾತ್ರಿ ಪೂರ್ತಿ ನಿದ್ದೆಗೆಟ್ಟು ಹೆಚ್ಚಿನ ಕೂಲಿ ಆಳುಗಳನ್ನು ಹಚ್ಚಿ ಹತ್ತಿ ತೆಗೆದುಕೊಂಡು ಬಂದಿರುತ್ತಾರೆ, ಅವರಿಗೆ ವಿನಾ ಕಾರಣ ತೊಂದರೆ ಕೊಡಬಾರದು, ತೂಕದಲ್ಲಿ ಮೋಸ ಮಾಡದೇ ಬೆಂಬಲ ಬೆಲೆಯೊಂದಿಗೆ ಖರೀದಿ ಮಾಡಬೇಕು ಎಂದು ರೈತ ಮುಖಂಡರು ಅಗ್ರಹಿಸಿದರು. ಎಲ್ಲಾ ಅಧಿಕಾರಿಗಳು ರೈತರೊಂದಿಗೆ ಸಹಕರಿಸಿ ಸಮಸ್ಯೆ ಬಗೆಹರಿಸುವುದಾಗಿ ಹೇಳಿದಾಗ ಹೋರಾಟ ಹಿಂಪಡೆಯಲಾಯಿತು. ಈ ವೇಳೆ ಮುಖಂಡರಾದ ರಾಜ್ಯ ಉಪಾಧ್ಯಕ್ಷರಾದ ಕಲ್ಲು ಸೊನ್ನದ, ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಸೇರಿದಂತೆ ಹಲವಾರು ರೈತರು ಉಪಸ್ಥಿತರಿದ್ದರು.

## ಕಾಕನೂರ ಬ್ಯಾಂಕ್ ದರೋಡೆ: ಚಿನ್ನ, ನಗದು ವಶ

• ಉದಯವಾಹಿನಿ, ಬಾದಾಮಿ

ತಾಲ್ಲೂಕಿನ ಕಾಕನೂರ ಗ್ರಾಮದ ಎಸ್.ಬಿ.ಐ ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿ ದರೋಡೆಕೋರರನ್ನು ವಶಪಡಿಸಿಕೊಂಡು ಆರೋಪಿತರಿಂದ ರೂ. 24.75 ಲಕ್ಷ ಮೌಲ್ಯದ 198 ಗ್ರಾಂ ಚಿನ್ನ ಮತ್ತು ನಗದು ರೂ. 1.55 ಲಕ್ಷ ಮೌಲ್ಯದ ಒಟ್ಟು ರೂ.26.30 ಲಕ್ಷ ನಗದನ್ನು ವಶಪಡಿಸಿಕೊಂಡಿದ್ದಾರೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ತಿಳಿಸಿದರು.

'ಸೆ.3ರ 2025 ರಂದು ಬಾದಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಅಧಿಕಾರಿಗಳು ಮತ್ತು ಪೊಲೀಸರು



ಉದಯವಾಹಿನಿ ಚಿತ್ರ

ಚುರುಕು ಪತ್ತೆ ಕಾರ್ಯಾಚರಣೆ ಕೈಗೊಂಡರು ಎಂದು ಸಿಪಿಐ ಕಾರ್ಯಾಲಯದಲ್ಲಿ ಅವರು ಪತ್ರಕರ್ತರಿಗೆ ಹೇಳಿದರು.

ಆರೋಪಿತರು ಉತ್ತರ ಪ್ರದೇಶದವರೆಂದು ಮಾಹಿತಿ ತಿಳಿದಾಗ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ತರ ಪ್ರದೇಶಕ್ಕೆ ತೆರಳಿ ಆರೋಪಿಗಳನ್ನು ಬಂಧಿಸಿದ್ದಾರೆ. ರಾತ್ರಿ ಸಮಯದಲ್ಲಿ ಐದು ಜನ ದರೋಡೆಕೋರರು ಹಿಂದಿನಿಂದ ಬ್ಯಾಂಕಿಗೆ ಬಂದು ಗ್ಯಾಸ್, ಆಕ್ಸಿಜನ್ ಸಿಲಿಂಡರ್ ಮತ್ತು ಗ್ಯಾಸ್ ಕಟರ್ ಬಳಿಸಿ ಕನ್ನಹಾಕಿದ್ದರು' ಎಂದು ಆರೋಪಿಗಳಿಂದ ತಿಳಿದಿದೆ.

ನ. 13ರ 2025 ರಂದು ರಾತ್ರಿ ಗಸ್ತು ತಿರುಗುತ್ತಿದ್ದಾಗ ಸಂದೇಹಾಸ್ಪದವಾಗಿ ಕಂಡ ಮಹ್ಮದ್ ನವಾಬ್ ಜಾಕಿರ್ ಅಲಿಖಾನ್ ಎಂಬಾತನನ್ನು ವಿಚಾರಿಸಿದಾಗ ಆರೋಪಿ ದರೋಡೆ ಮಾಡಿದ್ದನ್ನು ಒಪ್ಪಿಕೊಂಡಿದ್ದಾನೆ ಎಂದರು. ಉತ್ತರ ಪ್ರದೇಶದ ಮತ್ತೊಬ್ಬ ಆರೋಪಿ ಕಮರುಲಖಾನ್ ಮಾಮು ಈ ಮೊದಲು ಕುಳಗೇರಿ ವೃತ್ತದ ವೀರಪುಲಿಕೇಶಿ ಸಹಕಾರಿ ಬ್ಯಾಂಕಿನ ಕಳ್ಳತನದಲ್ಲಿ ಭಾಗಿಯಾಗಿದ್ದ ಎಂದು ತಿಳಿಸಿದರು. ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ತರ ಪ್ರದೇಶಕ್ಕೆ ಒಂದು ತಿಂಗಳು ತೆರಳಿ ಆರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸಿರುವುದನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೆಚ್ಚುಗೆ ವ್ಯಕ್ತಪಡಿಸಿದರು.

## ಮಿನಿ ನ್ಯೂಸ್

### ಮಹಿಳೆಯರು ಉನ್ನತ ಶಿಕ್ಷಣ ಪಡೆಯಲು ಮುಂದಾಗಿ : ಜಿ.ಟಿ ಗಣಾಪೂರ

• ಉದಯವಾಹಿನಿ ಬೀದರ್

ಮಹಿಳೆಯರು ಉನ್ನತ ಶಿಕ್ಷಣ ಪಡೆದು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡಬೇಕು. ಶಿಕ್ಷಣದೊಂದಿಗೆ ಒಳ್ಳೆಯ ಸಂಸ್ಕೃತಿ, ನಡತೆ, ಸಂಸ್ಕಾರಗಳನ್ನು ಕಲಿಯಬೇಕು ಎಂದು ಸಮಾಜ ಶಾಸ್ತ್ರದ ಮುಖ್ಯಸ್ಥ ಜಿ.ಟಿ ಗಣಪೂರ ಹೇಳಿದರು. ಮನ್ನಳ್ಳಿ ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಕೋಶದ ಅಡಿಯಲ್ಲಿ ಒಂದು ದಿನದ ಲಿಟರಸಿ ಫೆಸ್ಟ ಕಾರ್ಯಾಗಾರದಲ್ಲಿ ಮಾತನಾಡಿದ ಅವರು ಮಹಿಳೆಯರಲ್ಲಿ ಶೇ 8ರಿಂದ 10 ಮಂದಿ ಮಾತ್ರ ಉನ್ನತ ಶಿಕ್ಷಣದ ಅವಕಾಶ ಪಡೆಯುತ್ತಿದ್ದಾರೆ.

ಬಡತನ, ನಿರ್ಲಕ್ಷ್ಯ ಮೊದಲಾದ ಕಾರಣಗಳು ಅವರನ್ನು ಶಿಕ್ಷಣದಿಂದ ವಂಚಿತರನ್ನಾಗಿಸುತ್ತಿವೆ ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿನಿಯೂ ತಮ್ಮ ಸಂವಹನ ಕೌಶಲ ಅಭಿವೃದ್ಧಿಪಡಿಸಿಕೊಳ್ಳಬೇಕು. ಹೆಚ್ಚು ಭಾಷೆಗಳನ್ನು ಕಲಿಯಬೇಕು, ಶಿಕ್ಷಣದ ನಂತರ ಉದ್ಯೋಗಕ್ಕೆ ಆದ್ಯತೆ ನೀಡಬೇಕು ಎಂದು ತಿಳಿಸಿದರು. ಇತಿಹಾಸ ವಿಭಾಗದ ಮುಖ್ಯಸ್ಥೆ ಭಾಗ್ಯವತಿ ಚಿಲಶೆಟ್ಟಿ ಅವರು ಮಾತನಾಡಿ ಐತಿಹಾಸಿಕ ಸ್ಮಾರಕಗಳು ನಮ್ಮ ಪರಂಪರೆ ಮತ್ತು ಸಂಸ್ಕೃತಿಯ ಪ್ರತೀಕವಾಗಿವೆ. ಐತಿಹಾಸಿಕ ಸ್ಮಾರಕಗಳನ್ನು ಮುಂದಿನ ಪೀಳಿಗೆಗೆ ಉಳಿಸಿ ಸಂರಕ್ಷಿಸುವ ಗುರುತರ ಜವಾಬ್ದಾರಿ ಯುವಪೀಳಿಗೆಯ ಮೇಲಿದೆ ಎಂದು ಹೇಳಿದರು.

### ಸರ್ಕಾರಿ ಕಾಲೇಜು ಮಂಜೂರಿಗೆ ಆಗ್ರಹ

• ಉದಯವಾಹಿನಿ ಮುಂಡರಗಿ

ತಾಲ್ಲೂಕಿನ ಕೊರ್ಲಹಳ್ಳಿ ಗ್ರಾಮದ ರಾಜ್ಯ ಹೆದ್ದಾರಿಯಲ್ಲಿ ತಾಲ್ಲೂಕು ಡಿಪ್ಲೊಮಾ ಹಾಗೂ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಮಂಜೂರಾತಿ ಹೋರಾಟ ಸಮಿತಿ ಕಾರ್ಯಕರ್ತರು ತಾಲ್ಲೂಕಿನಲ್ಲಿ ಸರ್ಕಾರಿ ಡಿಪ್ಲೊಮಾ ಹಾಗೂ ಎಂಜಿನಿಯರಿಂಗ್ ಕಾಲೇಜು ಪ್ರಾರಂಭ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಸಮಿತಿ ಅಧ್ಯಕ್ಷ ದೇವಪ್ಪ ಇಟಗಿ ಮಾತನಾಡಿ, ನಂಜುಂಡಪ್ಪ ವರದಿಯ ಪ್ರಕಾರ ಮುಂಡರಗಿ ತಾಲ್ಲೂಕು ಹಿಂದುಳಿದ ತಾಲ್ಲೂಕಾಗಿದ್ದು, ದೊರೆಯಬೇಕಾದ ಸೌಲಭ್ಯ ಸಮರ್ಪಕವಾಗಿ ದೊರೆಯುತ್ತಿಲ್ಲ. ತಾಲ್ಲೂಕಿನಲ್ಲಿ ಸರ್ಕಾರಿ ಡಿಪ್ಲೊಮಾ ಹಾಗೂ ಎಂಜಿನಿಯರಿಂಗ್ ಕಾಲೇಜು ಇಲ್ಲದಿದ್ದರಿಂದ ಬಡವರು ಹಾಗೂ ಹಿಂದುಳಿದ ವರ್ಗದ ಮಕ್ಕಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಆದ್ದರಿಂದ ತಾಲ್ಲೂಕಿಗೆ ಕಾಲೇಜು ಮಂಜೂರು ಮಾಡಬೇಕು' ಆಗ್ರಹಿಸಿದರು. ಕೊರ್ಲಹಳ್ಳಿ ಗ್ರಾಮದಲ್ಲಿ ಎಸ್‌ಸಿ-ಎಸ್‌ಟಿ ವಸತಿ ನಿಲಯ ಮಂಜೂರು ಹಾಗೂ ವಸತಿ ನಿಲಯ ಮೇಲ್ದರ್ಜೆ, ಆದರ್ಶ ವಿದ್ಯಾಲಯದ ಕಿರು ಬಸ್ ನಿಲ್ದಾಣ ನಿರ್ಮಿಸಿಬೇಕು ಕಾರ್ಯಕರ್ತರು ಒತ್ತಾಯಿಸಿದರು.

### ಮೀಸಲಾತಿ ಹೆಚ್ಚಳಕ್ಕೆ ಯತ್ನ: ತುಕಾರಾಂ

• ಉದಯವಾಹಿನಿ ಸಂಡೂರು

ರಾಜ್ಯದಲ್ಲಿನ ಪಂಚಮಸಾಲಿ ಸಮಾಜದ ಸಮಗ್ರ ಅಭಿವೃದ್ಧಿಗೆ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದ್ದು, ಸಮಾಜದ ಮೀಸಲಾತಿ ಹೆಚ್ಚಳದ ಬಹುದಿನಗಳ ಬೇಡಿಕೆಯನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಸಂಸದ ಇ.ತುಕಾರಾಂ ಹೇಳಿದರು. ಪಟ್ಟಣದ ಆದರ್ಶ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಸಂಡೂರು ತಾಲ್ಲೂಕು ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಕಿತ್ತೂರು ರಾಣಿ ಚೆನ್ನಮ್ಮ ಅವರ 201ನೇ ವಿಜಯೋತ್ಸವ, 247ನೇ ಜಯಂತೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಂಡೂರು ಕ್ಷೇತ್ರದಲ್ಲಿ ಹಲವಾರು ವರ್ಷಗಳಿಂದ ಸಂವಿಧಾನ ವ್ಯವಸ್ಥೆಯಲ್ಲಿ ಉತ್ತಮ ಆಡಳಿತ ನಡೆಸಲಾಗುತ್ತಿದ್ದು. ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ರಸ್ತೆ, ಕುಡಿಯುವ ನೀರು, ವಸತಿ, ಆರೋಗ್ಯ, ಶಿಕ್ಷಣ ಸೇರಿದಂತೆ ಮೂಲ ಸೌಲಭ್ಯಗಳನ್ನು ಒದಗಿಸಲಾಗಿದೆ. ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೋರಾಡಿ ಕಿತ್ತೂರು ಸಂಸ್ಥಾನವನ್ನು ರಕ್ಷಣೆ ಮಾಡಿ ದೇಶದ ಇತಿಹಾಸದಲ್ಲಿ ಚರಿತ್ರೆ ಸೃಷ್ಟಿಸಿದ್ದಾರೆ. ಸಮಾಜದಲ್ಲಿ ಮಹಿಳೆಯರು ಕೇವಲ ಮನೆಗೆ ಮಾತ್ರ ಸಿಮಿತವಲ್ಲ ಎಲ್ಲಾ ಕ್ಷೇತ್ರಗಳಲ್ಲಿ ವಿಶಿಷ್ಟವಾಗಿ ಸೇವೆ ಸಲ್ಲಿಸಲು ಸಬಲರಾಗಿದ್ದಾರೆ. ನಾವುಗಳು ಸಮ ಸಮಾಜದ ನಿರ್ಮಾಣಕ್ಕಾಗಿ ಶ್ರಮಿಸಬೇಕು ಎಂದರು.

### ಎಪಿಎಂಸಿ ಸಹಾಯಕ ನಿರ್ದೇಶಕರ ಮನೆಯಲ್ಲಿ ಒಂದೂವರೆ ಕೆಜಿ ಚಿನ್ನ ಪತ್ತೆ

• ಉದಯವಾಹಿನಿ ದಾವಣಗೆರೆ

ಇಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರಾಟ ವಿಭಾಗದ ಸಹಾಯಕ ನಿರ್ದೇಶಕ ಜೆ. ಪ್ರಭು ಮನೆ ಮೇಲೆ ಮಂಗಳವಾರ ದಾಳಿ ನಡೆಸಿದ ಲೋಕಾಯುಕ್ತ ಪೊಲೀಸರಿಗೆ 1 ಕೆ.ಜಿ. 700 ಗ್ರಾಂ ಚಿನ್ನಾಭರಣ ಹಾಗೂ 10 ಕೆ.ಜಿ ಬೆಳ್ಳಿ ಸಾಮಗ್ರಿ ಪತ್ತೆಯಾಗಿದೆ.

ನಗರದ ಆಂಜನೇಯ ಬಡಾವಣೆಯ ಮನೆ, ಚನ್ನಗಿರಿ ತಾಲ್ಲೂಕಿನ ದೊಡ್ಡಘಟ್ಟ ಗ್ರಾಮದ ತೋಟದ ಮನೆ ಹಾಗೂ ಕಚೇರಿ ಮೇಲೆ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್. ಕೌಲಾಪೂರೆ ನೇತೃತ್ವದಲ್ಲಿ ದಾಳಿ ಮಾಡಲಾಗಿತ್ತು. ಮನೆಯಲ್ಲಿ ರೂ. 7.5 ಲಕ್ಷ ನಗದು ಪತ್ತೆಯಾಗಿದೆ. ಎರಡು ಮನೆ, 6 ನಿವೇಶನಗಳ ದಾಖಲೆಗಳು ಪತ್ತೆಯಾಗಿವೆ. ಕೆಲವನ್ನು ಇವರೇ ಖರೀದಿಸಿದ್ದು, ಇನ್ನು ಕೆಲವು ಸಂಬಂಧಿಕರಿಂದ ದಾನ ಪಡೆದಿರುವುದು ಪರಿಶೀಲನೆಯಲ್ಲಿ ಗೊತ್ತಾಗಿದೆ ಎಂದು ಲೋಕಾಯುಕ್ತ ಮೂಲಗಳು ಮಾಹಿತಿ ನೀಡಿವೆ. ಅಕ್ರಮ ಆಸ್ತಿ ಸಂಪಾದನೆಯ ಆರೋಪದ ಮೇರೆಗೆ ಈ ದಾಳಿ ನಡೆದಿತ್ತು.

# ಎಗ್ಗಿಲ್ಲದೇ ಸಾಗಿದ ಜಾನುವಾರು ಕಳ್ಳ ಸಾಗಣೆ: ಹಸು ಸಾಕಾಣಿಕೆದಾರರಲ್ಲಿ ಹೆಚ್ಚಿದ ಆತಂಕ

### ರಾತ್ರಿ ವೇಳೆ ಮನೆಗೆ ಹಿಂದಿರುಗದೇ ಪ್ರಮುಖ ಸ್ಥಳಗಳಲ್ಲಿ ಬೀಡು ಬಿಡುವ ದನಗಳನ್ನು ಗುರಿಯಾಗಿಸಿಕೊಂಡಿರುವ ಜಾನುವಾರು ಕಳ್ಳರು

• ಉದಯವಾಹಿನಿ, ನರಸಿಂಹರಾಜಪುರ

ತಾಲ್ಲೂಕಿನಾದ್ಯಂತ ಕೆಲ ತಿಂಗಳಿನಿಂದ ಜಾನುವಾರುಗಳ ಕಳ್ಳ ಸಾಗಣೆ ಹೆಚ್ಚುತ್ತಿರುವುದು ಸಾಕಾಣಿಕೆದಾರರ ಆತಂಕಕ್ಕೆ ಕಾರಣವಾಗಿದೆ.

ಪ್ರಮುಖವಾಗಿ ರಾತ್ರಿ ವೇಳೆ ಮನೆಗೆ ಹಿಂದಿರುಗದೇ ಪ್ರಮುಖ ಸ್ಥಳಗಳಲ್ಲಿ ಬೀಡು ಬಿಡುವ ದನಗಳನ್ನು ಗುರಿಯಾಗಿಟ್ಟುಕೊಂಡು ಜಾನುವಾರು ಕಳ್ಳರು ತಮ್ಮ ಕೈ ಚಳಕ ಪ್ರದರ್ಶಿಸಿ ಕಳ್ಳ ಸಾಗಣೆ ಮಾಡುತ್ತಿದ್ದಾರೆ. ಪಟ್ಟಣದ ವ್ಯಾಪ್ತಿಯಲ್ಲಿ ಹೆಚ್ಚಾಗಿ ದನಗಳು ಬೀಡು ಬಿಡುವ ಸ್ಥಳಗಳಾದ ಅಗ್ರಹಾರ, ಅಂಬೇಡ್ಕರ್ ವೃತ್ತ, ಬಸ್ ನಿಲ್ದಾಣ, ಪ್ರವಾಸಿಮಂದಿರ ಹಳೇಪೇಟೆ, ಜೈಲು ರಸ್ತೆ ಹಾಗೂ ಹಲವು ಗ್ರಾಮಗಳ ವ್ಯಾಪ್ತಿಯಲ್ಲಿ ದನಗಳನ್ನು ಕಳ್ಳ ಸಾಗಣೆ ಮಾಡಲಾಗುತ್ತಿದೆ.

ಬಹುತೇಕ ಮಧ್ಯರಾತ್ರಿ 2 ರಿಂದ 3ಗಂಟೆ ವೇಳೆಯಲ್ಲಿ ವಾಹನಗಳಲ್ಲಿ ಬರುವ ದನಗಳ್ಳರು, ಬೀಡಾಡಿ ದನಗಳಿಗೆ ಮಂಪರು ಬರುವ ಔಷಧಿ ಹಾಕಿರುವ ಬ್ರೆಡ್ ತಿನ್ನಲು ನೀಡುತ್ತಾರೆ. ನಂತರ

**ಕಳ್ಳರ ಕೈ ಚಳಕ**

ಅವು ನಿದ್ದೆಗೆ ಜಾರಿದಾಗ ದನಗಳ ಮುಂಗಾಲನ್ನು ಎತ್ತಿ ವಾಹನಕ್ಕೆ ತುಂಬಿಸಿಕೊಂಡು ಹೋಗುತ್ತಾರೆ. ದನಗಳ್ಳರು ವಾಹನದಲ್ಲಿ ಲಾಂಗು, ಮಚ್ಚುಗಳನ್ನು ಇಟ್ಟುಕೊಂಡಿರುವುದರಿಂದ ಸಾರ್ವಜನಿಕರು ತಡೆಯಲು ಹೋದರೆ ಹಲ್ಲೆ ಮಾಡುವುದಕ್ಕೆ ಕೂಡ ಹಿಂಜರಿಯುವುದಿಲ್ಲ. ಹಾಗಾಗಿ ಏನೂ ಮಾಡದ ಸ್ಥಿತಿಯಿದೆ ಎನ್ನುತ್ತಾರೆ ದನಗಳನ್ನು ಕಳ್ಳಸಾಗಾಣೆ ಮಾಡುವುದನ್ನು ಕಂಡ ಪ್ರತ್ಯಕ್ಷದರ್ಶಿಗಳು.

ಕೃಷಿ ಕೆಲಸಕ್ಕಾಗಿ ಮೂರು ಎತ್ತುಗಳನ್ನು ಸಾಕಾಣಿಕೆ ಮಾಡಲಾಗಿತ್ತು. ಪ್ರತಿ ನಿತ್ಯ ಗ್ರಾಮದ ಸಮೀಪದ ಪ್ರದೇಶದಲ್ಲಿ ಮೇಯಲು ಬಿಡುತ್ತಿದ್ದೆವು. ದೀಪಾವಳಿ ಸಮಯದಲ್ಲಿ ಅಕ್ಟೋಬರ್ 22ರಂದು ಗೋ ಪೂಜೆಗೆ ಎತ್ತುಗಳನ್ನು ಹುಡುಕಲು ಹೋದಾಗ ಮೇಯಲು ಹೋಗಿದ್ದ ಸ್ಥಳದಲ್ಲಿ ಇರಲಿಲ್ಲ. ಅನುಮಾನ ಬಂದು ಬಿ.ಎಚ್.ಕೈಮರದ ಗೇಟ್‌ನ ಸಮೀಪವಿರುವ ಸಿಸಿಟಿವಿ ಕ್ಯಾಮೆರಾ, ಅಗ್ರಹಾರದ ಬಳಿಯ ಸಿಸಿಟಿವಿ ಕ್ಯಾಮೆರಾ ಪರಿಶೀಲಿಸಿದಾಗ ಎತ್ತುಗಳು ಹಾಗೂ ದನಗಳನ್ನು ತುಂಬಿಕೊಂಡ ವಾಹನ ಬೆಳಗಿನ ಜಾವ ಹೋಗಿರುವುದು ಸೆರೆಯಾಗಿತ್ತು. ಪೊಲೀಸರಿಗೆ ದೂರು


ಉದಯವಾಹಿನಿ ಚಿತ್ರ

ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಮೂರು ಎತ್ತುಗಳಲ್ಲಿ ಒಂದು ಎತ್ತು ಹಾಯುತ್ತಿದ್ದರಿಂದ ಇದನ್ನು ಬಿಟ್ಟು ಉಳಿದ ಎರಡು ಎತ್ತುಗಳನ್ನು ತುಂಬಿಕೊಂಡು ಹೋಗಿದ್ದಾರೆ. ಕಷ್ಟಪಟ್ಟು ಸಾಕಿದ್ದ ಎರಡು ಎತ್ತುಗಳು ಕಳ್ಳರ ಪಾಲಾಗಿದ್ದರಿಂದ ಅಂದಾಜು ರೂ. 80 ಸಾವಿರಕ್ಕೂ ಅಧಿಕ ನಷ್ಟವುಂಟಾಗಿದೆ ಎಂದು ಸಿರಿಗಳಲೆ ಗ್ರಾಮ ನಿವಾಸಿ ವರುಣ್ ಮಾಹಿತಿ ನೀಡಿದರು.

ಕಳೆದ ಕೆಲವು ದಿನಗಳ ಹಿಂದೆ ಬೆಟ್ಟಗೆರಿ ಬಡಾವಣೆ ನಿವಾಸಿಯೊಬ್ಬರ ಹಸುವನ್ನು ದನಗಳ್ಳರು ಪಟ್ಟಣದ ಅರಣ್ಯ ಇಲಾಖೆ ಸಮೀಪ ಕಾರಿಗೆ ತುಂಬುತ್ತಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲೂ ಸೆರೆಯಾಗಿರುವುದು ಕಂಡು ಬಂದಿದೆ. ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿದ್ದರೂ ದನಗಳ್ಳತನ ಅವ್ಯಾಹತವಾಗಿ ನಡೆಯುತ್ತಿರುವುದು ಸಾರ್ವಜನಿಕರಲ್ಲಿ ಆತಂಕವನ್ನುಂಟು ಮಾಡಿದೆ.

ದನಕಳ್ಳತನ ಮಾಡುವ ತಂಡದ ಹಿಂದೆ ಸ್ಥಳೀಯರ ಕೈವಾಡ ಇರುವ ಸಾಧ್ಯತೆಯೂ ಇದ್ದು, ಇದನ್ನು ಪತ್ತೆ ಹಚ್ಚಿ ಆರೋಪಿಗಳನ್ನು ಬಂಧಿಸಿ ದನಗಳ್ಳತನ ತಡೆಗಟ್ಟಬೇಕು ಎಂಬುದು ಸ್ಥಳೀಯರ ಆಗ್ರಹವಾಗಿದೆ.

**ದನ ಅಕ್ರಮ ಸಾಗಣೆ ತಡೆಗೆ ಹಲವು ಕ್ರಮ**

ಪಟ್ಟಣದ ವ್ಯಾಪ್ತಿಯಲ್ಲಿ ದನಗಳನ್ನು ಅಕ್ರಮವಾಗಿ ಸಾಗಣೆ ಮಾಡುವುದನ್ನು ತಡೆಗಟ್ಟಲು ಪೊಲೀಸರ ರಾತ್ರಿ ಗಸ್ತು ಹೆಚ್ಚಿಸಲಾಗಿದೆ. ಈ ಹಿಂದೆ ದನ ಸಾಗಣೆ ಕೃತ್ಯದಲ್ಲಿ ಭಾಗಿಯಾದವರ ಬಗ್ಗೆ ಹೆಚ್ಚಿನ ನಿಗಾವಹಿಸಲಾಗಿದೆ. ಮುತ್ತಿನಕೊಪ್ಪದ ಚೆಕ್‌ಪೋಸ್ಟ್ ಬಳಿ ಕೆನರಾ ಬ್ಯಾಂಕ್ ಸಹಕಾರದಿಂದ ಅತ್ಯಾಧುನಿಕ ತಂತ್ರಜ್ಞಾನದ ವಾಹನದ ನಂಬರ್ ಪ್ಲೇಟ್ ದಾಖಲಾಗುವ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದೆ. ಬಿ.ಎಚ್.ಕೈಮರ ವ್ಯಾಪ್ತಿಯಲ್ಲೂ ಇನ್ನೂ 15 ದಿನಗಳೊಳಗೆ ಅತ್ಯಾಧುನಿಕ ತಂತ್ರಜ್ಞಾನದ ರೂ.1.50 ಲಕ್ಷ ವೆಚ್ಚದ ಸಿ.ಸಿಟಿವಿ ಕ್ಯಾಮೆರಾ ಅಳವಡಿಸಲಾಗುವುದು ಎಂದು ಎನ್.ಆರ್.ಪುರ. ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ನಿರಂಜನಗೌಡ ತಿಳಿಸಿದರು. ದನ ಅಕ್ರಮ ಸಾಗಣೆ ತಡೆಗೆ ಹಲವು ಕ್ರಮ ಪಟ್ಟಣದ ವ್ಯಾಪ್ತಿಯಲ್ಲಿ ದನಗಳನ್ನು ಅಕ್ರಮವಾಗಿ ಸಾಗಣೆ ಮಾಡುವುದನ್ನು ತಡೆಗಟ್ಟಲು ಪೊಲೀಸರ ರಾತ್ರಿ ಗಸ್ತು ಹೆಚ್ಚಿಸಲಾಗಿದೆ. ಈ ಹಿಂದೆ ದನ ಸಾಗಣೆ ಕೃತ್ಯದಲ್ಲಿ ಭಾಗಿಯಾದವರ ಬಗ್ಗೆ ಹೆಚ್ಚಿನ ನಿಗಾವಹಿಸಲಾಗಿದೆ. ಮುತ್ತಿನಕೊಪ್ಪದ ಚೆಕ್‌ಪೋಸ್ಟ್ ಬಳಿ ಕೆನರಾ ಬ್ಯಾಂಕ್ ಸಹಕಾರದಿಂದ ಅತ್ಯಾಧುನಿಕ ತಂತ್ರಜ್ಞಾನದ ವಾಹನದ ನಂಬರ್ ಪ್ಲೇಟ್ ದಾಖಲಾಗುವ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ:** ಅಧ್ಯಯನಗಳನ್ನು ತಪ್ಪಿಸಿ ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಿಕೆ ನಿಮ್ಮ ಪೋಷಕರಿಗೆ ಕೋಪ ಬರಿಸಬಹುದು. ನಿಮ್ಮ ಪೋಷಕರನ್ನು ಸಂತೋಷಗೊಳಿಸಲು ಎರಡನ್ನೂ ಸಂಭಾಳಿಸಬೇಕು.

**ವೃಷಭ:** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಲಿರಲಿ.

**ಮಿಥುನ:** ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

**ಕರ್ಕಾಟಕ:** ಹಾಸ್ಯ ಪ್ರಜ್ಞೆ ಇನ್ನೊಬ್ಬರಿಗೆ ಸಂತೋಷವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ.

**ಸಿಂಹ:** ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷಸ್ಥಾನವನ್ನು ಹೊಂದಿರುತ್ತಾರೆ.

**ಕನ್ಯಾ:** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ತುಲಾ:** ಇಂದು ನೀವು ಇದನ್ನು ತಿಳಿಯುತ್ತೀರಿ. ಇಂದು, ಯಾರಿಗೂ ತಿಳಿಸದೆ, ನಿಮ್ಮ ಮನೆಯಲ್ಲಿ ದೂರದ ಸಂಬಂಧಿಯೊಬ್ಬರ ಪ್ರವೇಶವಿರಬಹುದು, ಅದು ನಿಮ್ಮ ಸಮಯವನ್ನು ಹಾಳು ಮಾಡುತ್ತದೆ.

**ವೃಶ್ಚಿಕ:** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ.

**ಧನಸ್ಸು:** ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

**ಮಕರ:** ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು, ಆದ್ದರಿಂದ ಇಂದು ನೀವು ನಿಮ್ಮ ವಸ್ತುವನ್ನು ಎಚ್ಚರಿಕೆಯಿಂದ ಇಟ್ಟುಕೊಳ್ಳಬೇಕು.

**ಕುಂಭ:** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಆಕಸ್ಮಿಕವಾಗಿ ಲಾಭವನ್ನು ಪಡೆಯಬಹುದು.

**ಮೀನ:** ನಿಮ್ಮ ಅಧಿಕ ಚೈತನ್ಯವನ್ನು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನೆರೆಮನೆಯವರ ಜೊತೆಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ.

### ಯಾವುದೇ ಸಮಸ್ಯೆಗಳು ಕಂಡುಬಂದಲ್ಲಿ ವಿಕಲಚೇತನರು ಕಾನೂನು ಸೇವಾ ಪ್ರಾಧಿಕಾರಕ್ಕೆ ಸಂಪರ್ಕಿಸಿ:ನ್ಯಾ. ಎಂ.ವಿಜಯ್

# ಛಲವಿದ್ದರೆ ಸಾಧನೆಗೆ ಅಂಗವಿಕಲತೆ ಅಡ್ಡಿಯಾಗುವುದಿಲ್ಲ

• ಉದಯವಾಹಿನಿ ಚಿತ್ರದುರ್ಗ

ಆತ್ಮವಿಶ್ವಾಸ ಹಾಗೂ ಛಲವಿದ್ದಲ್ಲಿ ಅಂಗವಿಕಲ ನ್ಯೂನತೆಗಳು ಸಾಧನೆಗೆ ಅಡ್ಡಿಯಾಗುವುದಿಲ್ಲ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ಮಂಗಳವಾರ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ 2025ರ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ವಿಕಲಚೇತನರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ನಂತರ ಕ್ರೀಡಾ ಸ್ಪರ್ಧೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಧನೆಗೆ ಅಂಗವಿಕಲತೆ ಹಾಗೂ ನ್ಯೂನತೆಗಳು ಅಡ್ಡಿಯಾಗುವುದಿಲ್ಲ. ಬದಲಾಗಿ ನಮ್ಮಲ್ಲಿ ಆತ್ಮವಿಶ್ವಾಸ ಮತ್ತು ಸಾಧಿಸುವ ಛಲವಿದ್ದಲ್ಲಿ ಸಾಧನೆಯ ಹಾದಿ ಸುಲಭವಾಗುತ್ತದೆ. ವಿಕಲಚೇತನರನ್ನು ಮುಖ್ಯವಾಹಿನಿಗೆ ತರಲು ಸರ್ಕಾರ ಹತ್ತು ಹಲವು ಯೋಜನೆ ಹಾಗೂ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ವಿಕಲಚೇತನರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದೆ. ನ್ಯಾಯಾಲಯಕ್ಕೆ ಸಂಬಂಧಿಸಿದಂತೆ ಅಂಗವಿಕಲರಿಗೆ ಹಲವು ಯೋಜನೆಗಳಿವೆ. ವಿಶೇಷವಾಗಿ ವಿಕಲಚೇತನರ ಪ್ರಕರಣಗಳನ್ನು ನ್ಯಾಯಾಲಯವೇ ವೈಯಕ್ತಿಕವಾಗಿ ದಾಖಲಿಸಿಕೊಂಡು ಶೀಘ್ರವಾಗಿ ನ್ಯಾಯವನ್ನು ಒದಗಿಸುವ ಕೆಲಸವನ್ನು ಮಾಡುತ್ತಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ತಾಲ್ಲೂಕು ಮಟ್ಟದಿಂದ ಸುಪ್ರಿಂ ಕೋರ್ಟ್‌ವರೆಗೂ ಉಚಿತ ಕಾನೂನು ಸಲಹೆ ಮತ್ತು ನೆರವಿಗೆ ವಕೀಲರನ್ನು ನೇಮಿಸಿ ಸೇವೆಯನ್ನು ನೀಡುತ್ತಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಈ ಬಗ್ಗೆ 15 ಜನರ ತಂಡವಿದೆ. ಯಾವುದೇ ಸಮಸ್ಯೆಗಳು ಕಂಡುಬಂದಲ್ಲಿ ವಿಕಲಚೇತನರು ಕಾನೂನು ಸೇವಾ ಪ್ರಾಧಿಕಾರಕ್ಕೆ ಸಂಪರ್ಕಿಸಿ ಉಚಿತವಾಗಿ ಕಾನೂನು ಸಲಹೆ ಮತ್ತು ಸೇವೆಯನ್ನು ಪಡೆಯಬಹುದು.

ಎಲ್ಲಾ ತಾಲ್ಲೂಕು ಮಟ್ಟದ ಮಕ್ಕಳಿಗೂ ಸಹ ಇಂತಹ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಯ ಪ್ರೋತ್ಸಾಹ ಸಿಗುವಂತಾಗಲಿ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಎಚ್.ವಿಜಯ್ ಕುಮಾರ್ ಮಾತನಾಡಿ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ದೇಹ ಮತ್ತು ಮನಸ್ಸು ಶಾಂತತೆಯನ್ನು ಕಾಪಾಡಿಕೊಳ್ಳುತ್ತದೆ.

ಎಲ್ಲಾ ತಾಲ್ಲೂಕು ಮಟ್ಟದಲ್ಲಿ ಅಂಧ ವಿದ್ಯಾರ್ಥಿಗಳಿಗೆ ಕ್ರೀಡೆಯನ್ನು ಈಗಾಗಲೇ ನಡೆಸಲಾಗಿದೆ.

ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಪ್ರಶಸ್ತಿ ಪತ್ರ ಹಾಗೂ ಪದಕಗಳನ್ನು ಮುಂದಿನ ದಿನಗಳಲ್ಲಿ ವಿತರಣೆ ಮಾಡಲಾಗುವುದು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತ ಎಂ.ನೆಲವಗಿ, ಸಾರ್ವಜನಿಕ ಶಿಕ್ಷಣ ಇಲಾಖೆ ದೈಹಿಕ ಶಿಕ್ಷಕ ಆರ್.ಉಮೇಶಪ್ಪ, ಕರ್ನಾಟಕ ರಾಜ್ಯ ಅಂಗವಿಕಲರ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಚ್.ಶ್ರೀನಿವಾಸ ಸೇರಿದಂತೆ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ವಿಶ್ವ ವಿಕಲಚೇತನರ ದಿನಾಚರಣೆ**

ವಿಕಲಚೇತನರು ಯಾವುದೇ ಕ್ಷೇತ್ರದಿಂದ ಅವಕಾಶ ವಂಚಿತರಾಗಬಾರದು, ಶಿಕ್ಷಣದಂತಹ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಮಾದರಿ ವ್ಯಕ್ತಿಗಳಾಬೇಕು ಎಂದು ಹೇಳಿದ ಅವರು ಎಲ್ಲಾ ಅಭ್ಯರ್ಥಿಗಳು ಈ ಕಾರ್ಯಕ್ರಮದಲ್ಲಿ ಸ್ವಯಂಪ್ರೇರಿತರಾಗಿ ಭಾಗವಹಿಸಬೇಕು. ಸ್ಥಳೀಯ ಗ್ರಾಮ ಪಂಚಾಯತ್ ಅಡಿ ಅಧಿಕಾರಿಗಳ ಮೂಲಕ ವಿಶೇಷವಾಗಿ ಅಂಗವಿಕಲರಿಗೆ ಮಾಹಿತಿಯನ್ನು ಒದಗಿಸುವ ಕೆಲಸವಾಗುತ್ತಿದೆ. ಸರ್ಕಾರ ವಿಕಲಚೇತನರಿಗಾಗಿಯೇ ಹಲವು ಯೋಜನೆಗಳನ್ನು ಜಾರಿಗೆ ತಂದು ಶ್ರಮಿಸುತ್ತಿದೆ. ವಿಕಲಚೇತನರಿಗೆ ಶೇ 5% ರಷ್ಟು ಮೀಸಲಾತಿಯನ್ನು ನಿಗದಿ ಮಾಡಿದೆ. ಎಲ್ಲವನ್ನು ಉಪಯೋಗಿಸಿಕೊಂಡು ಮುನ್ನೆಲೆಗೆ ಬರಬೇಕೆಂದು ಹೇಳಿದರು.
-ವೈ.ರವಿಕುಮಾರ್, ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ

ಪ್ರತಿ ವರ್ಷದಂತೆ ಈ ವರ್ಷವೂ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಆರೋಗ್ಯ ತಪಾಸಣೆ ಶಿಬಿರಗಳು, ಶಾಲಾ ಕಾಲೇಜುಗಳಲ್ಲಿ ಹಾಗೂ ವಿಕಲಚೇತನರಿಗೆ ಇಲಾಖೆಯಲ್ಲಿ ಬರುವ ಯೋಜನೆಗಳ ಬಗ್ಗೆ ಮಾಹಿತಿ ನೀಡಿ ಅರಿವನ್ನು ಮೂಡಿಸಬೇಕೆನ್ನುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಕ್ರೀಡಾ ವಿಭಾಗದಲ್ಲಿ ವಿಕಲಚೇತನರು ಯಾವುದರಲ್ಲಿಯೂ ಕಡಿಮೆ ಇಲ್ಲ, ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮ ಸಾಧನೆಯನ್ನು ತೋರುತ್ತಿದ್ದಾರೆ.
-ಜೆ.ವೈಶಾಲಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ


## ಗೃಹ ಬಳಕೆಗೆ ಉಪಯೋಗಿಸುವ ಅಡುಗೆ ಅನೀಲ ವಾಣಿಜ್ಯ ಉಪಯೋಗಕ್ಕೆ ಅಕ್ರಮ ಸಾಗಾಟ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಅವಳಿ ಪಟ್ಟಣದ ಸೇರಿದಂತೆ ಇತರೆ ಗ್ರಾಮೀಣ ಪ್ರದೇಶಗಳಲ್ಲಿ ಗೃಹ ಬಳಕೆಗೆ ಉಪಯೋಗಿಸುವ ಅಡುಗೆ ಅನೀಲವನ್ನು ವಾಣಿಜ್ಯ ಉಪಯೋಗಕ್ಕೆ ಅಕ್ರಮವಾಗಿ ಬಳಸಿಕೊಳ್ಳಲಾಗುತ್ತಿದೆ ಆದರೆ ಅಧಿಕಾರಿಗಳು ನೋಡಿದರೂ ನೋಡದ ರೀತಿಯಲ್ಲಿ ಜಾಣ ಮೌನವಹಿಸಿದ್ದು ನಿದ್ರೆಯಿಂದ ಎದ್ದು ಅಕ್ರಮ ಅನೀಲ ತಡೆಗಟ್ಟಬೇಕೆಂದು ರಾಜ್ಯ ಮಾಹಿತಿ ಹಕ್ಕು ಹಾಗೂ ಸಾಮಾಜಿಕ ಕಾರ್ಯಕರ್ತರ ತಾಲ್ಲೂಕಾ ವೇದಿಕೆ ವತಿಯಿಂದ ಗ್ರೇಡ್ 2 ತಹಸೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದರು. ಕಳೆದ ಜನವರಿ 28ರಂದು ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ,

ಅಕ್ರಮವಾಗಿ ಗೃಹಬಳಕೆ ಸಿಲಿಂಡರ್‌ಗಳು ಸಾಗಾಟ ನಡೆಯುತ್ತಿದೆ,ಆಹಾರ ಸರಬರಾಜು ಇಲಾಖೆಯ ಜಿಲ್ಲಾಧಿಕಾರಿಗಳು ತಕ್ಷಣವೇ ಮನವಿಗೆ ಸ್ಪಂದಿಸಿ ಕೂಡಲೇ ಅಕ್ರಮವಾಗಿ ಬಳಕೆ ನಡೆಸುತ್ತಿರುವ ಮತ್ತು ಅಕ್ರಮವಾಗಿ ಅನೀಲ ಸಾಗಾಟನೆ ಮಾಡುತ್ತಿರುವ ಸಂಬಂಧಪಟ್ಟ ಏಜೇನ್ಸಿ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು.

ಇಲ್ಲಾದಿದ್ದರೆ ಬರುವ ದಿನಗಳಲ್ಲಿ ತಹಶೀಲ್ದಾರ್ ಕಛೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ರಾಜ್ಯ ಮಾಹಿತಿ ಹಕ್ಕು ಸಮಾಜಿಕ ಕಾರ್ಯಕರ್ತರ ವೇದಿಕೆ ತಾಲ್ಲೂಕಾ ಅಧ್ಯಕ್ಷ ಅನೀಲಕುಮಾರ ಬಿರಾದಾರ ಸುದ್ದಿಗಾರರೊಂದಿಗೆ ಮಾತನಾಡಿ ತಿಳಿಸಿದ್ದಾರೆ. ಭಾಗ್ಯವಂತ ಶಾರದ್ ಇದ್ದರು.


ಉದಯವಾಹಿನಿ ಚಿತ್ರ

**ಕ್ರಮಕ್ಕೆ ಆಗ್ರಹ**

## ಕಾಮಗಾರಿ ಪ್ರಗತಿ ವೀಕ್ಷಿಸಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್

### ಎಸ್.ನಿಜಲಿಂಗಪ್ಪನರ ಮನೆಗೆ ಅಂದಾಜು ರೂ.1.20 ಕೋಟಿ ವೆಚ್ಚದಲ್ಲಿ ಪಾರಂಪರಿಕ ರೂಪದ ಸ್ಪರ್ಶ

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ನಗರದಲ್ಲಿ ಮಾಜಿ ಮುಖ್ಯಮಂತ್ರಿ ದಿ: ಎಸ್. ನಿಜಲಿಂಗಪ್ಪನವರು ವಾಸವಿದ್ದ ಮನೆ 'ವಿನಯ' ಕಟ್ಟಡಕ್ಕೆ ರೂ.1.20 ಕೋಟಿ ವೆಚ್ಚದಲ್ಲಿ ಮೂಲರೂಪಕ್ಕೆ ಧಕ್ಕೆ ಬಾರದ ರೀತಿ ನವೀಕರಿಸಲು ಪಾರಂಪರಿಕ ಸ್ಪರ್ಶ ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು. ಮಂಗಳವಾರ ಕಾಮಗಾರಿ ಪ್ರಗತಿಯನ್ನು ವೀಕ್ಷಿಸಿದ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು.

ಎಸ್. ನಿಜಲಿಂಗಪ್ಪನವರು ವಾಸವಿದ್ದ ಮನೆಯನ್ನು ಸರ್ಕಾರದಿಂದ ಈಗಾಗಲೇ ಖರೀದಿಸಲಾಗಿದೆ. ಕಟ್ಟದ ನವೀಕರಣ ಕಾರ್ಯ ಪೂರ್ಣಗೊಳಿಸಿ ಸಾರ್ವಜನಿಕರ ಪ್ರದರ್ಶನಕ್ಕೆ ಅನುಕೂಲ ಮಾಡಿಕೊಡಲಾಗುವುದು. ಈ ವಿಚಾರಕ್ಕೆ ನಿಜಲಿಂಗಪ್ಪನವರ ವಂಶಸ್ಥರು ಸಹ ಸಹಕಾರ ನೀಡಿದ್ದಾರೆ. ಮನೆ ಪಾರಂಪರಿಕ ಕಟ್ಟಡವಾಗಿದ್ದು, ಮೂಲ ರೂಪದಲ್ಲಿ ಯಾವುದೇ ಬದಲಾವಣೆ ಮಾಡದೆ ನವೀಕರಣ ಕಾರ್ಯ ಕೈಗೊಳ್ಳಲಾಗುತ್ತಿದೆ. ಯೋಜನೆಗೆ ರಾಜ್ಯ ಪುರಾತತ್ವ ಇಲಾಖೆ ಸಹಕಾರ ಹಾಗೂ ತಾಂತ್ರಿಕ ಸಲಹೆ ಪಡೆಯಲಾಗಿದೆ. ನಿರ್ಮಿತಿ ಕೇಂದ್ರದಿಂದ ರೂ.1.20 ಕೋಟಿ ವೆಚ್ಚದ ವಿಸ್ತ್ರತ ಯೋಜನಾ ವರದಿಯನ್ನು ಸಿದ್ದಪಡಿಸಲಾಗಿದೆ. ಈಗಾಗಲೇ ಕಾಮಗಾರಿ ಪ್ರಾರಂಭವಾಗಿದ್ದು, ಕಟ್ಟಡದ ರಿಪ್ಲಾಸ್ಟರಿಂಗ್, ಫ್ಲೋರಿಂಗ್, ವಿದ್ಯುತ್ ಕಾಮಗಾರಿಗಳನ್ನು ನಡೆಸಲಾಗುವುದು.

ಮೂಲ ಕಟ್ಟಡವನ್ನು ಸುಣ್ಣ, ಬೆಲ್ಲ, ಅಲೋವೆರ ಮಿಶ್ರಣದಿಂದ ತಯಾರಿಸಿದ ಗಾರೆ ಹಾಗೂ ಮಣ್ಣನ್ನು ಬಳಸಿ ನಿರ್ಮಿಸಲಾಗಿದೆ. ಇದೇ ಮಾದರಿಯಲ್ಲಿ ಕಟ್ಟಡವನ್ನು ಪುನರ್ ನಿರ್ಮಾಣ ಮಾಡಲು ಹೆಚ್ಚಿನ ಸಮಯ ಬೇಕಾಗುತ್ತದೆ. ಈ ಕುರಿತು ಪುರಾತತ್ವ ಇಲಾಖೆ ಹಾಗೂ ನಿರ್ಮಿತಿ ಕೇಂದ್ರದವರು ಚರ್ಚಿಸಿ ತೀರ್ಮಾನ ಕೈಗೊಳ್ಳಲಿದ್ದಾರೆ. ಇದಕ್ಕಾಗಿ ನಿಜಲಿಂಗಪ್ಪನವರ ಪುತ್ರ ಒಳಗೊಂಡಂತೆ ಸಮಿತಿ ಸಹ ರಚಿಸಲಾಗಿದೆ. ಮೂಲ ವಿನ್ಯಾಸಕ್ಕೆ ಧಕ್ಕೆ ಬಾರದ ರೀತಿಯಲ್ಲಿ ಪಾರಂಪರಿಕವಾಗಿಯೇ ಕಟ್ಟಡ ಕಾಣುವಂತೆ ಕಾಮಗಾರಿ ಕೈಗೊಳ್ಳಬೇಕಾಗಿರುವುದರಿಂದ ಹೆಚ್ಚಿನ ಸಮಯ ಬೇಕಾಗುತ್ತದೆ. 5 ರಿಂದ 6 ತಿಂಗಳಿನಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿರುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ವಿವರ ನೀಡಿದರು.

ಈ ವೇಳೆ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಹರೀಶ್ ಕುಮಾರ್, ಸಹಾಯಕ ಇಂಜಿನಿಯರ್ ರವಿ ಮುಂತಾದವರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ತಂಗಡಗಿಯವರು ಇತ್ತೀಚೆಗೆ ಭೇಟಿ ನೀಡಿದ ಸಂದರ್ಭದಲ್ಲಿ, ಕಟ್ಟಡ ನವೀಕರಣಗೊಳಿಸಲು ಸಲಹೆ ಸೂಚನೆ ನೀಡಿದ್ದು, ಅಗತ್ಯವಿದ್ದಲ್ಲಿ ಹೆಚ್ಚುವರಿ ಅನುದಾನ ನೀಡುವ ಭರವಸೆ ನೀಡಿದ್ದಾರೆ. ಈಗಾಗಲೇ ರೂ.84 ಲಕ್ಷ ಅನುದಾನ ಬಿಡುಗಡೆಯಾಗಿದೆ. ವರದಿ ಪರಿಶೀಲಿಸಿ, ಪತ್ರ ಬರೆದು ಹೆಚ್ಚುವರಿ ಅನುದಾನಕ್ಕೆ ಕೋರಿಕೆ ಸಲ್ಲಿಸಲಾಗುವುದು
-ಟಿ.ವೆಂಕಟೇಶ್, ಜಿಲ್ಲಾಧಿಕಾರಿ

## ಬಿಎಂಆರ್ ಸಿ ಆಸ್ಪತ್ರೆಯಲ್ಲಿ ಮಗು ಸಾವು: ವೈದ್ಯರ ನಿರ್ಲಕ್ಷ್ಯದ ಆರೋಪ

• ಉದಯವಾಹಿನಿ, ಬಳ್ಳಾರಿ

ಇಲ್ಲಿನ ಬಿಎಂಆರ್ ಸಿ ಆಸ್ಪತ್ರೆಯಲ್ಲಿ ವೈದರ ನಿರ್ಲಕ್ಷ್ಯಕ್ಕೆ 8 ವರ್ಷದ ಬಾಲಕ ಸಾವನ್ನಪ್ಪಿದ್ದಾನೆಂದು ಪಾಲಕ ಪೋಷಕರು ಪ್ರತಿಭಟನೆ ನಡೆಸಿದ ಘಟನೆ ಇಂದು ಬೆಳಗಿನ ಜಾವ ನಡೆಯಿತು.

ಸಸಸಸಸಸಡ ಅಂದ್ರಾಳ ಗ್ರಾಮದ ರವಿ ಮತ್ತು ಶಾಂತ ದಂಪತಿಗಳ ಮಗ 8 ವರ್ಷದ ಬಾಲಕ ಅರುಣ್ ಸಾವನ್ನಪ್ಪಿದ ಬಾಲಕ. ಸಕಾಲಕ್ಕೆ ಮಗುವಿಗೆ ಚಿಕಿತ್ಸೆ ನೀಡಲಿಲ್ಲ ಎಂದು ಆಸ್ಪತ್ರೆ ಮುಂದೆ ಮುಗಿಲ ಮುಟ್ಟಿತ್ತು ಪೋಷಕರ ಆಕ್ರಂದನ. 20 ದಿನಗಳಲ್ಲಿ ಒಂದೇ ಸ್ಥಳದಲ್ಲಿ 3 ಬಾರಿ ಅಪೆಂಡಿಕ್ಸ್ ಅಪರೇಷನ್ ಮಾಡಿದ್ರು ಫೇಲಾಗಿದೆಯಂತೆ ಮೊದಲು ಆಪರೇಷನ್ ಮಾಡಿ ಕಳುಹಿಸಲಾಗಿದೆ. ಆದ್ರೇ ಮತ್ತೊಮ್ಮೆ ಹೊಟ್ಟೆ ನೋವು ಕಾಣಿಸಿಕೊಂಡ ಹಿನ್ನೆಲೆ ಮತ್ತೊಮ್ಮೆ ಆಪರೇಷನ್ ಮಾದರಿಯಲ್ಲಿಯೇ ಚಿಕಿತ್ಸೆ ನೀಡಿದ್ದಾರೆ. ಆದ್ರೇ ಫಲಕಾರಿಯಾಗಿಲ್ಲವೆಂದು ಪೋಷಕರಿಂದ ಕೆಲ ಕಾಲ ಪ್ರತಿಭಟನೆಕಾರರ ಮನವೊಲಿಸಿ ಪೊಲೀಸರು ಕಳುಹಿಸಿದ್ದಾರೆ.

## ಬೀದರದಲ್ಲಿ ಕಬ್ಬು ಬೀಜ ಅಭಿವೃದ್ಧಿ ಕೇಂದ್ರ ಸ್ಥಾಪನೆ ಮಾಡುವಂತೆ ರೈತರ ಒತ್ತಾಯ

• ಉದಯವಾಹಿನಿ, ಬೀದರ

ಜಿಲ್ಲೆಯಲ್ಲಿ ಕಬ್ಬು ಬೆಳೆ ವ್ಯಾಪಕವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ, ಜಿಲ್ಲೆಯ ರೈತರು ಸರ್ಕಾರಕ್ಕೆ ಮಹತ್ವದ ಮನವಿಯನ್ನು ಸಲ್ಲಿಸಿದ್ದಾರೆ. ಸಕ್ಕರೆ ಸಚಿವರಾದ ಶ್ರೀ ಶಿವನಂದ ಪಾಟೀಲ್ ಅವರಿಗೆ ಸಲ್ಲಿಸಿದ ಅರ್ಜಿಯಲ್ಲಿ, ಕಬ್ಬಿನ ಉತ್ತಮ ತಳಿಗಳನ್ನು ಅಭಿವೃದ್ಧಿಪಡಿಸಲು ಹಾಗೂ ರೈತರಿಗೆ ನೇರ ಲಾಭವಾಗುವಂತೆ 'ಕಬ್ಬು ಬೀಜ ಅಭಿವೃದ್ಧಿ ಕೇಂದ್ರ' ಜಿಲ್ಲೆಯಲ್ಲಿ ಸ್ಥಾಪಿಸಬೇಕೆಂದು ಮನವಿ ಮಾಡಲಾಗಿದೆ.

ಬೀದರ್ ಜಿಲ್ಲೆಯಲ್ಲಿ ಹೆಚ್ಚಿನ ನೀರಾವರಿ ಸೌಲಭ್ಯ ಇರುವುದರಿಂದ ಕಬ್ಬಿನ ಬೆಳೆ ಹೆಚ್ಚಾಗಿ ಬೆಳೆಯಲಾಗುತ್ತದೆ. ಆದರೆ ಗುಣಮಟ್ಟದ ಕಬ್ಬಿನ ಬೀಜಗಳನ್ನು ಪಡೆಯಲು ಬೆಳಗಾವಿ ಮತ್ತು ಕೊಲ್ಹಾಪುರಕ್ಕೆ 500–600 ಕಿ.ಮೀ. ದೂರ ಪ್ರಯಾಣಿಸಬೇಕಾಗುತ್ತದೆ, ಇದು ಸಮಯ ಮತ್ತು ವೆಚ್ಚದ ದೃಷ್ಟಿಯಿಂದ ರೈತರಿಗೆ ದೊಡ್ಡ ಹೊರೆ ಆಗಿದೆ. ಭಾಲ್ಕಿ ತಾಲ್ಲೂಕಿನ ಭಾಲ್ಕೇಶ್ವರ ಮಂದಿರದ ಪಕ್ಕದಲ್ಲಿ ಕೃಷಿ ಇಲಾಖೆಯ ಸರ್ಕಾರಿ ಭೂಮಿ ಮತ್ತು ಮೂಲಸೌಕರ್ಯಗಳು ಇರುವುದರಿಂದ, ಅಲ್ಲಿಯೇ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಬಹುದೆಂದು ರೈತರು ತಿಳಿಸಿದರು.

## ಬೀದಿನಾಯಿಗಳ ಹಾವಳಿಗೆ ಕ್ರಮ

• ಉದಯವಾಹಿನಿ, ಚಡಚಣ

ಪಟ್ಟಣದಲ್ಲಿ ಬೀದಿ ನಾಯಿಗಳ ಹಾವಳಿಯಿಂದ ಹೆಚ್ಚಾಗಿದೆ. ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ ಮತ್ತು ಚಡಚಣ ಪಟ್ಟಣದ ಎಲ್ಲಾ ವಾರ್ಡ್‌ಗಳಲ್ಲಿ ಬೀದಿ ನಾಯಿಗಳ ಹಾವಳಿ ತಪ್ಪಿಸುವುದಕೋಸ್ಕರ ಅವುಗಳನ್ನು ಹಿಡಿದು ಹುಚ್ಚುನಾಯಿ ರೋಗ ಪ್ರತಿಬಂದಕ ಲಸಿಕೆ ಮತ್ತು ಹೆಣ್ಣು ನಾಯಿಗಳಿಗೆ ಸಂತಾನ ಹರಣ ಔಷಧಿಯನ್ನು ಚುಚ್ಚುಮದ್ದನ್ನು ಹಾಕುವುದರ ಮೂಲಕ ಸರ್ಕಾರದ ನಿಯಮವನ್ನು ಪಾಲಿಸಲಾಗುತ್ತದೆ.

ಅದಲ್ಲದೆ ಸಾಕು ನಾಯಿಗಳಿಗೂ ಕೂಡ ಲಸಿಕೆಗಳನ್ನ ಹಾಕುತ್ತಲಿದ್ದು ಸಾಕುನಾಯಿ ಹೊಂದಿದ ಮಾಲೀಕರು ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದರೆ ಅಲ್ಲಿ ಕೂಡ ಲಸಿಕೆಯನ್ನು ಹಾಕಲಾಗುವುದು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿಯ ಸಿಬ್ಬಂದಿಯವರು ಪಾಲ್ಗೊಂಡಿದ್ದರು ಡಾ.ಪ್ರಮೋದ್ ಹೋರ್ತಿ ಮತ್ತು ಸಿಬ್ಬಂದಿ, ಪಶುಪಾಲನೆ ಇಲಾಖೆ ಸಹಾಯಕ ನಿರ್ದೇಶಕ ಡಾ.. ಮಲ್ಲಿಕಾರ್ಜುನ ಗಂಗನಹಳ್ಳಿ ಚಡಚಣ ಇವರ ಕಾರ್ಯಕ್ರಮ ಉಪಸ್ಥಿತಿಯಲ್ಲಿ ನಡೆಯಿತು.

## ಅನರ್ಹ ಪಡಿತರ ಚೀಟಿ: ಸರ್ವೆ ಮಾಡಿ ರದ್ದು ಮಾಡಿರಿ: ಭರತ್ ಮುಂಡೋಡಿ

• ಉದಯವಾಹಿನಿ, ಮಂಗಳೂರು

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪಲು ಸಂಬಂಧಪಟ್ಟ ಅಧಿಕಾರಿಗಳು ಸಮಗ್ರವಾಗಿ ಕಾರ್ಯನಿರ್ವಹಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಭರತ್ ಮುಂಡೋಡಿ ಹೇಳಿದರು. ಅವರು ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅರ್ಹರಲ್ಲದ ಫಲಾನುಭವಿಗಳು ಬಿಪಿಎಲ್ ಕಾರ್ಡ್ ಪಡೆದು ಅನ್ನಭಾಗ್ಯ ಯೋಜನೆಯಡಿ ಉಚಿತವಾಗಿ ಅಕ್ಕಿ ಪಡೆಯುತ್ತಿದ್ದಾರೆ. ಇದರಿಂದ ಅರ್ಹ ಫಲಾನುಭವಿಗಳಿಗೆ ಅನ್ಯಾಯವಾಗುತ್ತಿದೆ.

ಅರ್ಹರಲ್ಲದ ಹಾಗೂ ಆದಾಯ ಮೀರಿದವರ ಕಾರ್ಡಗಳನ್ನು ರದ್ದುಗೊಳಿಸುವಂತೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಅನರ್ಹ ಫಲಾನುಭವಿಗಳು ಸರ್ಕಾರದ ಸವಲತ್ತುಗಳನ್ನು ಪಡೆಯುತ್ತಿರುವುದರಿಂದ ಈ ಬಗ್ಗೆ ಗಂಭೀರವಾಗಿ ಪರಿಗಣಿಸಿ ಅವಿಭಕ್ತ ಕುಟುಂಬಗಳ ಮನೆಗಳಿಗೆ ನೇರವಾಗಿ ಭೇಟಿ ನೀಡಿ ಸರ್ವೆ ಮಾಡಿ ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಲು ಇಲಾಖೆ ಗಂಭೀರವಾಗಿ ಪರಿಗಣಿಸಬೇಕು ಎಂದು ಅವರು ಸೂಚಿಸಿದರು.




ಉದಯವಾಹಿನಿ ಚಿತ್ರ

**ಸಂಬಂಧಪಟ್ಟ ಅಧಿಕಾರಿಗಳು ಸಮಗ್ರವಾಗಿ ಕಾರ್ಯ ನಿರ್ವಹಿಸಬೇಕು**

## ವಸತಿ ನಿಲಯ ಕಟ್ಟಡ ಕಾಮಗಾರಿಗೆ ಸವದಿ ಚಾಲನೆ

• ಉದಯವಾಹಿನಿ, ಅಥಣಿ

ಹಿಂದುಳಿದ ವರ್ಗದ ಮಕ್ಕಳು ಶೈಕ್ಷಣಿಕವಾಗಿ ವಂಚಿತರಾಗದೆ, ಉನ್ನತಿ ಹೊಂದಲು ಪೂರಕ ವಾತವರಣ ನೀಡುವುದು ನಮ್ಮ ಕರ್ತವ್ಯವಾಗಿದೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು. ತಾಲ್ಲೂಕಿನ ಯಂಕಚ್ಚಿ ಗ್ರಾಮದಲ್ಲಿ ಪರಿಶಿಷ್ಟ ಪಂಗಡದ ಅಭಿವೃದ್ಧಿ ಯೋಜನೆಯಡಿ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಯ ವಿದ್ಯಾರ್ಥಿನಿಯರಿಗೆ ಕೆ.ಆರ್.ಐ.ಡಿ.ಎಲ್‌ನಿಂದ ರೂ.2 ಕೋಟಿ ಅನುದಾನದಡಿ ಚಾಲನೆ ನೀಡಿ ಮಾತನಾಡಿದರು. ಶಾಲಾ ಕಟ್ಟಡಗಳು ಗುಣಮಟ್ಟದಾಗಿರಬೇಕು ಹಾಗೂ ಮಕ್ಕಳಿಗೆ ಕಲಿಕಾ ಸ್ಥಳದಲ್ಲಿ ನೈಸರ್ಗಿಕ ವಾತಾವರಣವಿರಬೇಕು. ಸಾಧ್ಯವಾದಷ್ಟು ಗಿಡಗಳನ್ನು ಬೆಳೆಸಿ ಎಂದರು. ತೆಲಸಂಗ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಅಮೋಘ ಖೋಬ್ರಿ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಪರಶುರಾಮ ಪತ್ತಾರ, ಓಗೆಪ್ಪಾ ಅರಟಾಳ, ಅನೇಕರು ಇದ್ದರು.


ಉದಯವಾಹಿನಿ ಚಿತ್ರ

## ಧರ್ಮಸ್ಥಳದ ಧರ್ಮಾಧಿಕಾರಿ ಜನ್ಮ ದಿನ: ಹಣ್ಣು ಹಂಪಲು ವಿತರಣೆ

• ಉದಯವಾಹಿನಿ, ಬಸವನಬಾಗೇವಾಡಿ

ತಾಲ್ಲೂಕಿನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ವತಿಯಿಂದ ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ। ಡಿ. ವೀರೇಂದ್ರ ಹೆಗ್ಗಡೆಯವರ ಹುಟ್ಟುಹಬ್ಬದ ಪ್ರಯುಕ್ತ ಮಂಗಳವಾರ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾದ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಆರೋಗ್ಯದ ಬಗ್ಗೆ ವಿಚಾರಿಸಲಾಯಿತು. ಈ ಸಂದರ್ಭದಲ್ಲಿ ಜಗದೇವಿ ಗುಂಡಳ್ಳಿ, ಪ್ರಸನ್ನ ಆರ್, ಡಾ. ಬಸವರಾಜ ಮುತ್ತತ್ತಿ, ಸಾವಿತ್ರಿ ಕಲ್ಯಾಣಶೆಟ್ಟಿ ಪರಶುರಾಮ ಜಮಖಂಡಿ, ಡಾ. ಅಮರೇಶ ಮಿಣಜಗಿ, ರಾಜು ಬೆಟಿಗೇರಿ, ಮಂಜುನಾಥ್ ಶಂಕ್ರಯ್ಯ, ರಮೇಶ್, ಸಂಜೀವ್, ಶ್ರೀಕಾಂತ್,ರಮೇಶ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

## ನೆಮ್ಮದಿಯ ಬದುಕಿಗೆ ಪೈಗಂಬರರ ಸಂದೇಶ ಸಹಕಾರಿ: ಪಾಟೀಲ

• ಉದಯವಾಹಿನಿ, ಕೊಲ್ಹಾರ

ಮನುಕುಲದ ಉದ್ಧಾರಕ್ಕಾಗಿ ಪ್ರವಾದಿ ಮಹಮ್ಮದ್ ಪೈಗಂಬರರು ಸಾರಿದ ವಿಶ್ವ ಶಾಂತಿಯ ಸಂದೇಶ ಸಾರ್ವಕಾಲಿಕವಾಗಿದೆ. ಹೀಗಾಗಿ ನೆಮ್ಮದಿಯ ಬದುಕಿಗೆ ಸದಾ ಸಹಕಾರಿಯಾಗಿದ್ದು, ಎಲ್ಲರೂ ಪ್ರವಾದಿಗಳು ತೋರಿದ ಮಾರ್ಗದಲ್ಲಿ ನಡೆಯುವ ಅಗತ್ಯವಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಕರೆ ನೀಡಿದರು. ತಾಲ್ಲೂಕಿನ ಕೂಡಗಿ ಗ್ರಾಮದಲ್ಲಿ ಅಂಜುಮನ್ ಸಮಿತಿಯಿಂದ ಹಮ್ಮಿಕೊಂಡಿದ್ದ ಪ್ರವಾದಿ ಮಹಮ್ಮದ್ ಪೈಗಂಬರರ ಈದ್ ಮಿಲಾದ್ ಉನ್ನಬಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಸ್ಥಳೀಯ ಶಹಜಾದೆ ಮಸ್ತಾನ್ ದರ್ಗಾದಲ್ಲಿ ಪವಿತ್ರ ಗಲ್ಲೀಫ್ ಸಲ್ಲಿಸಿ ಮಾತನಾಡಿದ ಅವರು, ಜಗತ್ತಿನ ಎಲ್ಲಾ ಜನರು ಅನುಭವಿಸುತ್ತಿರುವ ಸಮಸ್ಯೆ, ಸಂಕಷ್ಟಗಳಿಗೆ ಪ್ರವಾದಿ ಮಹಮ್ಮದ್ ಪೈಗಂಬರರು ಸೂಕ್ತ ಪರಿಹಾರ ಸೂತ್ರಗಳನ್ನು ನೀಡಿದ್ದಾರೆ ಎಂದರು.


ಉದಯವಾಹಿನಿ ಚಿತ್ರ

# ಸರ್ಕಾರ ವಿರುದ್ಧ ರೈತರ ಗುಡುಗು: ಖರೀದಿ ಕೇಂದ್ರ ತೆರೆಯಲು ಒತ್ತಾಯ

### ವಿವಿಧ ಉತ್ಪನ್ನಗಳ ತಯಾರಿಸಲು ಮೆಕ್ಕೆಜೋಳ ಬಳಸುತ್ತಿರುವ ಕಂಪನಿಗಳೇ ಬೆಲೆ ನಿಗದಿಯಲ್ಲಿ ಆಟವಾಡುತ್ತಿವೆ

• ಉದಯವಾಹಿನಿ, ಹಾವೇರಿ

ಹಾವೇರಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಬೆಳೆಯುವ ಮೆಕ್ಕೆಜೋಳವನ್ನು ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆಯಬೇಕು. ಪ್ರತಿ ಕ್ವಿಂಟಲ್‌ಗೆ ಕನಿಷ್ಠ 3,000 ನೀಡಬೇಕು ಎಂದು ಒತ್ತಾಯಿಸಿ ಅನಿರ್ದಿಷ್ಟಾವಧಿ ಧರಣಿ ಆರಂಭಿಸಿರುವ ರೈತರು, ಬೇಡಿಕೆ ಈಡೇರಿಸುವಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಗುಡುಗಿದರು. ಪ್ರಸಕ್ತ ಸಾಲಿನಲ್ಲಿ ಮೆಕ್ಕೆಜೋಳದ ಬೆಲೆ ಹೆಚ್ಚಿನ ಪ್ರಮಾಣದಲ್ಲಿ ಕುಸಿದಿದ್ದು, ಮೆಕ್ಕೆಜೋಳ ಬೆಳೆದಿದ್ದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಪಶುಗಳ ಆಹಾರ, ಎಥನಾಲ್ ಹಾಗೂ ವಿವಿಧ ಉತ್ಪನ್ನಗಳ ತಯಾರಿಸಲು ಮೆಕ್ಕೆಜೋಳ ಬಳಸುತ್ತಿರುವ ಕಂಪನಿಗಳೇ ಬೆಲೆ ನಿಗದಿಯಲ್ಲಿ ಆಟವಾಡುತ್ತಿವೆ. ಇದರಿಂದ ಮೆಕ್ಕೆಜೋಳ ಬೆಳೆದವರಿಗೆ ಅನ್ಯಾಯವಾಗುತ್ತಿದೆ' ಎಂದು ರೈತರು ಆರೋಪಿಸುತ್ತಿದ್ದಾರೆ.

ರೈತರಿಗೆ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಲು ಹಾಗೂ ಮೆಕ್ಕೆಜೋಳಕ್ಕೆ ಪ್ರತಿ ಕ್ವಿಂಟಲ್‌ಗೆ ರೂ.3,000 ದರ ನಿಗದಿಪಡಿಸುವಂತೆ ಸರ್ಕಾರವನ್ನು ಒತ್ತಾಯಿಸಲು ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ'ಯ ಜಿಲ್ಲಾ ಘಟಕದಿಂದ ಅನಿರ್ದಿಷ್ಟಾವಧಿ ಧರಣಿಗೆ ಕರೆ ನೀಡಲಾಗಿದೆ.

ಸಿದ್ದಪ್ಪ ವೃತ್ತದಲ್ಲಿ ಕೆಲ ನಿಮಿಷ ಬಹಿರಂಗ ಸಭೆ ನಡೆಸಿದ ರೈತರು, ಸರ್ಕಾರಗಳ ವಿರುದ್ಧ ತಮ್ಮ ಆಕ್ರೋಶ ಹೊರಹಾಕಿದರು. ಹಸಿರು ಶಾಲುಗಳನ್ನು ಬೀಸಿದ ರೈತರು, ಸರ್ಕಾರಗಳ ವಿರುದ್ಧ ಘೋಷಣೆ ಕೂಗಿ ಎಚ್ಚರಿಕೆ ರವಾನಿಸಿದರು. ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿ ಎದುರು ಸಾಗಿದ ರೈತರು, ಅಲ್ಲಿಯೇ ಬಹಿರಂಗ ಸಭೆ ಮುಂದುವರಿಸಿದರು. ಮೆಕ್ಕೆಜೋಳ ಖರೀದಿಸಲು ಎಫ್‌ಆರ್‌ಪಿ ಪ್ರಕಾರ ಕೇಂದ್ರ ಸರ್ಕಾರದಿಂದ ರೂ.2,400 ನೀಡಬೇಕು. ರಾಜ್ಯ ಸರ್ಕಾರವು ತನ್ನ ಪಾಲಿನಿಂದ ರೂ. 600 ನೀಡಬೇಕು. ಮೆಕ್ಕೆಜೋಳ ಖರೀದಿಸಲು ಕೇಂದ್ರಗಳನ್ನು ತ್ವರಿತವಾಗಿ ಪ್ರಾರಂಭಿಸಬೇಕು' ಎಂದು ರೈತರು ಒತ್ತಾಯಿಸಿದರು. 'ಅತಿವೃಷ್ಟಿ ಮಳೆಯಿಂದ ಬೆಳೆ ಕಳೆದುಕೊಂಡ ರೈತರಿಗೆ ಪ್ರತಿ ಎಕರೆಗೆ ರೂ. 25,000 ಪರಿಹಾರ ನೀಡಬೇಕು. ವರದಾ ಹಾಗೂ ಬೇಡ್ತಿ ನದಿ ಜೋಡಣೆ ಮಾಡಬೇಕು. ಹೆಸ್ಕಾಂ ಕಂಪನಿಯವರು, ವಿದ್ಯುತ್ ಕಂಬ ಹಾಗೂ ತಂತಿಯನ್ನು ರೈತರೇ ಖರೀದಿಸುವಂತೆ ನಿಯಮ ಮಾಡಿದೆ. ಈ ನಿಯಮ ರದ್ದುಪಡಿಸಬೇಕು. ಹೆಸ್ಕಾಂ ಕಂಪನಿಯವರು ವಿಧಿಸುತ್ತಿರುವ ಶುಲ್ಕ ದುಬಾರಿಯಾಗಿದ್ದು, ಅದನ್ನು ಕೈ ಬಿಡಬೇಕು. ಬೆಳೆ ವಿಮೆಯಲ್ಲಾದ ತಾರತಮ್ಯ ಸರಿಪಡಿಸಬೇಕು' ಎಂದು ರೈತರು ಆಗ್ರಹಿಸಿದರು.

**ಸ್ವಾಮೀಜಿಗಳು ಭಾಗಿ:** ರೈತರ ಹೋರಾಟದಲ್ಲಿ ಪಾಲ್ಗೊಂಡಿದ್ದ ಜಿಲ್ಲೆಯ ವಿವಿಧ ಮಠಗಳ ಸ್ವಾಮೀಜಿಗಳು, ಜಗತ್ತಿಗೆ ಅನ್ನ ಹಾಕುತ್ತಿರುವ ರೈತರ ಬೇಡಿಕೆಗಳನ್ನು ಸರ್ಕಾರಗಳು ತ್ವರಿತವಾಗಿ ಈಡೇರಿಸಬೇಕು ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

**ಬೃಹತ್ ಮೆರವಣಿಗೆ**

ಧರಣಿಯ ಭಾಗವಾಗಿ ಹಾವೇರಿಯಲ್ಲಿ ರೈತರು ಬೃಹತ್ ಮೆರವಣಿಗೆ ನಡೆಸಿದರು. ಕಾಗಿನೆಲೆ ರಸ್ತೆಯಲ್ಲಿರುವ ಮುರುಘಾಮಠದಿಂದ ಆರಂಭವಾದ ಮೆರವಣಿಗೆ, ಹೊಸಮನಿ ಸಿದ್ದಪ್ಪ ವೃತ್ತದ ಮೂಲಕ ಜಿಲ್ಲಾಧಿಕಾರಿ ಕಚೇರಿಯವರೆಗೂ ಸಾಗಿತು. ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

**ಬೇಡಿಕೆ ಈಡೇರುವವರೆಗೂ ಧರಣಿ**

ಹಾವೇರಿ ಜಿಲ್ಲೆ ಮಾತ್ರವಲ್ಲದೇ ದೇಶದಾದ್ಯಂತ ರೈತರು ಮೆಕ್ಕೆಜೋಳ ಬೆಳೆಯುತ್ತಿದ್ದಾರೆ. ಎಲ್ಲಾ ರೈತರ ಪರವಾಗಿ ಈ ಧರಣಿ ಆರಂಭಿಸಲಾಗಿದೆ. ಬೇಡಿಕೆ ಈಡೇರಿಸುವ ಬಗ್ಗೆ ಸರ್ಕಾರ ಘೋಷಣೆ ಮಾಡುವವರೆಗೂ ನಮ್ಮ ಧರಣಿ ಮುಂದುವರಿಯಲಿದೆ ಎಂದು 'ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ'ಯ ಜಿಲ್ಲಾ ಘಟಕದ ಅಧ್ಯಕ್ಷ ರಾಮಣ್ಣ ಕೆಂಚಳ್ಳೇರ ಹೇಳಿದರು. ಪ್ರತಿಭಟನೆಯಲ್ಲಿ ಮಾತನಾಡಿದ ಅವರು 'ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದಾಗಿ ಬೆಳೆ ಹಾನಿ ಅನುಭವಿಸುತ್ತಿರುವ ರೈತರು ಆರ್ಥಿಕವಾಗಿ ಕಂಗಾಲಾಗಿದ್ದಾರೆ. ಮೆಕ್ಕೆಜೋಳ ಬೆಳೆಯೂ ಹಾಳಾಗಿದ್ದು ಇಳುವರಿಯೂ ಕಡಿಮೆಯಾಗಿದೆ. ಅಲ್ಪಸ್ವಲ್ಪ ಮೆಕ್ಕೆಜೋಳಕ್ಕೆ ಸರಿಯಾದ ಬೆಲೆಯಿಲ್ಲ. ಇದರಿಂದ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ' ಎಂದು ತಿಳಿಸಿದರು. ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಬಳ್ಳಾರಿ 'ಮೆಕ್ಕೆಜೋಳ ಖರೀದಿಗೆ ಬೆಂಬಲ ಬೆಲೆ ಕೇಂದ್ರ ಆರಂಭಿಸುವ ಬಗ್ಗೆ ಹೇಳುತ್ತಿರುವ ಸರ್ಕಾರಗಳ ಭರವಸೆ ಪ್ರಕಟಣೆಗೆ ಮಾತ್ರ ಸೀಮಿತಲಾಗಿದೆ. ಹಾವೇರಿಯಲ್ಲಿ ರೈತರು ದೊಡ್ಡ ಮಟ್ಟದ ಹೋರಾಟ ಆರಂಭಿಸಿದ್ದು ಸೋಮವಾರ ರಾತ್ರಿಯವರೆಗೂ ಸರ್ಕಾರದಿಂದ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ ಮಂಗಳವಾರವೂ ನಮ್ಮ ಧರಣಿ ಮುಂದುವರಿಯಲಿದೆ ಎಂದರು.

# ಸ್ವಯಂಭು ರಿಲೀಸ್ ಡೇಟ್ ಫಿಕ್ಸ್

ತೆಲುಗು ಚಿತ್ರರಂಗದ ಉದಯೋನ್ಮುಖ ನಟ ನಿಖಿಲ್ ಸಿದ್ದಾರ್ಥ್ ನಟಿಸುತ್ತಿರುವ ಬಹುನಿರೀಕ್ಷಿತ ಸಿನಿಮಾ ಸ್ವಯಂಭು. ಟೈಟಲ್ ಹಾಗೂ ಮೇಕಿಂಗ್ ಮೂಲಕ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಮಹಾಶಿವರಾತ್ರಿ ಅಂದರೆ 2026 ಫೆಬ್ರವರಿ 13ಕ್ಕೆ ವಿಶ್ವದಾದ್ಯಂತ ಸ್ವಯಂಭು ಚಿತ್ರಮಂದಿರಗಳಿಗೆ ಎಂಟ್ರಿ ಕೊಡಲಿದೆ.



ಸ್ಪೆಷಲ್ ವಿಡಿಯೋ ಮೂಲಕ ಚಿತ್ರತಂಡ ಶೂಟಿಂಗ್ ಮುಗಿಸಿರುವ ಬಗ್ಗೆ ಮಾಹಿತಿ ಹಂಚಿಕೊಂಡಿದೆ. ಬರೋಬ್ಬರಿ ಎರಡು ವರ್ಷದ ಜರ್ನಿ ಇದಾಗಿದ್ದು, 170 ದಿನಗಳ ಕಾಲ ಶೂಟಿಂಗ್ ನಡೆಸಲಾಗಿದೆ. ಅಂದಹಾಗೇ ಇದು ನಿಖಿಲ್ ಸಿದ್ದಾರ್ಥ್ ಅವರ 20ನೇ ಚಿತ್ರ. ಪಿಕ್ಸೆಲ್ ಸ್ಟುಡಿಯೋ ಮೂಲಕ ಭುವನ್ ಹಾಗೂ ಶ್ರೀಕರ್ ಚಿತ್ರ ನಿರ್ಮಾಣ ಮಾಡುತ್ತಿದ್ದು, ಟ್ಯಾಗೋರೆ ಮಧು ಪ್ರಸ್ತುತಪಡಿಸುತ್ತಿದ್ದಾರೆ. ಸ್ವಯಂಭು ಎಂದರೆ ಸ್ವಯಂ ಹುಟ್ಟು ಎಂದರ್ಥ. ಸಹಸ್ರಮಾನಗಳ ಹಿಂದಿನ ಕಥೆ ಒಳಗೊಂಡಿರುವ ಸ್ವಯಂಭು ಸಿನಿಮಾ ನಿಖಿಲ್ ಸಿದ್ದಾರ್ಥ್ ವೃತ್ತಿಜೀವನದ ಬಿಗ್ ಬಜೆಟ್ ಚಿತ್ರವಾಗಿದೆ.

ಕೆಕೆ ಸೆಂಥಿಲ್ ಕುಮಾರ್ ಛಾಯಾಗ್ರಹಣ, ರವಿ ಬಸ್ರೂರ್ ಸಂಗೀತ, ವಿಜಯ್ ಕಾಮಿಸೆಟ್ಟಿ ಚಿತ್ರಕ್ಕೆ ಸಂಭಾಷಣೆಯನ್ನು ನೀಡಿದ್ದಾರೆ. ತಮ್ಮಿರಾಜು ಸಂಕಲನದ ಜವಾಬ್ದಾರಿ ಹೊತ್ತುಕೊಂಡಿದ್ದಾರೆ.

ಭರತ್ ಕೃಷ್ಣಮಾಚಾರಿ ಆಕ್ಷನ್ ಕಟ್ ಹೇಳಿರುವ ಸ್ವಯಂಭು ಸಿನಿಮಾದಲ್ಲಿ ಸಂಯುಕ್ತ ನಾಯಕಿಯಾಗಿ ನಟಿಸುತ್ತಿದ್ದು, ನಭಾ ನಟೇಶ್ ವಿಶೇಷ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.



# ಪ್ರಭಾಸ್ ಕಲರ್‌ಫುಲ್ ಹಾಡಿಗೆ ಫ್ಯಾನ್ಸ್ ಫಿದಾ



ಟಾಲಿವುಡ್ ರೆಬಲ್ ಸ್ಟಾರ್ ಪ್ರಭಾಸ್ ನಾಯಕನಾಗಿ ನಟಿಸಿರುವ 'ದಿ ರಾಜಾಸಾಬ್' ಸಿನಿಮಾ ಟ್ರೇಲರ್ ಮೂಲಕ ಕೌತುಕ ಸೃಷ್ಟಿಸಿದೆ. ಈ ಸಿನಿಮಾ ಮೇಲೆ ಬೆಟ್ಟದಷ್ಟು ನಿರೀಕ್ಷೆಗಳಿವೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ಈ ಸಿನಿಮಾ ತೆರೆಗೆ ಬರುವುದರಿಂದ ಹಿಂದಿ ಬೆಲ್ಟ್‌ನಲ್ಲಿಯೂ ಈ ಚಿತ್ರಕ್ಕೆ ದೊಡ್ಡ ಡಿಮ್ಯಾಂಡ್ ಸೃಷ್ಟಿಯಾಗಿದೆ. ಇದೀಗ ಸಿನಿಮಾದ ಪ್ರಚಾರ ಕೆಲಸದಲ್ಲಿಯೂ ಚಿತ್ರತಂಡ ಬ್ಯೂಸಿಯಾಗಿದೆ. ಅದರಂತೆ ಇದೀಗ ಇದೇ ಚಿತ್ರದ 'ರೆಬೆಲ್ ಸಾಬ್' ಹಾಡನ್ನು ಬಿಡುಗಡೆ ಮಾಡಿದೆ ಚಿತ್ರತಂಡ.

ಪಕ್ಕಾ ಟಪ್ಪಾಂಗುಚ್ಚಿ ಶೈಲಿಯಲ್ಲಿ ಮೂಡಿಬಂದಿರುವ 'ರೆಬಲ್ ಸಾಬ್' ಹಾಡಿನಲ್ಲಿ ನಟ ಪ್ರಭಾಸ್ ಸಖತ್ ಸ್ಟೈಲಿಶ್ ಆಗಿ ಕಂಡಿದ್ದಾರೆ.

ಕಲರ್ ಕಲರ್ ಶರ್ಟ್ ಧರಿಸಿ, ಹಾಡಿಗೆ ಮಸ್ತ್ ಮಸ್ತ್ ಡಾನ್ಸ್ ಮಾಡಿದ್ದಾರೆ. ಈ ಮೂಲಕ ಸಿನಿಮಾ ಮೇಲಿನ ನಿರೀಕ್ಷೆ ಮತ್ತಷ್ಟು ಹೆಚ್ಚಿದ್ದು, ಅಭಿಮಾನಿ ವಲಯದಲ್ಲಿ ಸಂಭ್ರಮ ಇಮ್ಮಡಿಯಾಗಿದೆ.

ಅಂದಹಾಗೆ, ''ದಿ ರಾಜಾಸಾಬ್'' ಸಿನಿಮಾಕ್ಕೆ ಸಂಗೀತ ನೀಡಿರುವುದು ಖ್ಯಾತ ಸಂಗೀತ ಸಂಯೋಜಕ ಥಮನ್ ಎಸ್. ಆದರೆ, ಈವರೆಗೂ ಇದೇ ಚಿತ್ರದ ಒಂದೇ ಒಂದು ಹಾಡಿನ ಝುಲಕ್ ಹೊರಬಿದ್ದಿರಲಿಲ್ಲ. ಇದೀಗ ಅವರ ಥಮನ್ ಮ್ಯೂಸಿಕ್ ಒದಗಿಸಿರೋ ''ರೆಬೆಲ್ ಸಾಬ್'' ಹಾಡು ಬಿಡುಗಡೆ ಆಗಿದೆ. ಟಿ ಸಿರೀಸ್ ಯೂಟ್ಯೂಬ್ ಚಾನೆಲ್‌ನಲ್ಲಿ ''ರೆಬೆಲ್ ಸಾಬ್'' ಹಾಡು ಹಬ್ಬ ಮಾಡುತ್ತಿದೆ.

ಮಾರುತಿ ನಿರ್ದೇಶನದಲ್ಲಿ ಮೂಡಿಬಂದಿರುವ ಹಾರರ್ ಕಾಮಿಡಿ ಶೈಲಿಯ ''ದಿ ರಾಜಾ ಸಾಬ್'' ಸಿನಿಮಾವನ್ನು ಪೀಪಲ್ ಮೀಡಿಯಾ ಫ್ಯಾಕ್ಟರಿ ಸಂಸ್ಥೆ ನಿರ್ಮಾಣ ಮಾಡಿದ್ದು, ಟಿಜಿ ವಿಶ್ವಪ್ರಸಾದ್ ಮತ್ತು ಕೃತಿ ಪ್ರಸಾದ್ ಈ ಸಿನಿಮಾದ ನಿರ್ಮಾಪಕರು. ಪ್ರಭಾಸ್ ನಾಯಕನಾದರೆ, ಸಂಜತ್ ದತ್ ಖಳನಾಯಕನಾಗಿದ್ದಾರೆ. ಮಾಳವಿಕಾ ಮೋಹನನ್, ನಿಧಿ ಅಗರ್ವಾಲ್, ರಿದ್ಧಿ ಕುಮಾರ್ ಮತ್ತು ಝರೀನಾ ವಹಾಬ್ ನಟಿಯರು ಚಿತ್ರದಲ್ಲಿದ್ದಾರೆ. ಕಥೆ ಬರೆದು ನಿರ್ದೇಶನದ ಜವಾಬ್ದಾರಿಯನ್ನು ಮಾರುತಿ ಹೊತ್ತರೆ, ಥಮನ್ ಸವರ ಸಂಗೀತ, ಕಾರ್ತಿಕ್ ಪಳನಿ ಅವರ ಛಾಯಾಗ್ರಹಣ, ಕೊಟಗಿರಿ ವೆಂಕಟೇಶ್ವರ್ ರಾವ್ ಅವರ ಸಂಕಲನ ಚಿತ್ರಕ್ಕಿದೆ.

# ವಿಜಯ್ ಸೇತುಪತಿ ಹೊಸ ಸಿನಿಮಾದ ಶೂಟಿಂಗ್ ಮುಕ್ತಾಯ



ನಿರ್ದೇಶಕ ಪುರಿ ಜಗನ್ನಾಥ್ ಹಾಗೂ ವಿಜಯ್ ಸೇತುಪತಿ ಕಾಂಬೋದ ಹೊಸ ಸಿನಿಮಾದ ಶೂಟಿಂಗ್ ಮುಕ್ತಾಯಗೊಂಡಿದೆ. ಸ್ಪೆಷಲ್ ವಿಡಿಯೋ ಮೂಲಕ ಚಿತ್ರತಂಡ ಚಿತ್ರೀಕರಣ ಮುಗಿಸಿರುವ ಬಗ್ಗೆ ಮಾಹಿತಿ ನೀಡಿದೆ. ಮಾಸ್ ಆಕ್ಷನ್ ಎಂಟರ್‌ಟೈನರ್ ಕಥಾಹಂದರ ಹೊಂದಿರುವ ಸಿನಿಮಾದಲ್ಲಿ ದೊಡ್ಡ ತಾರಾಬಳಗವಿದೆ.

ಸಂಯುಕ್ತ ನಾಯಕಿಯಾಗಿ ನಟಿಸುತ್ತಿದ್ದು, ದುನಿಯಾ ವಿಜಯ್ ಕುಮಾರ್, ಟಬು ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಬ್ರಹ್ಮನಂದ್ ಹಾಗೂ ವಿಟಿವಿ ಗಣೇಶ್ ಕೂಡ ತಾರಾಬಳಗದಲ್ಲಿದ್ದಾರೆ. ಪುರಿ ಜಗನ್ನಾಥ್ ಅವರು ತಮ್ಮದೇ ಪುರಿ ಕನೆಕ್ಟ್ಸ್ ಬ್ಯಾನರ್ ಅಡಿಯಲ್ಲಿ ಈ ಸಿನಿಮಾ ನಿರ್ಮಿಸುತ್ತಿದ್ದಾರೆ. ಜೆಬಿ ನಾರಾಯಣ್ ರಾವ್ ಕೊಂಡ್ರೊಲ್ಲಾ ಅವರ ಜೆಬಿ ಮೋಷನ್ ಪಿಕ್ಚರ್ಸ್ ಬ್ಯಾನರ್ ಸಹಯೋಗದಲ್ಲಿ ಚಾರ್ಮಿ ಕೌರ್ ಈ ಚಿತ್ರವನ್ನು ಪ್ರಸ್ತುತಪಡಿಸುತ್ತಿದ್ದಾರೆ. ಅರ್ಜುನ್ ರೆಡ್ಡಿ, ಅನಿಮಲ್ ಚಿತ್ರಗಳಿಗೆ ಸಂಗೀತ ಒದಗಿಸಿರುವ ಹರ್ಷವರ್ಧನ್ ರಾಮೇಶ್ವರ್ ಈ ಚಿತ್ರಕ್ಕೂ ಮ್ಯೂಸಿಕ್ ನೀಡಿದ್ದಾರೆ. ಸಿನಿಮಾಗೆ ಶೀರ್ಷಿಕೆ ಏನು ಎಂಬುದು ಇನ್ನೂ ಬಹಿರಂಗ ಆಗಿಲ್ಲ. ಅದನ್ನು ತಿಳಿಯಲು ಕೂಡ ಅಭಿಮಾನಿಗಳಿಗೆ ಕುತೂಹಲ ಇದೆ. ಸದ್ಯ ಶೂಟಿಂಗ್ ಮುಗಿಸಿರುವ ಚಿತ್ರತಂಡ ಪ್ರಚಾರ ಕಾರ್ಯ ನಡೆಸಲು ಯೋಜನೆ ಹಾಕಿಕೊಂಡಿದೆ. ಶೀಘ್ರದಲ್ಲೇ ಟೈಟಲ್ ಹಾಗೂ ಫಸ್ಟ್ ಲುಕ್ ಬಿಡುಗಡೆ ಮಾಡಲಿದೆ.

# ಕರಾವಳಿ ಚಿತ್ರತಂಡ ಸೇರಿಕೊಂಡ ಸುಂದರಿ

ಪ್ರಜ್ವಲ್ ದೇವರಾಜ್ ನಟಿಸಿರುವ 'ಕರಾವಳಿ' ಚಿತ್ರತಂಡ ಈಗಾಗಲೇ ಅದ್ಭುತವಾದ ಪಾತ್ರವರ್ಗವನ್ನು ಒಳಗೊಂಡಿದೆ. ರಾಜ್ ಬಿ ಶೆಟ್ಟಿ ಇತ್ತೀಚೆಗಷ್ಟೆ ಚಿತ್ರತಂಡ ಸೇರಿದ್ದರು. ಇದೀಗ ಅವರಿಗೆ ಜೋಡಿಯಾಗಿ ಸುಂದರಿ ಸುಷ್ಮಿತಾ ಭಟ್ ಅವರು ಸೇರಿಕೊಂಡಿದ್ದಾರೆ. ಇಲ್ಲಿದೆ ನೋಡಿ ಸಿನಿಮಾ ಬಗ್ಗೆ ಮಾಹಿತಿ...

ಪ್ರಜ್ವಲ್ ದೇವರಾಜ್ ನಟಿಸಿರುವ 'ಕರಾವಳಿ' ಸಿನಿಮಾ, ಅದ್ಭುತ ಪೋಸ್ಟರ್‌ಗಳು, ಪಾತ್ರವರ್ಗ ಮತ್ತು ಟೀಸರ್‌ನಿಂದ ಈಗಾಗಲೇ ಸಖತ್ ಕುತೂಹಲ ಮೂಡಿಸಿದೆ. ದೀರ್ಘ ಸಮಯದಿಂದ ಚಿತ್ರೀಕರಣ ಆಗುತ್ತಲೇ ಇರುವ ಈ ಸಿನಿಮಾನಲ್ಲಿ ಪ್ರಜ್ವಲ್ ದೇವರಾಜ್, ರಾಜ್ ಬಿ ಶೆಟ್ಟಿ ಇನ್ನೂ ಕೆಲವು ಪ್ರತಿಭಾವಂತ ಕಲಾವಿದರು ನಟಿಸುತ್ತಿದ್ದಾರೆ. ಇದೀಗ ಈ ಪ್ರತಿಭಾವಂತರ ತಂಡಕ್ಕೆ ಮತ್ತೊಬ್ಬ ನಟಿ ಸೇರಿಕೊಂಡಿದ್ದಾರೆ. ಅವರೇ ಸುಷ್ಮಿತಾ ಭಟ್. ಇತ್ತಿಚಿಗಷ್ಟೇ 'ಕರಾವಳಿ' ಸಿನಿಮಾ ತಂಡಕ್ಕೆ ರಾಜ್ ಬಿ ಶೆಟ್ಟಿ ಸೇರಿಕೊಂಡಿದ್ದರು. ಈಗ ರಾಜ್ ಬಿ ಶೆಟ್ಟಿಯವರ ಜೋಡಿಯಾಗಿ ಕನ್ನಡದ ಭರವಸೆಯ ನಟಿ ಸುಷ್ಮಿತಾ ಭಟ್ ನಟಿಸಲಿದ್ದಾರೆ. ಸುಷ್ಮಿತಾ ಭಟ್ ಈಗಾಗಲೇ ಎರಡು ಸಿನಿಮಾದಲ್ಲಿ ನಟಿಸಿದ್ದು 'ಕರಾವಳಿ' ಅವರ ಮೂರನೇ ಸಿನಿಮಾ ಆಗಲಿದೆ.



ದುಬಾರಿ ದೀಪಿಕಾ ರೇಟ್

# ದೀಪಿಕಾ ಪಡುಕೋಣೆ ಕಲ್ಕಿಯಿಂದ ಔಟ್ ಆಗಿದ್ಯಾಕೆ

ಬಾಲಿವುಡ್ ಬ್ಯೂಟಿ ದೀಪಿಕಾ ಪಡುಕೋಣೆ ಸದ್ಯಕ್ಕೆ ಫುಲ್ ಸುದ್ದಿಯಲ್ಲಿದ್ದಾರೆ. ಅದಕ್ಕೆ ಕಾರಣ ಅವರು ದೊಡ್ಡ ದೊಡ್ಡ ಸಿನಿಮಾಗಳಿಂದ ಹೊರಬಂದಿರೋದು. ವರ್ಷದ ದೊಡ್ಡ ಪ್ರಾಜೆಕ್ಟ್ ಅಂದೇ ಕರೆಸಿಕೊಳ್ತಿರೋ ಸಂದೀಪ್ ರೆಡ್ಡಿ ವಂಗಾ ಅವರ 'ಸ್ಪಿರಿಟ್' ಹಾಗೂ ನಾಗ್ ಅಶ್ವಿನ್ ಅವರ 'ಕಲ್ಕಿ 2898' ಸೀಕ್ವೆಲ್‌ನಿಂದ ದೀಪಿಕಾ ಹಿಂದೆ ಸರಿದಿದ್ದಾರೆ. ಇದರಿಂದಾಗಿ ಅವರ ಮೇಲೆ ವೃತ್ತಿಪರತೆ ಇಲ್ಲ ಅನ್ನೋ ಆರೋಪಗಳು ಕೇಳಿಬರ್ತಿದೆ. ಇಷ್ಟೆಲ್ಲಾ ಆದ್ರೂ, ದೀಪಿಕಾ ಯಾಕೆ ಇಂಥ ನಿರ್ಧಾರ ತಗೊಂಡ್ರು, ಇದು ಅವರ ವೃತ್ತಿಜೀವನದ ಮೇಲೆ ಪರಿಣಾಮ ಬೀರುತ್ತಾ ಅನ್ನೋ ಚರ್ಚೆ ಈಗ ಜೋರಾಗಿದೆ.

ಹೈದರಾಬಾದ್‌ನಲ್ಲಿ ಶೂಟಿಂಗ್ ನಡೆಯುವಾಗ, ದೀಪಿಕಾ ಬೆಳಗ್ಗೆ 9:30 ಕ್ಕೆ ಸರಿಯಾಗಿ ಸೆಟ್‌ಗೆ ಬಂದಿದ್ರಂತೆ. ಆದ್ರೆ ಅವರಿಗೆ ಸಂಜೆ 5:30ರ ವರೆಗೂ ಒಂದೇ ಒಂದು ಶಾಟ್ ಇರಲಿಲ್ಲವಂತೆ. ಆದರೂ ಅವರು ಮುಖ ಗಂಟು ಹಾಕಿಕೊಳ್ಳದೆ, ಬೆಳಗ್ಗಿನಿಂದ ಸಂಜೆವರೆಗೂ ನಗು ನಗ್ತಾ ಕಾಯ್ತಾ ಕೂತಿದ್ರಂತೆ. ಶಾಶ್ವತಾ ಪ್ರಕಾರ, 12 ಶಾಟ್ ಮುಗಿಸಿ ಬಂದಾಗಲೂ ದೀಪಿಕಾ ತಾಳ್ಮೆಯಿಂದ ಇದ್ರು. ಇದನ್ನೇ ಅಲ್ವಾ ನಿಜವಾದ ವೃತ್ತಿಪರತೆ ಅನ್ನೋದು. ವಿಷಯ ಏನಪ್ಪಾ ಅಂದ್ರೆ, ಸ್ವತಃ ವೈಜಯಂತಿ ಮೂವೀಸ್ ಅವರೇ ಈ ಬಾಂಬ್ ಸಿಡಿಸಿದ್ದಾರೆ. ದೀಪಿಕಾ ಅವರನ್ನ 'ಕಲ್ಕಿ'ಯ ಮುಂದಿನ ಭಾಗದಿಂದ ಕೈಬಿಡಲಾಗಿದೆ ಅಂತ ಅಧಿಕೃತವಾಗಿ ಎಕ್ಸ್ (ಟ್ವಿಟರ್) ಮೂಲಕ ಹೇಳಿದ್ದಾರೆ.

ಮೊದಲ ಭಾಗದಲ್ಲಿ ದೀಪಿಕಾ ಕೊಡುಗೆ ದೊಡ್ಡದಿತ್ತು, ಆದ್ರೆ ಎರಡನೇ ಭಾಗಕ್ಕೆ ನಮ್ಮ ಪಾರ್ಟ್ನರ್‌ಶಿಪ್ ವರ್ಕ್ ಆಗ್ತಿಲ್ಲ, ಹಾಗಾಗಿ ನಾವು ಬೇರ್ಪಡುತ್ತಿದ್ದೇವೆ ಅಂತ ನಿರ್ಮಾಣ ಸಂಸ್ಥೆ ಹೇಳಿದೆ.

ಬಹಳ ಎಚ್ಚರಿಕೆಯಿಂದ ಈ ನಿರ್ಧಾರ ತಗೊಂಡಿದ್ದೀವಿ ಅಂತ ಹೇಳಿರೋ ಟೀಮ್, ದೀಪಿಕಾ ಫ್ಯೂಚರ್ ಪ್ರಾಜೆಕ್ಟ್ಸ್‌ಗೆ ಆಲ್ ದಿ ಬೆಸ್ಟ್ ಹೇಳಿ ಸುಮ್ಮನಾಗಿದೆ.

# ಹೊಸ ಇತಿಹಾಸ ನಿರ್ಮಿಸಿದ ಸೌತ್ ಆಫ್ರಿಕಾ

ಭಾರತದಲ್ಲಿ ಸೌತ್ ಆಫ್ರಿಕಾ ತಂಡವು ಹೊಸ ಇತಿಹಾಸ ನಿರ್ಮಿಸಿದೆ. ಅದು ಕೂಡ ಕಳೆದ 93 ವರ್ಷಗಳಿಂದ ತವರಿನಲ್ಲಿ ಟೀಮ್ ಇಂಡಿಯಾ ಮೆರೆದ ಪ್ರಾಬಲ್ಯವನ್ನು ಕೊನೆಗಾಣಿಸುವ ಮೂಲಕ. ಅಂದರೆ ಇದೇ ಮೊದಲ ಬಾರಿಗೆ ತಂಡವೊಂದು ಟೀಮ್ ಇಂಡಿಯಾಗೆ 548 ರನ್‌ಗಳ ಗುರಿ ನೀಡಿದೆ.



93 ವರ್ಷಗಳ ಟೆಸ್ಟ್ ಇತಿಹಾಸದಲ್ಲಿ ಟೀಮ್ ಇಂಡಿಯಾಗೆ ಯಾವತ್ತೂ ತವರಿನಲ್ಲಿ ನಾಲ್ಕನೇ ಇನಿಂಗ್ಸ್‌ನಲ್ಲಿ 545+ ರನ್‌ಗಳ ಗುರಿ ಪಡೆದೇ ಇರಲಿಲ್ಲ. ಈ ಬಾರಿ ಭಾರತೀಯ ಬೌಲರ್‌ಗಳ ಬೆಂಡೆತ್ತುವ ಮೂಲಕ ಸೌತ್ ಆಫ್ರಿಕಾ ಪಡೆ ಆಸ್ಟ್ರೇಲಿಯಾದ ದಾಖಲೆ ಮುರಿದು ಹೊಸ ಇತಿಹಾಸ ನಿರ್ಮಿಸಿದೆ. ಇದಕ್ಕೂ ಮುನ್ನ 2004 ರಲ್ಲಿ ನಾಗ್ಪುರದಲ್ಲಿ ನಡೆದ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡವು ಟೀಮ್ ಇಂಡಿಯಾಗೆ 542 ರನ್‌ಗಳ ಗುರಿ ನೀಡಿತ್ತು. ಇದು ತವರಿನಲ್ಲಿ ತಂಡವೊಂದು ನಾಲ್ಕನೇ ಇನಿಂಗ್ಸ್‌ನಲ್ಲಿ ನೀಡಿದ ಗರಿಷ್ಠ ಗುರಿಯಾಗಿತ್ತು.

ಇದೀಗ ಬರೋಬ್ಬರಿ 21 ವರ್ಷಗಳ ಸೌತ್ ಆಫ್ರಿಕಾ ತಂಡ ಈ ದಾಖಲೆಯನ್ನು ಮುರಿದಿದೆ. ಮೊದಲ ಇನಿಂಗ್ಸ್‌ನಲ್ಲಿ 288 ರನ್‌ಗಳ ಮುನ್ನಡೆ ಪಡೆದಿದ್ದ ಸೌತ್ ಆಫ್ರಿಕಾ ತಂಡವು ದ್ವಿತೀಯ ಇನಿಂಗ್ಸ್‌ನಲ್ಲಿ ಬರೋಬ್ಬರಿ 260 ರನ್ ಕಲೆಹಾಕಿದೆ. ಈ ಮೂಲಕ ಭಾರತದಲ್ಲಿ ನಾಲ್ಕನೇ ಇನಿಂಗ್ಸ್‌ನಲ್ಲಿ ಅತ್ಯಧಿಕ ರನ್‌ಗಳ ಟಾರ್ಗೆಟ್ (548) ನೀಡಿದ ದಾಖಲೆಯೊಂದನ್ನು ಸೌತ್ ಆಫ್ರಿಕಾ ತಂಡ ನಿರ್ಮಿಸಿದೆ.

# ನವೆಂಬರ್ 30ರಂದು ಇತಿಹಾಸ ಸೃಷ್ಟಿಸಲಿದ್ದಾರೆ

ಭಾರತ-ಸೌತ್ ಆಫ್ರಿಕಾ ನಡುವಣ ಟೆಸ್ಟ್ ಸರಣಿ ಮುಕ್ತಾಯದ ಬೆನ್ನಲ್ಲೇ ಏಕದಿನ ಸರಣಿ ಶುರುವಾಗಲಿದೆ. ನವೆಂಬರ್ 30 ರಂದು ಆರಂಭವಾಗಲಿರುವ ಈ ಸರಣಿಯ ಮೊದಲ ಪಂದ್ಯದಲ್ಲೇ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಹೊಸ ಇತಿಹಾಸ ಸೃಷ್ಟಿಸಲಿದ್ದಾರೆ.

ನವೆಂಬರ್ 30 ರಂದು ರಾಂಚಿಯಲ್ಲಿ ನಡೆಯಲಿರುವ ಸೌತ್ ಆಫ್ರಿಕಾ ವಿರುದ್ಧದ ಪಂದ್ಯದಲ್ಲಿ ರೋಹಿತ್ ಶರ್ಮಾ ಹಾಗೂ ವಿರಾಟ್ ಕಣಕ್ಕಿಳಿದರೆ, ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ಪಂದ್ಯಗಳನ್ನಾಡಿದ ಜೋಡಿ ಎಂಬ ವಿಶ್ವ ದಾಖಲೆ ರೋಹಿತ್, ವಿರಾಟ್ ಹೆಸರಿಗೆ ಸೇರ್ಪಡೆಯಾಗಲಿದೆ.

ಸದ್ಯ ಈ ದಾಖಲೆ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಹಾಗೂ ದಿ



ಕೊಹ್ಲಿ, ರೋಹಿತ್ ಇತಿಹಾಸ ಬರೆಯುವ ಹೊಸ್ತಿಲಲ್ಲಿ

ವಾಲ್ ಖ್ಯಾತಿಯ ರಾಹುಲ್ ದ್ರಾವಿಡ್ ಹೆಸರಿನಲ್ಲಿದೆ. ಸಚಿನ್-ರಾಹುಲ್ ಜೋಡಿಯು ಜೊತೆಯಾಗಿ 391 ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ್ದಾರೆ.

ಈ ಮೂಲಕ ಇಂಟರ್‌ನ್ಯಾಷನಲ್ ಕ್ರಿಕೆಟ್‌ನಲ್ಲಿ ಜೊತೆಯಾಗಿ ಅತೀ ಹೆಚ್ಚು ಪಂದ್ಯಗಳನ್ನಾಡಿದ ವಿಶ್ವ ದಾಖಲೆ ನಿರ್ಮಿಸಿದ್ದಾರೆ.


ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದ ಮೂಲಕ ಸಚಿನ್ ತೆಂಡೂಲ್ಕರ್ ಹಾಗೂ ರಾಹುಲ್ ದ್ರಾವಿಡ್ ಅವರ 391 ಅಂತಾರಾಷ್ಟ್ರೀಯ ಪಂದ್ಯಗಳ ದಾಖಲೆಯನ್ನು ಸರಿಗಟ್ಟಿರುವ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಇದೀಗ ಹೊಸ ಇತಿಹಾಸ ಬರೆಯುವ ಹೊಸ್ತಿಲಲ್ಲಿದ್ದಾರೆ.

ಅದರಂತೆ ನವೆಂಬರ್ 30 ರಂದು ಸೌತ್ ಆಫ್ರಿಕಾ ವಿರುದ್ಧ ಕಣಕ್ಕಿಳಿಯುವ ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಜೊತೆಯಾಗಿ ಅತೀ ಹೆಚ್ಚು ಪಂದ್ಯಗಳನ್ನಾಡಿದ ಜೋಡಿ ಎಂಬ ವಿಶ್ವ ದಾಖಲೆಯನ್ನು ರೋಹಿತ್ ಶರ್ಮಾ ಹಾಗೂ ವಿರಾಟ್ ತಮ್ಮದಾಗಿಸಿಕೊಳ್ಳಲಿದ್ದಾರೆ. ಅಷ್ಟೇ ಅಲ್ಲದೆ ಮುಂಬರುವ ಸರಣಿಗಳ ಮೂಲಕ ಇಂಟರ್‌ನ್ಯಾಷನಲ್ ಕ್ರಿಕೆಟ್‌ನಲ್ಲಿ ಜೊತೆಯಾಗಿ 400 ಪಂದ್ಯಗಳನ್ನಾಡಿದ ವಿಶೇಷ ದಾಖಲೆ ಬರೆಯುವ ಅವಕಾಶ ಕೂಡ ರೋ-ಕೊ ಜೋಡಿ ಮುಂದಿದೆ.

# ವಿರಾಟ್ ಕೊಹ್ಲಿಯ ಮತ್ತೊಂದು ವಿಶ್ವ ದಾಖಲೆಯನ್ನ ಸರಿಗಟ್ಟಿದ ಆಝಂ

ಟಿ20 ಕ್ರಿಕೆಟ್‌ನಲ್ಲಿ ಬಾಬರ್ ಆಝಂ ಅವರ ದಾಖಲೆಗಳ ನಾಗಾಲೋಟ ಮುಂದುವರೆದಿದೆ. ಕೆಲ ದಿನಗಳ ಹಿಂದೆಯಷ್ಟೇ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ 50+ ಸ್ಕೋರ್‌ಗಳಿಸಿದ ವಿರಾಟ್ ಕೊಹ್ಲಿಯ ದಾಖಲೆ ಮುರಿದಿದ್ದ ಬಾಬರ್ ಇದೀಗ ಮತ್ತೊಂದು ವಿಶ್ವ ದಾಖಲೆಯನ್ನು ಸರಿಗಟ್ಟಿದ್ದಾರೆ. ರಾವಲ್ಪಿಂಡಿಯಲ್ಲಿ ನಡೆದ ಝಿಂಬಾಬ್ವೆ ವಿರುದ್ಧದ ಪಂದ್ಯದಲ್ಲಿ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಬಾಬರ್ ಆಝಂ 52 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 7 ಫೋರ್‌ಗಳೊಂದಿಗೆ 74 ರನ್ ಬಾರಿಸಿದ್ದಾರೆ. ಈ ಅರ್ಧಶತಕದೊಂದಿಗೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ಹಾಫ್ ಸೆಂಚುರಿ ಬಾರಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಬಾಬರ್ ಅಗ್ರಸ್ಥಾನಕ್ಕೇರಿದ್ದಾರೆ. ಅದು ಕೂಡ ಕೊಹ್ಲಿಯ ವಿಶ್ವ ದಾಖಲೆಯನ್ನು ಸರಿಗಟ್ಟುವ ಮೂಲಕ ಎಂಬುದು ವಿಶೇಷ.

ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ಅರ್ಧಶತಕ ಬಾರಿಸಿದ ವಿಶ್ವ ದಾಖಲೆ ವಿರಾಟ್ ಕೊಹ್ಲಿಯ ಹೆಸರಿನಲ್ಲಿದೆ. ಕಿಂಗ್ ಕೊಹ್ಲಿ 117 ಟಿ20 ಇನಿಂಗ್ಸ್‌ಗಳ ಮೂಲಕ 38 ಅರ್ಧಶತಗಳನ್ನು ಬಾರಿಸಿದ್ದಾರೆ. ಈ ಮೂಲಕ ಟಿ20 ಇಂಟರ್‌ನ್ಯಾಷನಲ್ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ಹಾಫ್ ಸೆಂಚುರಿ ಬಾರಿಸಿದ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದೀಗ ಈ ದಾಖಲೆಯನ್ನು ಬಾಬರ್ ಆಝಂ ಸರಿಗಟ್ಟಿದ್ದಾರೆ, ಪಾಕಿಸ್ತಾನ್ ಪರ ಈವರೆಗೆ 127 ಟಿ20 ಇನಿಂಗ್ಸ್ ಆಡಿರುವ ಬಾಬರ್ ಆಝಂ ಒಟ್ಟು 38 ಹಾಫ್ ಸೆಂಚುರಿಗಳನ್ನು ಬಾರಿಸಿದ್ದಾರೆ. ಈ ಮೂಲಕ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ಅರ್ಧಶತಕ ಬಾರಿಸಿದ ವಿರಾಟ್ ಕೊಹ್ಲಿಯ ವಿಶ್ವ ದಾಖಲೆಯನ್ನು ಸರಿಗಟ್ಟಿದ್ದಾರೆ. ಅಷ್ಟೇ ಅಲ್ಲದೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ರನ್‌ಗಳಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲೂ ಬಾಬರ್ ಆಝಂ ಅಗ್ರಸ್ಥಾನದಲ್ಲಿದ್ದಾರೆ. ಈವರೆಗೆ 127 ಇನಿಂಗ್ಸ್ ಆಡಿರುವ ಬಾಬರ್ 3 ಶತಕ ಹಾಗೂ 38 ಅರ್ಧಶತಕಗಳೊಂದಿಗೆ 4392 ರನ್ ಗಳಿಸಿದ್ದಾರೆ.



# ಟೀಮ್ ಇಂಡಿಯಾ ಗೆಲ್ಲಲು ಏನು ಮಾಡಬೇಕು

ಗುವಾಹಟಿಯ ಬರ್ಸಪಾರ ಸ್ಟೇಡಿಯಂನಲ್ಲಿ ನಡೆಯುತ್ತಿರುವ ದ್ವಿತೀಯ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಸೌತ್ ಆಫ್ರಿಕಾ ತಂಡವು 489 ರನ್ ಕಲೆಹಾಕಿದರೆ, ಟೀಮ್ ಇಂಡಿಯಾ ಕೇವಲ 201 ರನ್‌ಗಳಿಸಿ ಆಲೌಟ್ ಆಗಿದೆ. ಇದೀಗ 288 ರನ್‌ಗಳ ಮುನ್ನಡೆಯೊಂದಿಗೆ ಸೌತ್ ಆಫ್ರಿಕಾ ತಂಡ ದ್ವಿತೀಯ ಇನಿಂಗ್ಸ್ ಆರಂಭಿಸಿದೆ.

ಸೌತ್ ಆಫ್ರಿಕಾ ವಿರುದ್ಧ ಗೆಲ್ಲಲು ಟೀಮ್ ಇಂಡಿಯಾ ಏನು ಮಾಡಬೇಕು

ಭಾರತ ಮತ್ತು ಸೌತ್ ಆಫ್ರಿಕಾ ನಡುವಣ ದ್ವಿತೀಯ ಟೆಸ್ಟ್ ಪಂದ್ಯವು ನಾಲ್ಕನೇ ದಿನದಾಟಕ್ಕೆ ಕಾಲಿಟ್ಟಿದೆ. ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 288 ರನ್‌ಗಳ ಮುನ್ನಡೆ ಹೊಂದಿರುವ ಸೌತ್ ಆಫ್ರಿಕಾ ತಂಡವು ಇಡೀ ಪಂದ್ಯದ ಮೇಲೆ ಹಿಡಿತ ಸಾಧಿಸಿದೆ. ಅದರಲ್ಲೂ ಫಾಲೋಆನ್ ಹೇರದೆ ಪಂದ್ಯವನ್ನು ಡ್ರಾನತ್ತ ಕೊಂಡೊಯ್ಯಲು ಕೂಡ ಪ್ಲ್ಯಾನ್ ರೂಪಿಸಲಾಗಿದೆ.



ಅಂದರೆ ಟೀಮ್ ಇಂಡಿಯಾ ಮೇಲೆ ಫಾಲೋಆನ್ ಹೇರದೇ ಸೌತ್ ಆಫ್ರಿಕಾ ತಂಡವು ದ್ವಿತೀಯ ಇನಿಂಗ್ಸ್ ಆರಂಭಿಸಿದೆ. ಅದರಂತೆ ನಾಲ್ಕನೇ ದಿನದಾಟದಲ್ಲಿ ಸೌತ್ ಆಫ್ರಿಕಾ ತಂಡ ಕನಿಷ್ಠ 212 ರನ್ ಕಲೆಹಾಕಿದರೂ ಒಟ್ಟು ಸ್ಕೋರ್ 500 ಆಗಲಿದೆ. ಈ ಮೊತ್ತವನ್ನು ಭಾರತ ತಂಡ ಕೊನೆಯ ಇನಿಂಗ್ಸ್‌ನಲ್ಲಿ ಚೇಸ್ ಮಾಡಬೇಕಾಗಿ ಬರಬಹುದು. ಆದರೆ 500 ರನ್‌ಗಳನ್ನು ಚೇಸ್ ಮಾಡಿ ಗೆಲ್ಲುವುದು ಅಸಾಧ್ಯ.

ಹೀಗಾಗಿ ಈ ಪಂದ್ಯವು ಡ್ರಾನಲ್ಲಿ ಅಂತ್ಯಗೊಳ್ಳುವ ಸಾಧ್ಯತೆಯೇ ಹೆಚ್ಚು. ಒಂದು ವೇಳೆ ಮ್ಯಾಚ್ ಡ್ರಾ ಆದರೆ ಸೌತ್ ಆಫ್ರಿಕಾ ತಂಡ 1-0 ಅಂತರದಿಂದ ಸರಣಿ ಗೆಲ್ಲಲಿದೆ. ಏಕೆಂದರೆ ಎರಡು ಪಂದ್ಯಗಳ ಸರಣಿಯ ಮೊದಲ ಮ್ಯಾಚ್‌ನಲ್ಲಿ ಸೌತ್ ಆಫ್ರಿಕಾ ತಂಡ ಗೆಲುವು ದಾಖಲಿಸಿದೆ. ಹೀಗಾಗಿ ದ್ವಿತೀಯ ಟೆಸ್ಟ್ ಪಂದ್ಯವು ಡ್ರಾನಲ್ಲಿ ಕೊನೆಗೊಂಡರೆ ಸರಣಿ ಸೌತ್ ಆಫ್ರಿಕಾ ಪಾಲಾಗಲಿದೆ. ಅಂದರೆ ಸರಣಿಯನ್ನು ಸಮಬಲದಲ್ಲಿ ಅಂತ್ಯಗೊಳಿಸಲು ಈ ಮ್ಯಾಚ್‌ನಲ್ಲಿ ಟೀಮ್ ಇಂಡಿಯಾ ಗೆಲ್ಲಲೇಬೇಕು.

# ಒಂದೇ ಓವರ್‌ನಲ್ಲಿ ಗೆಲ್ಲಲು ಸಾಧ್ಯವಿಲ್ಲ

ಗುವಾಹಟಿಯಲ್ಲಿ ನಡೆಯುತ್ತಿರುವ ಸೌತ್ ಆಫ್ರಿಕಾ ವಿರುದ್ಧದ 2ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ ಅತ್ಯಂತ ಕಳಪೆ ಬ್ಯಾಟಿಂಗ್ ಪ್ರದರ್ಶಿಸಿದೆ.



ಅದರಲ್ಲೂ ತಂಡದ ನಾಯಕ ರಿಷಭ್ ಪಂತ್ ಆಕ್ರಮಣಕಾರಿ ಹೊಡೆತಕ್ಕೆ ಮುಂದಾಗಿ ವಿಕೆಟ್ ಕೈಚೆಲ್ಲಿದ್ದರು. ಪಂತ್ ಅವರ ಈ ನಡೆಯನ್ನು ಸೌತ್ ಆಫ್ರಿಕಾದ ಮಾಜಿ ವೇಗಿ ಡೇಲ್ ಸ್ಟೈನ್ ಟೀಕಿಸಿದ್ದಾರೆ.

ರಿಷಭ್ ಪಂತ್ ಅವರದ್ದು ಬುದ್ಧಿಯಿಲ್ಲದ ಆಟ. ಕೇವಲ ಒಂದೇ ಓವರ್‌ನಲ್ಲಿ ಟೆಸ್ಟ್ ಗೆಲ್ಲಲು ಸಾಧ್ಯವಿಲ್ಲ ಎಂಬುದನ್ನು ಅವರು ಅರಿತುಕೊಳ್ಳಬೇಕು. ಟೆಸ್ಟ್ ಪಂದ್ಯವೆಂದರೆ ಕೇವಲ ಹೊಡಿಬಡಿ ಆಟವಲ್ಲ. ಪರಿಸ್ಥಿತಿಗೆ ತಕ್ಕಂತೆ ಕ್ರೀಸ್ ಕಚ್ಚಿ ನಿಂತು ಆಡಬೇಕಾಗುತ್ತದೆ ಎಂದು ಸ್ಟೈಕ್ ಕ್ಲಾಸ್ ತೆಗೆದುಕೊಂಡಿದ್ದಾರೆ. ಇನ್ನು ಈ ಪಂದ್ಯದ ವೇಳೆ ವೀಕ್ಷಕ ವಿವರಣೆಗಾರರಾಗಿ ಕಾಣಿಸಿಕೊಂಡ ಅನಿಲ್ ಕುಂಬ್ಳೆ ಕೂಡ ಇದೇ ಅಭಿಪ್ರಾಯವನ್ನು ಮುಂದಿಟ್ಟಿದ್ದಾರೆ.

ಪಂತ್ ಕ್ರೀಸ್‌ನಲ್ಲಿ ಇದ್ದಷ್ಟು ಸಮಯ ಸೌತ್ ಆಫ್ರಿಕಾ ಬೌಲರ್‌ಗಳು ಒತ್ತಡದಲ್ಲಿ ಇರುತ್ತಿದ್ದರು. ಹೀಗಾಗಿ ಪರಿಸ್ಥಿತಿಗೆ ತಕ್ಕಂತೆ ಬ್ಯಾಟಿಂಗ್ ಮಾಡಬೇಕಾಗುತ್ತದೆ ಎಂದಿದ್ದಾರೆ. ಒಟ್ಟಿನಲ್ಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ಆಕ್ರಮಣಕಾರಿ ಆಟದಿಂದಲೇ ಯಶಸ್ಸು ಸಾಧಿಸಬಹುದು ಎಂದು ಹೊರಟಿದ್ದ ರಿಷಭ್ ಪಂತ್ ಅವರನ್ನು ಮಾರ್ಕೊ ಯಾನ್ಸೆನ್ ಕೇವಲ 7 ರನ್‌ಗೆ ಔಟ್ ಮಾಡಿದ್ದಾರೆ. ಪರಿಣಾಮ ಮೊದಲ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ ಕೇವಲ 201 ರನ್‌ಗಳಿಗೆ ಆಲೌಟ್ ಆಗಿ 288 ರನ್‌ಗಳ ಹಿನ್ನಡೆ ಅನುಭವಿಸಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966